ಸಂಪುಟ: 14 Volume ಸಂಚಿಕೆ: 92 Issue ಪುಟಗಳು 08 Pages ಬುಧವಾರ 15 ಜುಲೈ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನಿರ್ಭಯವೂ ನಿಷ್ಪಕ್ಷಪಾತವೂ ಆದ ಜಗತ್ತಿನ ಅನ್ವೇಷಣೆಯೇ ವಿಜ್ಞಾನ.

–ಸಿ.ವಿ.ರಾಮನ್

## ರಾಮಚಂದ್ರ ಗೌಡರ ಆತ್ಮಕ್ಕೆ ಶಾಂತಿ ಲಭಿಸಲಿ: ವಿಜಯೇಂದ್ರ

**ಬೆಂಗಳೂರು:** ಬಿಜೆಪಿಯ ಹಿರಿಯ ಮುಖಂಡ ಹಾಗೂ ಕರ್ನಾಟಕ ಸರ್ಕಾರದ ಮಾಜಿ ವೈದ್ಯಕೀಯ ಶಿಕ್ಷಣ ಸಚಿವ ಹಾಗೂ ವಿಧಾನ ಪರಿಷತ್ತಿನ ಮಾಜಿ ಸದಸ್ಯ ರಾಮಚಂದ್ರ ಗೌಡರ ನಿಧನಕ್ಕೆ ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತೀವ್ರ ಸಂತಾಪ ಸೂಚಿಸಿದ್ದಾರೆ. ಅವರು ನಿಧನರಾದ ಸುದ್ದಿ ತಿಳಿದು ಅತೀವ ದುಃಖವಾಗಿದೆ ಎಂದು ತಿಳಿಸಿದ್ದಾರೆ. ರಾಮಚಂದ್ರ ಗೌಡ ಅವರ ಆತ್ಮಕ್ಕೆ ದೇವರು ಸದ್ಗತಿಯನ್ನು ಕರುಣಿಸಲಿ. ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ಹಾಗೂ ಅಭಿಮಾನಿಗಳಿಗೆ ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಹೇಳಿದ್ದಾರೆ.



ನಿಧನರಾದ ಮಾಜಿ ಸಚಿವ ರಾಮಚಂದ್ರಗೌಡರ ಅಂತ್ಯಕ್ರಿಯೆ ಸರಕಾರಿ ಗೌರವಗಳೊಂದಿಗೆ ಬೆಂಗಳೂರಿನ ಕಾಮಕ್ಷಿಪಾಳ್ಯದ ಸ್ವಂತ ಜಮೀನಿನಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರ ಸಮಕ್ಷಮದಲ್ಲಿ ಮಂಗಳವಾರ ಸಂಜೆ ನೆರವೇರಿತು. ಸರಕಾರಿ ಗೌರವ ಪ್ರದಾನದ ಭಾಗವಾಗಿ ಸಿಎಂ ಅವರು ರಾಮಚಂದ್ರಗೌಡರ ಪತ್ನಿ ಶ್ರೀಮತಿ ಯಶೋಧಾ ಅವರಿಗೆ ರಾಷ್ಟ್ರಧ್ವಜ ಹಸ್ತಾಂತರಿಸಿದರು.

## ರಾಮಚಂದ್ರೇಗೌಡರ ನಿಧನಕ್ಕೆ ಸಚಿವ ರಾಮಲಿಂಗಾರೆಡ್ಡಿ ಸಂತಾಪ

**ಬೆಂಗಳೂರು:** ಹಿರಿಯ ಸಮಾಜಸೇವಕ ಹಾಗೂ ಜನಪರ ವ್ಯಕ್ತಿತ್ವದ ರಾಮಚಂದ್ರೇಗೌಡ ಅವರ ನಿಧನಕ್ಕೆ ರಾಜ್ಯದ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ತಮ್ಮ ಸಂತಾಪ ಸಂದೇಶದಲ್ಲಿ ಮಾತನಾಡಿದ ಸಚಿವರು, ರಾಮಚಂದ್ರೇಗೌಡ ಅವರು ಸಮಾಜದ ಅಭಿವೃದ್ಧಿ ಹಾಗೂ ಸಾರ್ವಜನಿಕ ಸೇವೆಯಲ್ಲಿ ಸಲ್ಲಿಸಿದ ಕೊಡುಗೆ ಸದಾ ಸ್ಮರಣೀಯವಾಗಿದೆ. ಅವರ ಅಗಲಿಕೆಯಿಂದವ ಸಮಾಜಕ್ಕೆ ತುಂಬಲಾರದ ನಷ್ಟ ಉಂಟಾಗಿದೆ ಎಂದು ಹೇಳಿದರು. ಭಗವಂತನು ದಿವಂಗತ ರಾಮಚಂದ್ರೇಗೌಡ ಅವರ ಆತ್ಮಕ್ಕೆ ಚಿರಶಾಂತಿ ನೀಡಲಿ ಹಾಗೂ ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಕುಟುಂಬದ ಸದಸ್ಯರು, ಬಂಧು–ಬಳಗ ಹಾಗೂ ಅಭಿಮಾನಿಗಳಿಗೆ ಕರುಣಿಸಲಿ ಎಂದು ಸಚಿವ ರಾಮಲಿಂಗಾರೆಡ್ಡಿ ಪ್ರಾರ್ಥಿಸಿದರು.

## ಲೋಕ ಅದಾಲತ್‌ನಲ್ಲಿ 74,056 ಇತ್ಯರ್ಥ

• ಮಲ್ಲಮ್ಮ ನುಡಿ ವಾರ್ತೆ ಬೀದರ್


ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ನಿರ್ದೇಶದಂತೆ ಜುಲೈ. 11 ರಂದು ಹಮ್ಮಿಕೊಳ್ಳಲಾದ ರಾಷ್ಟ್ರೀಯ ಬೃಹತ್ ಲೋಕ ಅದಾಲತನಲ್ಲಿ ಜಿಲ್ಲೆಯಾದ್ಯಂತ ಒಟ್ಟು 74,056 ಪ್ರಕರಣಗಳನ್ನು ಇತ್ಯರ್ಥಪಡಿಸಿ ರೂ.43,28,36,872 ಗಳನ್ನು ಪರಿಹಾರವನ್ನು ಕಕ್ಷಿದಾರರಿಗೆ ಒದಗಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಎಸ್. ಬಿ. ರಹಮಾನ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ರಾಘವೇಂದ್ರ ಉಪಾಧ್ಯೆ ಹೇಳಿದರು.

ಅವರು ನಗರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿ ಸಭಾಂಗಣ ಕರೆದ ಪತ್ರಿಕಾಗೋಷ್ಠಿಯಲ್ಲಿ ಜಂಟಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು. ಇದರಲ್ಲಿ



ಜಿಲ್ಲೆಯ ಎಲ್ಲಾ ನ್ಯಾಯಾಲಯದಲ್ಲಿ ಬಾಕಿ ಇರುವ 9416 ಪ್ರಕರಣಗಳನ್ನು ಬಗೆಹರಿಸಿ 13,57,57,791 ರೂ. ಗಳನ್ನು ಹಾಗೂ 64,640 ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಿ 29,70,79,081 ರೂ. ಗಳನ್ನು ಕಕ್ಷಿದಾರರಿಗೆ ಪರಿಹಾರ ಒದಗಿಸಲಾಗಿದೆ. ಜೊತೆಗೆ 10 ಹಿರಿಯ ನಾಗರಿಕರ ಪ್ರಕರಣಳನ್ನು ಬಗೆಹರಿಸಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರ ನ್ಯಾಯಾಲಯದಲ್ಲಿ 92,00,000 ರೂಪಾಯಿಗಳ ಒಂದು ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ಎಂದರು.

## SIRಗೆ ನೋಂದಣಿ ಮಾಡಿಸಿಕೊಳ್ಳಿ



• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದ ಎಲ್ಲ ಅರ್ಹ ನಾಗರಿಕರು ಎಸ್‌ಐಆರ್ (SIR) ನೋಂದಣಿ ಪ್ರಕ್ರಿಯೆಯಲ್ಲಿ ಕಡ್ಡಾಯವಾಗಿ ಭಾಗವಹಿಸಿ ತಮ್ಮ ನೋಂದಣಿಯನ್ನು ಪೂರ್ಣಗೊಳಿಸಿಕೊಳ್ಳಬೇಕು ಎಂದು ರಾಜ್ಯದ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಕರೆ ನೀಡಿದರು.

ಮಲ್ಲಮ್ಮನುಡಿ ಪತ್ರಿಕೆ ಜೊತೆ ಮಾತನಾಡಿದ ಅವರು, ಸರ್ಕಾರದ ವಿವಿಧ ಯೋಜನೆಗಳು ಮತ್ತು ಸೇವೆಗಳ ಪ್ರಯೋಜನವನ್ನು ಸಮರ್ಪಕವಾಗಿ ಪಡೆಯಲು ಎಸ್‌ಐಆರ್ ನೋಂದಣಿ ಮಹತ್ವದ್ದಾಗಿದೆ. ಆದ್ದರಿಂದ ಯಾವುದೇ ಗೊಂದಲಕ್ಕೆ ಒಳಗಾಗದೆ, ಅಗತ್ಯ ದಾಖಲೆಗಳೊಂದಿಗೆ ನಿಗದಿತ ಅವಧಿಯೊಳಗೆ ನೋಂದಣಿ ಮಾಡಿಸಿಕೊಳ್ಳುವಂತೆ ಸಾರ್ವಜನಿಕರಿಗೆ ಮನವಿ ಮಾಡಿದರು. ನೋಂದಣಿ ಪ್ರಕ್ರಿಯೆಯಲ್ಲಿ ಯಾವುದೇ ತೊಂದರೆ ಎದುರಾದರೆ ಸಂಬಂಧಿತ ಅಧಿಕಾರಿಗಳನ್ನು ಸಂಪರ್ಕಿಸಿ ಸಮಸ್ಯೆ ಬಗೆಹರಿಸಿಕೊಳ್ಳಬೇಕು. ಪ್ರತಿಯೊಬ್ಬ ಅರ್ಹ ನಾಗರಿಕರೂ ತಮ್ಮ ಹಕ್ಕುಗಳನ್ನು ಕಾಪಾಡಿಕೊಳ್ಳಲು ಹಾಗೂ ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗದಂತೆ ಎಸ್‌ಐಆರ್ ನೋಂದಣಿ ಮಾಡಿಸಿಕೊಳ್ಳುವುದು ಅಗತ್ಯ ಎಂದು ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

# ಸಚಿವ ಪದವಿಗೆ ಲಾಬಿ

### 18ಕ್ಕೆ ಸಿಎಂ ಡಿಕೆ ಶಿವಕುಮಾರ್ ಅವರು ದೆಹಲಿಗೆ | ಗಣ್ಯರ ಮನೆ ಬಾಗಿಲಿಗೆ ಆಕಾಂಕ್ಷಿಗಳು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಡಿಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆ ಹಿನ್ನೆಲೆಯಲ್ಲಿ ಆಕಾಂಕ್ಷಿಗಳ ಆಲಾಪನೆ ಜೋರಾಗಿದೆ. ಹೇಗಾದರೂ ಮಾಡಿ ಸಚಿವ ಪದವಿ ಗಿಟ್ಟಿಸಲು ನಾಯಕರ ಮನೆಗೆ ಆಕಾಂಕ್ಷಿಗಳು ದಂಬಾಲು ಬೀಳುತ್ತಿದ್ದಾರೆ. ಜುಲೈ 18 ಕ್ಕೆ ಸಿಎಂ ಡಿಕೆ ಶಿವಕುಮಾರ್ ಅವರು ದೆಹಲಿಗೆ ತೆರಳುವ ಸಾಧ್ಯತೆ ಇದ್ದು, ಬಳಿಕ ಹೈಕಮಾಂಡ್ ನಾಯಕರ ಜೊತೆಗೆ ಚರ್ಚೆ ನಡೆಸಿ ತೀರ್ಮಾನಕ್ಕೆ ಬರುವ ಸಾಧ್ಯತೆಯನ್ನು ತಳ್ಳಿ ಹಾಕುವಂತಿಲ್ಲ.

**ನಿವಾಸಗಳಿಗೆ ಭೇಟಿ:** ಸಂಪುಟ ವಿಸ್ತರಣೆ ಸಾಧ್ಯತೆ ಹಿನ್ನೆಲೆಯಲ್ಲಿ ಸಚಿವಾಕಾಂಕ್ಷಿಗಳಲ್ಲಿ ನಿರೀಕ್ಷೆ ತೀವ್ರಗೊಂಡಿದೆ. ಆಕಾಂಕ್ಷಿಗಳು ದೆಹಲಿ, ಸದಾಶಿವನಗರ, ಕಾವೇರಿ ನಿವಾಸಕ್ಕೆ ತೆರಳುತ್ತಿದ್ದಾರೆ. ಸಿಎಂ ಡಿಕೆ ಶಿವಕುಮಾರ್, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಮಾಜಿ ಸಿಎಂ ಸಿದ್ದರಾಮಯ್ಯ ನಿವಾಸಕ್ಕೆ ತೆರಳಿ ಲಾಬಿ ನಡೆಸುತ್ತಿದ್ದಾರೆ.

**ಅವಕಾಶಕ್ಕೆ ಮನವಿ:** ವಿಧಾನಮಂಡಲ ಅಧಿವೇಶನಕ್ಕಿಂತ 15 ದಿನಗಳ ಮೊದಲೇ ಸಂಪುಟ ವಿಸ್ತರಣೆ ಆಗುವ ಸಾಧ್ಯತೆ ಇದೆ. ಹೀಗಾಗಿ ಸಂಪುಟಕ್ಕೆ ಸೇರ್ಪಡೆಗೊಳ್ಳಲು ಸಾಕಷ್ಟು ಪ್ರಯತ್ನ ನಡೆಸಲಾಗುತ್ತಿದೆ. ಸಿಎಂ ಡಿಕೆ ಶಿವಕುಮಾರ್, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಮಾಜಿ ಸಿಎಂ ಸಿದ್ದರಾಮಯ್ಯ ಅವರ ನಿವಾಸಕ್ಕೆ ಆಕಾಂಕ್ಷಿಗಳು ದೌಡಾಯಿಸಿ ತಮಗೆ ಅವಕಾಶ ನೀಡಬೇಕು ಎಂದು ಮನವಿ ಮಾಡುತ್ತಿದ್ದಾರೆ.



### ಪದವಿಗೆ ಮಾನದಂಡ..?

ಪ್ರಾಂತ್ಯ, ಪಕ್ಷ ಸೇವೆ, ಜಾತಿ, ಹಿರಿತನ, ಸಂಘಟನೆ, ಜಿಲ್ಲೆ ಮುಂತಾದ ಆಧಾರದಲ್ಲಿ ಸಚಿವ ಸ್ಥಾನಕ್ಕೆ ಪ್ರಯತ್ನಗಳು ನಡೆಯುತ್ತಿದೆ. ಆದರೆ ಯಾವ ಮಾನದಂಡದಲ್ಲಿ ಸಂಪುಟದಲ್ಲಿ ಅವಕಾಶ ನೀಡಲಾಗುವುದು ಎಂಬುವುದು ಕುತೂಹಲಕ್ಕೆ ಕಾರಣವಾಗಿದೆ. ಹೊಸಬರಿಗೆ ಅವಕಾಶ ನೀಡಬೇಕು ಎನ್ನುವುದು ಒಂದು ವಾದವಾದರೆ ಹಿರಿಯರನ್ನೂ ಕಡೆಗಣಿಸಬಾರದು ಎನ್ನುವುದು ಇನ್ನೊಂದು ತರ್ಕವಾಗಿದೆ.

### ಮೂರಂಕಿ ಗೆಲುವಿಗೆ ಚಾನ್ಸ್?

ಮೊದಲ ಬಾರಿ ಗೆಲುವು ಸಾಧಿಸಿದವರು ಸಚಿವ ಸಂಪುಟಕ್ಕೆ ಸೇರ್ಪಡೆಯಾಗಲು ಪ್ರಯತ್ನ ನಡೆಸುತ್ತಿದ್ದಾರೆ. ಆದರೆ ಎರಡಕ್ಕಿಂತ ಹೆಚ್ಚು ಬಾರಿ ಗೆದ್ದವರಿಗೆ ಅವಕಾಶ ಸಿಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಯಾರಿಗೆಲ್ಲಾ ಅವಕಾಶ ಸಿಗಬಹುದು ಎಂಬುವುದು ಸದ್ಯದ ಕುತೂಹಲವಾಗಿದ್ದು, ಹೆಸರು ಪ್ರಕಟಿಸುವವರೆಗೂ ಯಾವುದನ್ನು ಹೀಗೆ ಎಂದು ಗೆರೆ ಕೊರೆದು ಹೇಳಲಾಗದು ಎನ್ನುತ್ತದೆ ಮೂಲ.

### ಯಾವ ಬಣಕ್ಕೆಷ್ಟು ಸ್ಥಾನ?

ಸದ್ಯ ಯಾವ ಬಣಕ್ಕೆ ಎಷ್ಟು ಸಚಿವ ಸ್ಥಾನ ಎಂಬ ಚರ್ಚೆಗಳು ನಡೆಯುತ್ತಿವೆ. ಡಿಕೆಶಿ ಬಣ, ಖರ್ಗೆ ಬಣ ಹಾಗೂ ಸಿದ್ದರಾಮಯ್ಯ ಬಣ ಇದೆ. ಆಯಾ ಶಾಸಕರು ತಮ್ಮ ನೆಚ್ಚಿನ ನಾಯಕರ ಜೊತೆಗೆ ಲಾಬಿ ನಡೆಸುತ್ತಿದ್ದಾರೆ. ಹೀಗಾಗಿ ಈ ನಾಯಕರ ಮನೆಗಳು ಚಟುವಟಿಕೆಗಳ ಕೇಂದ್ರವಾಗಿದೆ. ಈ ಎಲ್ಲಾ ರಾಜಕೀಯ ಚಟುವಟಿಕೆಗಳಿಗೆ ನಿರ್ದಿಷ್ಟ ಲೆಕ್ಕ ಇಲ್ಲದಿರುವುದು ವಿಶೇಷ.

### ಪದವಿ ಆಕಾಂಕ್ಷಿಗಳಾರು?

ಎಎಸ್ ಪೊನ್ನಣ್ಣ, ಎಸ್ ಆರ್ ಶ್ರೀನಿವಾಸ್, ಜಮೀರ್ ಅಹ್ಮದ್ ಖಾನ್, ಎಚ್ ಕೆ ಪಾಟೀಲ್, ದಿನೇಶ್ ಗುಂಡೂರಾವ್, ಅಜಯ್ ಸಿಂಗ್, ಸಂತೋಷ್ ಲಾಡ್, ಪ್ರಸಾದ್ ಅಬ್ಬಯ್ಯ, ಅಶೋಕ್ ಪಟ್ಟಣ, ಯಶವಂತ ಪಾಟೀಲ್, ಅಪ್ಪಾಜಿ ನಾಡಗೌಡ, ಶಾಂತನಗೌಡ, ಪುಟ್ಟರಂಗಶೆಟ್ಟಿ, ಸುಬ್ಬಾರೆಡ್ಡಿ, ಬಿ.ಶಿವಣ್ಣ, ಸಲೀಂಅಹ್ಮದ್, ಉಮಾಶ್ರೀ, ಪಿಎಂ ನರೇಂದ್ರಸ್ವಾಮಿ, ರಿಜ್ವಾನ್ ಅರ್ಷದ್, ಎಂ ಕೃಷ್ಣಪ್ಪ, ಶರತ್ ಬಚ್ಚೇಗೌಡ ಮುಂತಾದವರು.

## ಬಲಿಷ್ಠ ಸಂಘಟನೆಗೆ ಎಲ್ಲರೂ ಕೈಜೋಡಿಸಿ: ಮಾಜಿ ಸಚಿವ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಬಲಿಷ್ಠ ಸಂಘಟನೆಗಾಗಿ ಎಲ್ಲರೂ ಕೈಜೋಡಿಸಿ ಶ್ರಮ ವಹಿಸಬೇಕು ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಹೇಳಿದರು.

ತಾಲೂಕಿನ ಹಳ್ಳಿಖೇಡ (ಬಿ) ಪಟ್ಟಣದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಮಂಗಳವಾರ ಆಯೋಜಿಸಿದ್ದ ಎಸ್.ಐ.ಆರ್. ಕುರಿತು ಜಾಗೃತಿ ಹಾಗೂ ಕಾರ್ಯಕರ್ತರ ಸಭೆ ಉದ್ದೇಶಿಸಿ ಮಾತನಾಡಿದರು.

ವಯಕ್ತಿಕ ಪ್ರತಿಷ್ಠೆಗಾಗಿ ಬಡಿದಾಡದೇ ಪಕ್ಷದ ಬಲವರ್ಧನೆಗೆ ಪೂರಕವಾಗಿ ಪ್ರತಿಯೊಬ್ಬರೂ ಕೆಲಸ ಮಾಡಬೇಕು. ಈ ಹಿಂದೆ ನಡೆದ ತಪ್ಪುಗಳು ಮತ್ತೆ



ಮರುಕಳಿಸಬಾರದು, ಹೀಗಾಗಿ ಎಲ್ಲರೂ ತಮ್ಮ ಬೂತನಲ್ಲಿ ಓಡಾಡುವ ಮೂಲಕ ಮತದಾರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರಮಿಯ, ಕೇಶವರಾವ ತಳಘಟ್ಕರ್, ಮಾಂತಯ್ಯಾ ತೀರ್ಥಾ, ನಾಗರಾಜ ಹಿಬಾರೆ, ಮಲ್ಲಿಕಾರ್ಜುನ್ ಪ್ರಭಾ, ಅಬ್ದುಲ್ ರಜಾಕ್, ಗೌಸ್ ರಾಜಾಭಾಯ್, ಯುಸೂಫ್ ಸೌದಾಗರ, ವಿಜಯಕುಮಾರ ಶಹಾಪೂರಕರ್, ಸಂದೀಪ ಪ್ರಭಾ, ವಿಜಯಕುಮಾರ ಪೊಲೀಸ್ ಪಾಟೀಲ್, ವಿಜಯಕುಮಾರ ಜಗದಾಳೆ, ಪ್ರವೀಣ ಶಂಕೆ, ಮುಬೀನ್ ಸೌದಾಗರ, ವೀರೇಶ ರೆಡ್ಡಿ, ದೇವರಾಜ ಪ್ರಭಾ, ರಾಜಕುಮಾರ, ಚಾಂದ ಖುರೇಷಿ ರವಿರೆಡ್ಡಿ ಅಂತರೆಡ್ಡಿ ಸೇರಿ ಅನೇಕರಿದ್ದರು.

## ಅನ್ನದಾತರ ಆತ್ಮ ತೃಪ್ತಿಯ ಹಬ್ಬ ಮಣ್ಣೆತ್ತಿನ ಅಮಾವಾಸ್ಯೆ

• ರಾಮಕೃಷ್ಣ.ಸಿಡಿ, ಗಂಗಾವತಿ

ನಾಡಿನ ಗ್ರಾಮೀಣ ಭಾಗಗಳಲ್ಲಿ ವಿಶೇಷವಾಗಿ ರೈತ ಸಮುದಾಯ ಅತ್ಯಂತ ಭಕ್ತಿ, ಸಂಭ್ರಮ ಹಾಗೂ ಸಂಪ್ರದಾಯಬದ್ಧವಾಗಿ ಆಚರಿಸುವ ಹಬ್ಬಗಳಲ್ಲಿ ಮಣ್ಣೆತ್ತಿನ ಅಮಾವಾಸ್ಯೆ ಪ್ರಮುಖವಾಗಿದೆ. ಕೃಷಿ ಜೀವನದ ಅವಿಭಾಜ್ಯ ಅಂಗವಾಗಿರುವ ಎತ್ತುಗಳು ಹಾಗೂ ಭೂಮಾತೆಯ ಮೇಲಿನ ಕೃತಜ್ಞತೆಯನ್ನು ವ್ಯಕ್ತಪಡಿಸುವ ಉದ್ದೇಶದಿಂದ ಈ ಹಬ್ಬವನ್ನು ಆಚರಿಸಲಾಗುತ್ತದೆ.

**ಸುಖ ಶಾಂತಿಗಾಗಿ ಪ್ರಾರ್ಥನೆ:** ಈ ದಿನ ರೈತರು ತಮ್ಮ ಜಮೀನಿನಿಂದ ಮಣ್ಣನ್ನು ತಂದು ಪೂಜಿಸಿ, ಎತ್ತುಗಳಿಗೆ ಸ್ನಾನ ಮಾಡಿಸಿ, ಕೊಂಬುಗಳಿಗೆ ಬಣ್ಣ ಹಚ್ಚಿ, ಹೂವಿನ ಹಾರಗಳಿಂದ ಅಲಂಕರಿಸುತ್ತಾರೆ. ನಂತರ ವಿಶೇಷ ಪೂಜೆ ಸಲ್ಲಿಸಿ, ಆರತಿ ಬೆಳಗಿ, ಸಿಹಿ ತಿನಿಸುಗಳನ್ನು ನೈವೇದ್ಯವಾಗಿ ಅರ್ಪಿಸುತ್ತಾರೆ. ಉತ್ತಮ ಮಳೆ, ಸಮೃದ್ಧ ಬೆಳೆ ಹಾಗೂ ಕುಟುಂಬದ ಸುಖ–ಶಾಂತಿಗಾಗಿ ದೇವರಲ್ಲಿ ಪ್ರಾರ್ಥಿಸುತ್ತಾರೆ.

**ಹಬ್ಬವಲ್ಲ, ರೈತನ ಬದುಕು:** ಮಣ್ಣೆತ್ತಿನ ಅಮಾವಾಸ್ಯೆ ಕೇವಲ ಒಂದು ಹಬ್ಬವಲ್ಲ; ಅದು ರೈತರ ಬದುಕು, ಪ್ರಕೃತಿಯೊಂದಿಗೆ ಇರುವ ನಂಟು ಹಾಗೂ ಪಶುಸಂಪತ್ತಿನ ಮಹತ್ವವನ್ನು ಸಾರುವ ಸಂಸ್ಕೃತಿಯ ಪ್ರತೀಕವಾಗಿದೆ. ಇತ್ತೀಚಿನ ದಿನಗಳಲ್ಲಿ ಯುವ ಪೀಳಿಗೆಗೂ ಈ ಸಂಪ್ರದಾಯದ ಮಹತ್ವವನ್ನು ತಿಳಿಸುವ ನಿಟ್ಟಿನಲ್ಲಿ ಗ್ರಾಮಗಳಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನೂ ಆಯೋಜಿಸಲಾಗುತ್ತಿದೆ. ಈ ಹಬ್ಬದ ಮೂಲಕ ಭೂಮಾತೆ, ಪ್ರಕೃತಿ ಹಾಗೂ ಕೃಷಿಗೆ ಸಹಕರಿಸುವ ಪಶುಗಳ ಬಗ್ಗೆ ಗೌರವ ಮತ್ತು ಕೃತಜ್ಞತೆಯ ಸಂದೇಶವನ್ನು ಸಮಾಜಕ್ಕೆ ಸಾರಲಾಗುತ್ತದೆ.




### ಎಚ್ಚರ.. ಹಾನಿಕಾರಕ ಪಿಒಪಿ ಬಣ್ಣ..!

ಸ್ಥಳೀಯ ಮಣ್ಣಿನಿಂದ ಕುಂಬಾರರ ಕೈಚಳಕದಲ್ಲಿ ರೂಪುಗೊಳ್ಳುವ ಈ ಎತ್ತುಗಳನ್ನು ಪೂಜಿಸುವುದು ಸಂಪ್ರದಾಯದ ಭಾಗವಾಗಿದ್ದು, ಪರಿಸರ ಸ್ನೇಹಿಯೂ ಆಗಿದೆ. ಪೂಜೆ ನಂತರ ಅವು ಮತ್ತೆ ಪ್ರಕೃತಿಯಲ್ಲೇ ಲೀನವಾಗುವುದರಿಂದ ಪರಿಸರಕ್ಕೆ ಯಾವುದೇ ಹಾನಿ ಯಾಗುವುದಿಲ್ಲ. ಇತ್ತೀಚಿನ ವರ್ಷಗಳಲ್ಲಿ ಮಾರುಕಟ್ಟೆಯಲ್ಲಿ ಪಿಒಪಿ, ರಾಸಾಯನಿಕ ಬಣ್ಣಗಳಿಂದ ತಯಾರಿಸಿದ ಅಲಂಕಾರಿಕ ಎತ್ತುಗಳು ಲಭ್ಯ. ಆದರೆ ಇವು ಪರಿಸರಕ್ಕೆ ಹಾನಿಕಾರಕವಾಗಿದ್ದು, ಸುಲಭವಾಗಿ ಕರಗುವುದಿಲ್ಲ. ಆದ್ದರಿಂದ ಸಂಸ್ಕೃತಿ, ಪರಿಸರ ಸಂರಕ್ಷಣೆ ಮತ್ತು ಕುಂಬಾರರ ಬದುಕಿಗೆ ಬೆಂಬಲ ನೀಡುವ ದೃಷ್ಟಿಯಿಂದ ಮಣ್ಣಿನ ಎತ್ತುಗಳನ್ನೇ ಬಳಸುವುದು ಉತ್ತಮ ಎನ್ನುತ್ತಾರೆ ತಜ್ಞರು.

### ಮಣ್ಣೆತ್ತಿನ ಅಮಾವಾಸ್ಯೆ ವೈಶಿಷ್ಟ್ಯ?

ಮಣ್ಣಿನ ಎತ್ತುಗಳೇ ಶ್ರೇಷ್ಠ ? ಪಿಒಪಿ ಅಲಂಕಾರಕ್ಕಿಂತ ಪರಿಸರ ಸ್ನೇಹಿ ಸಂಪ್ರದಾಯಕ್ಕೆ ಆದ್ಯತೆ ರೈತರ ಬದುಕು, ಕೃಷಿ ಸಂಸ್ಕೃತಿ ಹಾಗೂ ಪ್ರಕೃತಿಯ ಆರಾಧನೆಯ ಸಂಕೇತವಾಗಿರುವ ಮಣ್ಣೆತ್ತಿನ ಅಮಾವಾಸ್ಯೆ ಕರ್ನಾಟಕದಾದ್ಯಂತ ಭಕ್ತಿ, ಸಂಭ್ರಮ ಹಾಗೂ ಸಂಪ್ರದಾಯಬದ್ಧವಾಗಿ ಆಚರಿಸಲಾಗುತ್ತದೆ. ಈ ದಿನ ರೈತರು ಭೂಮಾತೆ ಹಾಗೂ ಎತ್ತುಗಳನ್ನು ಪೂಜಿಸಿ ಉತ್ತಮ ಮಳೆ, ಸಮೃದ್ಧ ಬೆಳೆ ಮತ್ತು ಕುಟುಂಬದ ಕ್ಷೇಮಕ್ಕಾಗಿ ಪ್ರಾರ್ಥಿಸುತ್ತಾರೆ. ಈ ಹಬ್ಬದ ಅಂಗವಾಗಿ ಕುಂಬಾರ ಸಮುದಾಯದವರು ಮಣ್ಣಿನಿಂದ ತಯಾರಿಸುವ ಮಣ್ಣಿನ ಎತ್ತುಗಳು ವಿಶೇಷ ಮಹತ್ವ ಪಡೆದಿವೆ.

### ಸ್ಥಳೀಯ ಕಲಾವಿದರಿಗೆ ಮನ್ನಣೆ

ಮಣ್ಣಿನ ಎತ್ತುಗಳನ್ನು ಖರೀದಿಸುವುದರಿಂದ ಸ್ಥಳೀಯ ಕುಂಬಾರರ ಜೀವನೋಪಾಯಕ್ಕೂ ನೆರವಾಗುತ್ತದೆ. ಹೀಗಾಗಿ ಈ ಮಣ್ಣೆತ್ತಿನ ಅಮಾವಾಸ್ಯೆಯಂದು ಪಿಒಪಿ ಅಲಂಕಾರಿಕ ಎತ್ತುಗಳಿಗಿಂತ ಕುಂಬಾರರು ತಯಾರಿಸಿದ ಮಣ್ಣಿನ ಎತ್ತುಗಳನ್ನೇ ಪೂಜೆಗೆ ಬಳಸುವ ಮೂಲಕ ಸಂಪ್ರದಾಯ, ಪರಿಸರ ಮತ್ತು ಸ್ಥಳೀಯ ಕಲಾವಿದರನ್ನು ಉಳಿಸೋಣ ಎಂಬ ಸಂದೇಶವನ್ನು ಸಮಾಜಕ್ಕೆ ಸಾರಲಾಗುತ್ತಿದೆ.

**ಸಿಎಂ ಆಗಲು ಹೈಕಮಾಂಡ್‌ಗೆ ಏನು ಮಾತು ಕೊಟ್ಟಿದ್ದೀರೋ ಗೊತ್ತಿಲ್ಲ, ಅದಕ್ಕಾಗಿ ರೈತರ ಬದುಕು ಬಲಿ ಕೊಡಬೇಡಿ': ಡಿಕೆಶಿ ವಿರುದ್ಧ ದೇವೇಗೌಡ ವಾಗ್ದಾಳಿ**

## ರೈತರು ತಪ್ಪದ ಬೆಳೆ ವಿಮೆ ಮಾಡಿಸಿಕೊಳ್ಳಿ

ಅನಿಶ್ಚಿತ ಹವಾಮಾನ, ಅಕಾಲಿಕ ಮಳೆ, ಬರ, ನೆರೆ, ಕೀಟಬಾಧೆ ಇತ್ಯಾದಿಗಳಿಂದ ಕೃಷಿ ಸದಾ ಅಪಾಯದ ವಲಯದಲ್ಲಿದೆ. ಒಂದು ವರ್ಷದ ಪರಿಶ್ರಮ ಕೆಲವೇ ಗಂಟೆಗಳಲ್ಲಿ ನಾಶವಾಗುವ ಸಂದರ್ಭಗಳು ಹೆಚ್ಚುತ್ತಿವೆ. ಇಂತಹ ಪರಿಸ್ಥಿತಿಯಲ್ಲಿ ಬೆಳೆ ವಿಮೆ ರೈತನಿಗೆ ಭದ್ರತಾ ಜಾಲವಾಗುತ್ತದೆ. ಸರ್ಕಾರದ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಸೇರಿದಂತೆ ವಿವಿಧ ವಿಮಾ ಯೋಜನೆಗಳು ಲಭ್ಯವಿದ್ದರೂ, ಅನೇಕ ರೈತರು ಇನ್ನೂ ಅವುಗಳ ಪ್ರಯೋಜನವನ್ನು ಸಂಪೂರ್ಣವಾಗಿ ಪಡೆಯುತ್ತಿಲ್ಲ. ಆದ್ದರಿಂದ ರೈತರು ತಪ್ಪದೇ ಬೆಳೆ ವಿಮೆ ಮಾಡಿಸಿಕೊಳ್ಳುವುದು ಅತ್ಯಂತ ಅಗತ್ಯ.

## ಸಂಪಾದಕೀಯ



ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೊ: 9845028349

ಬೆಳೆ ವಿಮೆ ಕೇವಲ ನಷ್ಟದ ಪರಿಹಾರವಲ್ಲ; ಅದು ಮುಂದಿನ ಹಂಗಾಮಿಗೆ ಮತ್ತೆ ಬೀಜ, ಗೊಬ್ಬರ, ಕಾರ್ಮಿಕ ವೆಚ್ಚಗಳನ್ನು ಭರಿಸಲು ನೆರವಾಗುವ ಆರ್ಥಿಕ ಆಧಾರ. ವಿಮೆ ಇಲ್ಲದ ರೈತರು ನಷ್ಟದ ನಂತರ ಸಾಲದ ಬಲೆಗೆ ಸಿಲುಕುವ ಸಾಧ್ಯತೆ ಹೆಚ್ಚು. ಆದರೆ ವಿಮೆ ಮಾಡಿಕೊಂಡಿದ್ದರೆ ಕನಿಷ್ಠ ಭಾಗಶಃ ಪರಿಹಾರ ದೊರೆಯುತ್ತದೆ. ಇದರಿಂದ ಕೃಷಿಯಲ್ಲಿ ನಿರಂತರತೆವ ಉಳಿಯುತ್ತದೆ.

ಸರ್ಕಾರ ಮತ್ತು ಬ್ಯಾಂಕುಗಳು ವಿಮೆ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು. ಅರ್ಜಿ ಸಲ್ಲಿಕೆ, ಪ್ರೀಮಿಯಂ ಪಾವತಿ, ಹಾನಿ ಮೌಲ್ಯಮಾಪನ ಪ್ರಕ್ರಿಯೆಗಳು ಸರಳವಾಗಬೇಕು. ವಿಮಾ ಪರಿಹಾರ ವಿಳಂಬವಾಗದಂತೆ ಕ್ರಮ ಕೈಗೊಳ್ಳಬೇಕು. ರೈತರು ಸಹ ತಮ್ಮ ಬೆಳೆ, ಭೂಮಿ ಮತ್ತು ಹವಾಮಾನ ಅಪಾಯಗಳನ್ನು ಗಮನದಲ್ಲಿಟ್ಟುಕೊಂಡು ಸಮಯಕ್ಕೆ ಸರಿಯಾಗಿ ನೋಂದಣಿ ಮಾಡಿಸಿಕೊಳ್ಳಬೇಕು.

ಕೃಷಿ ಲಾಭದಾಯಕವಾಗಬೇಕಾದರೆ ಉತ್ಪಾದನೆ ಮಾತ್ರವಲ್ಲ, ಅಪಾಯ ನಿರ್ವಹಣೆಯೂ ಮುಖ್ಯ. ಬೆಳೆ ವಿಮೆ ಅದಕ್ಕೆ ಅತ್ಯುತ್ತಮ ಸಾಧನ. ಆದ್ದರಿಂದ ರೈತರು ಯಾವುದೇ ಕಾರಣಕ್ಕೂ ಇದನ್ನು ನಿರ್ಲಕ್ಷಿಸಬಾರದು.

## ಬರಪೀಡಿತ ಪ್ರದೇಶ ಘೋಷಣೆಗೆ ಯುವ ಕ್ರಾಂತಿ ಸಂಘಟನೆ ಆಗ್ರಹ

**ಬೀದರ್:** ಮುಂಗಾರು ಮಳೆ ತೀವ್ರವಾಗಿ ಕೈಕೊಟ್ಟ ಪರಿಣಾಮ ಬೀದರ ಜಿಲ್ಲೆಯ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಜಿಲ್ಲೆಯನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಿ, ರೈತರ ಸಂಪೂರ್ಣ ಕೃಷಿ ಸಾಲ ಮನ್ನಾ ಮಾಡಬೇಕು ಹಾಗೂ ಬೆಳೆ ನಷ್ಟಕ್ಕೆ ಪ್ರತಿ ಹೆಕ್ಟೇರಿಗೆ



₹50,000 ಪರಿಹಾರ ನೀಡಬೇಕು ಎಂದು ಯುವ ಕ್ರಾಂತಿ ಸಂಘಟನೆಯ ಜಿಲ್ಲಾಧ್ಯಕ್ಷ ಸಂಗಮೇಶ ಭೂರೆ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಜಿಲ್ಲೆಯ ಹಲವು ಭಾಗಗಳಲ್ಲಿ ರೈತರು ಬಿತ್ತನೆ ಮಾಡಿದ ಬೆಳೆಗಳು ಮಳೆಯ ಕೊರತೆಯಿಂದ ಒಣಗುತ್ತಿದ್ದು, ಇನ್ನೂ ಅನೇಕ ರೈತರು ಮಳೆಯ ನಿರೀಕ್ಷೆಯಲ್ಲಿ ಬಿತ್ತನೆ ಮಾಡದೆ ಕಾಯುವಂತಾಗಿದೆ. ಇದರಿಂದ ಕೃಷಿ ಚಟುವಟಿಕೆ ಸಂಪೂರ್ಣ ಕುಂಠಿತಗೊಂಡು ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ತಿಳಿಸಿದ್ದಾರೆ.

ಬೀಜ, ಗೊಬ್ಬರ, ಕೀಟನಾಶಕ ಸೇರಿದಂತೆ ಕೃಷಿ ಚಟುವಟಿಕೆಗಳಿಗಾಗಿ ರೈತರು ಸಾಲ ಮಾಡಿ ಲಕ್ಷಾಂತರ ರೂಪಾಯಿ ವೆಚ್ಚ ಮಾಡಿದ್ದರೂ ಮಳೆ ಇಲ್ಲದ ಕಾರಣ ಬೆಳೆ ನಾಶವಾಗುತ್ತಿದೆ. ಕುಟುಂಬ ನಿರ್ವಹಣೆಯೂ ದುಸ್ತರವಾಗಿದ್ದು, ಸರ್ಕಾರ ಕೂಡಲೇ ರೈತರ ನೆರವಿಗೆ ಧಾವಿಸಬೇಕಾದ ಅಗತ್ಯವಿದೆ ಎಂದು ಒತ್ತಾಯಿಸಿದ್ದಾರೆ.

ಸರ್ಕಾರ ಬೀದರ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸುವುದರೊಂದಿಗೆ ಜಿಲ್ಲೆಯ ಎಲ್ಲಾ ರೈತರ ಕೃಷಿ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು. ಬೆಳೆ ನಷ್ಟಕ್ಕೆ ಪ್ರತಿ ಹೆಕ್ಟೇರಿಗೆ ₹50 ಸಾವಿರ ಪರಿಹಾರವನ್ನು ನೇರವಾಗಿ ರೈತರ ಬ್ಯಾಂಕ್ ಖಾತೆಗೆ ಜಮಾ ಮಾಡಬೇಕು. ಜೊತೆಗೆ ಬೆಳೆ ವಿಮೆ ಪರಿಹಾರವನ್ನು ತ್ವರಿತವಾಗಿ ಬಿಡುಗಡೆ ಮಾಡುವುದು, ಬೀಜ ಹಾಗೂ ಗೊಬ್ಬರವನ್ನು ಉಚಿತವಾಗಿ ಅಥವಾ ಹೆಚ್ಚಿನ ಸಹಾಯಧನದಲ್ಲಿ ವಿತರಿಸುವುದು, ರೈತರ ವಿದ್ಯುತ್ ಬಿಲ್ ಮತ್ತು ನೀರಾವರಿ ಬಾಕಿ ಪಾವತಿಗೆ ತಾತ್ಕಾಲಿಕ ವಿನಾಯಿತಿ ನೀಡುವುದು, ಮುಂದಿನ ಬಿತ್ತನೆಗಾಗಿ ಬಡ್ಡಿರಹಿತ ಸಾಲ ಸೌಲಭ್ಯ ಕಲ್ಪಿಸುವುದು ಹಾಗೂ ತಾಲೂಕು ಮಟ್ಟದಲ್ಲಿ ಬೆಳೆ ಹಾನಿ ಸಮೀಕ್ಷೆ ನಡೆಸಿ ನೈಜ ವರದಿಯ ಆಧಾರದ ಮೇಲೆ ಪರಿಹಾರ ವಿತರಿಸಬೇಕು ಎಂದು ಆಗ್ರಹಿಸಿದ್ದಾರೆ.

## ಬರದ ಬವಣೆಯಲ್ಲಿ ಕಂಗಾಲಾದ ರೈತರು; ತಕ್ಷಣ ಬರ ಸಮೀಕ್ಷೆ ನಡೆಸಿ ಪರಿಹಾರ ಘೋಷಿಸಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆಯಲ್ಲಿ ಜೂನ್ ಹಾಗೂ ಜುಲೈ ತಿಂಗಳು ಮುಗಿಯುತ್ತಾ ಬಂದರೂ ಸಮರ್ಪಕ ಮಳೆಯಾಗದ ಹಿನ್ನಲೆಯಲ್ಲಿ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಕೂಡಲೇ ಬರ ಸಮೀಕ್ಷೆ ನಡೆಸಿ ಸರಕಾರ, ವಿಶೇಷ ಪರಿಹಾರ ಘೋಷಿಸಬೇಕು ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ನಿಕಟಪೂರ್ವ ಬಿಜೆಪಿ ಅಭ್ಯರ್ಥಿ ಬಸವರಾಜ ಕ್ಯಾವಟರ್ ಅವರು ರಾಜ್ಯ ಸರಕಾರವನ್ನು ಆಗ್ರಹಿಸಿದರು.

ಕೊಪ್ಪಳ ತಾಲೂಕಿನ ಅಳವಂಡಿ ಸಮೀಪದ ಮೂರ್ಲಾಪುರ ಗ್ರಾಮ ಸೇರಿದಂತೆ ವಿವಿಧ ಪ್ರದೇಶಗಳಿಗೆ ಬಿಜೆಪಿ ನಿಯೋಗದೊಂದಿಗೆ ಭೇಟಿ ನೀಡಿ ರೈತರ ಪರಿಸ್ಥಿತಿ ಪರಿಶೀಲಿಸಿದ ನಂತರ ಮಾತನಾಡಿದರು. ಮಳೆ ಕೊರತೆಯಿಂದ ಬೆಳೆಗಳು ಸಂಪೂರ್ಣ ಒಣಗಿ ಹೋಗಿರುವುದರಿಂದ ರೈತರು ತಾವೇ ಟ್ರ್ಯಾಕ್ಟರ್ ಮೂಲಕ ಬೆಳೆಗಳನ್ನು ಹರಗಿ ನಾಶಪಡಿಸುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ.

ಮೂರ್ಲಾಪುರದ ರೈತರೊಬ್ಬರು ತಮ್ಮ ಐದು ಎಕರೆ ಸೂರ್ಯಕಾಂತಿ ಬೆಳೆಯನ್ನು ನಾಶಪಡಿಸಿರುವ ಘಟನೆ ದುಃಖಕರವಾಗಿದ್ದು, ಇದೇ ಪರಿಸ್ಥಿತಿ ಅನೇಕ ಗ್ರಾಮಗಳ ರೈತರಿಗೆ ಎದುರಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಜಿಲ್ಲೆಯು ಬಹುತೇಕ ಕೃಷಿ ಮಳೆಯನ್ನೇ ಅವಲಂಬಿಸಿದ್ದು, ನೀರಾವರಿ ಪ್ರದೇಶಗಳಿಗೂ ತುಂಗಭದ್ರಾ ಅಣೆಕಟ್ಟಿನಿಂದ ಕಾಲುವೆಗಳಿಗೆ ನೀರು ಹರಿಸದಿರುವುದರಿಂದ ರೈತರ ಸಂಕಷ್ಟ ಮತ್ತಷ್ಟು ಹೆಚ್ಚಾಗಿದೆ ಎಂದು ಕ್ಯಾವಟರ್ ಅವರು ಬೇಸರ ವ್ಯಕ್ತಪಡಿಸಿದರು.



ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್ ಮಾತನಾಡಿ, ಮೆಕ್ಕೆಜೋಳ, ಹತ್ತಿ, ಉದ್ದು, ಹೆಸರು ಹಾಗೂ ಸೂರ್ಯಕಾಂತಿ ಬೆಳೆಗಳಿಗೆ ಪ್ರತಿ ಎಕರೆಗೆ ಕನಿಷ್ಠ 25 ಸಾವಿರಕ್ಕೂ ಅಧಿಕ ನಷ್ಟವಾಗಿದೆ. ರಾಜ್ಯ ಸರಕಾರ ಇನ್ನೂ ಬರ ಸಮೀಕ್ಷೆ ಆರಂಭಿಸದಿರುವುದು ಹಾಗೂ ಕೃಷಿ ಇಲಾಖೆಯ ನೇತೃತ್ವದ ವಿಚಾರದಲ್ಲಿ ವಿಳಂಬವಾಗಿರುವುದು ರೈತರ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಟೀಕಿಸಿದರು. ತಕ್ಷಣ ಅಧಿಕಾರಿಗಳ ಮೂಲಕ ಬರ ಸಮೀಕ್ಷೆ ನಡೆಸಿ ವಿಶೇಷ ಪರಿಹಾರ ಘೋಷಿಸಬೇಕು, ಸಹಕಾರಿ ಸಾಲಗಳನ್ನು ಸಂಪೂರ್ಣ ಮನ್ನಾ ಮಾಡಬೇಕು, ರಾಷ್ಟ್ರೀಕೃತ ಹಾಗೂ ವಾಣಿಜ್ಯ ಬ್ಯಾಂಕ್‌ಗಳ ಕೃಷಿ ಸಾಲದ ಬಡ್ಡಿಯನ್ನು ರಾಜ್ಯ ಸರ್ಕಾರವೇ ಭರಿಸಬೇಕು ಹಾಗೂ ರೈತರು ಮತ್ತು ಜಾನುವಾರುಗಳ ಹಿತದೃಷ್ಟಿಯಿಂದ ತುಂಗಭದ್ರಾ ಅಣೆಕಟ್ಟಿನಿಂದ ಕಾಲುವೆಗಳಿಗೆ ತಕ್ಷಣ ನೀರು ಹರಿಸಬೇಕು ಎಂದು ಒತ್ತಾಯಿಸಿದರು. ನಂತರ ಬಿಜೆಪಿ ತಂಡವು ಕ್ಷೇತ್ರದಾದ್ಯಂತ ಬರ ಪರಿಸ್ಥಿತಿಯ ಅಧ್ಯಯನ ನಡೆಸಿ ಶೀಘ್ರದಲ್ಲೇ ಜಿಲ್ಲಾಧಿಕಾರಿಗಳಿಗೆ ವಿಸ್ತೃತ ವರದಿ ಸಲ್ಲಿಸುವುದಾಗಿ ತಿಳಿಸಿತು.

ಈ ಸಂದರ್ಭದಲ್ಲಿ ಬಿಜೆಪಿ ಲೋಕಸಭಾ ಕ್ಷೇತ್ರದ ನಿಕಟಪೂರ್ವ ಅಭ್ಯರ್ಥಿ ಡಾ. ಬಸವರಾಜ್ ಕ್ಯಾವಟರ್, ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್, ಬಿಜೆಪಿ ಮುಖಂಡ ಮಹಾಂತೇಶ್ ಪಾಟೀಲ್ ಮೈನಹಳ್ಳಿ, ಗ್ರಾಮೀಣ ಮಂಡಲ ಅಧ್ಯಕ್ಷ ವೀರೇಶ್ ಸಜ್ಜನ್, ಮುಖಂಡ ವೆಂಕಟೇಶ್ ಹಾಲವರ್ತಿ , ಶ್ರೀನಿವಾಸ್ ಕಲಾದಗಿ, ಹನುಮಂತಪ್ಪ ಉಂಕಿ, ಬಸಣ್ಣ ಮುರ್ಲಾಪುರ್, ಅಂದಾನ ಗೌಡ ಪಾಟೀಲ್, ಸುರೇಶ್ ಚನ್ನಹಳ್ಳಿ, ಸಿದ್ದಪ್ಪ ಡಂಬಲ್, ಬಸಣ್ಣ ಸಂಗ ರೆಡ್ಡಿ , ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ರೈತರು ಉಪಸ್ಥಿತರಿದ್ದರು.

## ವೃತ್ತಿಪರ ಮೀನುಗಾರರಲ್ಲದ ಫಲಾನುಭವಿಗಳ ಆಯ್ಕೆ ರದ್ದುಪಡಿಸಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಔರಾದ ತಾಲೂಕಿನ 2024–25ನೇ ಸಾಲಿನ ಮತ್ಸ್ಯಾಶ್ರಯ ಯೋಜನೆಯಡಿ ವಸತಿ ಹಂಚಿಕೆಗಾಗಿ ವೃತ್ತಿಪರ ಮೀನುಗಾರರಲ್ಲದವರನ್ನು ಫಲಾನುಭವಿಗಳ ಪಟ್ಟಿಗೆ ಸೇರಿಸಿರುವುದಾಗಿ ಆರೋಪಿಸಿ, ಆ ಪಟ್ಟಿಯನ್ನು ಕೂಡಲೇ ರದ್ದುಪಡಿಸಿ ಅರ್ಹ ವೃತ್ತಿಪರ ಮೀನುಗಾರರಿಗೆ ಮನೆಗಳನ್ನು ಹಂಚಿಕೆ ಮಾಡಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ) ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಔರಾದ (ಬಿ) ತಾಲೂಕಿನ ಸಂತಪೂರ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಿಂದ 2024–25ನೇ ಸಾಲಿನ ಮತ್ಸ್ಯಾಶ್ರಯ ಯೋಜನೆಯಡಿ ವಸತಿ ಹಂಚಿಕೆಗಾಗಿ ತಯಾರಿಸಲಾದ ಫಲಾನುಭವಿಗಳ ಪಟ್ಟಿಯಲ್ಲಿ ವೃತ್ತಿಪರ ಮೀನುಗಾರರಲ್ಲದವರನ್ನು



ಸೇರಿಸಲಾಗಿದೆ ಎಂದು ಆರೋಪಿಸಲಾಗಿದೆ. ಅಲ್ಲದೆ, ಕೆಲವರು ಪಂಚಾಯತಿಯಿಂದ ಸುಳ್ಳು ದಾಖಲೆಗಳನ್ನು ಪಡೆದು ಫಲಾನುಭವಿಗಳ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದು, ಈ ಮೂಲಕ ಅವ್ಯವಹಾರ ನಡೆದಿದೆ ಹೀಗಾಗಿ, ಸದರಿ ಫಲಾನುಭವಿಗಳ ಪಟ್ಟಿಯನ್ನು ಕಾನೂನಿನ ಪ್ರಕಾರ ಪರಿಶೀಲಿಸಿ ರದ್ದುಪಡಿಸಿ, ನಿಯಮಾನುಸಾರ ಅರ್ಹ ವೃತ್ತಿಪರ ಮೀನುಗಾರರ ಹೊಸ ಪಟ್ಟಿಯನ್ನು ಸಿದ್ಧಪಡಿಸಿ ಮನೆಗಳನ್ನು ಹಂಚಿಕೆ ಮಾಡಬೇಕು. ಇಲಾಖೆಯಲ್ಲಿ ಹಲವು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯನ್ನು ಕೂಡಲೇ ವರ್ಗಾವಣೆ ಮಾಡಿ, ತಪ್ಪಿತಸ್ಥ ತಾಲ್ಲೂಕು ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ) ಜಿಲ್ಲಾ ಸಂಚಾಲಕ ಧನರಾಜ ಮುಸ್ತಾಪೂರ, ಮಾಜಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಮಲ್ಲಿಕಾರ್ಜುನ ಬಿರಾದಾರ (ಲಾಧಾ), ಜಿ.ಸಂ. ಸಂಚಾಲಕ ವಿಜಯಕುಮಾರ ಐಹೊಳೆ ಉಪಸ್ಥಿತರಿದ್ದರು.

## ಸಮುದಾಯ ಭವನ ಕಾಮಗಾರಿಯಲ್ಲಿ ಅವ್ಯವಹಾರ ಆರೋಪ: ದೂರು

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಹೆಬ್ಬಾಳ ಗ್ರಾಮದಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಅನುದಾನದಲ್ಲಿ ನಿರ್ಮಾಣವಾಗುತ್ತಿರುವ ಸಮುದಾಯ ಭವನ ಕಾಮಗಾರಿಯಲ್ಲಿ ಕಳಪೆ ಕಾಮಗಾರಿ ಹಾಗೂ ಸರ್ಕಾರಿ ಅನುದಾನದ ದುರುಪಯೋಗ ನಡೆದಿದೆ ಎಂದು ಆರೋಪಿಸಿ ಗ್ರಾಮಸ್ಥರು ಈ ಸಂದರ್ಭದಲ್ಲಿ ಹನುಮಂತಪ್ಪ ಪತಂಗಿ, HM ಹುಸೇನ್ ಬಾಷಾ, ಈಶಪ್ಪ ನಾಗನಹಳ್ಳಿ, ಗಣೇಶ್ ಎಂ ಜಿ, ಮಲ್ಲೇಶ್ ಬಿಸಟ್ಟಿ ಜಿಲ್ಲಾಧಿಕಾರಿಗಳಿಗೆ ದೂರು ಸಲ್ಲಿಸಿದ್ದಾರೆ.

ದೂರಿನ ಪ್ರಕಾರ, ಶ್ರೀ ಗಂಗಾದೇವಿ ದೇವಸ್ಥಾನ ಸಮಿತಿ ಮೂಲಕ ಸುಮಾರು ₹50 ಲಕ್ಷ ಅನುದಾನದಲ್ಲಿ ಎರಡು ಮಹಡಿಯ ಸಮುದಾಯ ಭವನ ನಿರ್ಮಾಣಕ್ಕೆ ಅನುಮೋದನೆ ದೊರೆತಿದೆ. ಈಗಾಗಲೇ ಮೊದಲ ಹಂತದಲ್ಲಿ ₹12.50 ಲಕ್ಷ ಹಾಗೂ ಎರಡನೇ ಹಂತದಲ್ಲಿ ₹25 ಲಕ್ಷ ಬಿಡುಗಡೆ ಮಾಡಲಾಗಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಇದರ ಜೊತೆಗೆ ಧರ್ಮಸ್ಥಳ, ಶೃಂಗೇರಿ, ಹೊರನಾಡು ಅನ್ನಪೂರ್ಣೇಶ್ವರಿ ಸೇರಿದಂತೆ ವಿವಿಧ ಧಾರ್ಮಿಕ



ಸಂಸ್ಥೆಗಳಿಂದಲೂ ಇದೇ ಸಮುದಾಯ ಭವನದ ಹೆಸರಿನಲ್ಲಿ ದೇಣಿಗೆ ಸಂಗ್ರಹಿಸಲಾಗಿದೆ ಎಂದು ಆರೋಪಿಸಲಾಗಿದೆ.

ಆದರೆ, ಎರಡು ಮಹಡಿಯ ಕಟ್ಟಡ ನಿರ್ಮಿಸಬೇಕಿದ್ದ ಸ್ಥಳದಲ್ಲಿ ಕೇವಲ ಒಂದು ಮಹಡಿಯ ಕಟ್ಟಡ ನಿರ್ಮಿಸಿ, ಮೇಲ್ಭಾಗದಲ್ಲಿ ಆಂಗಲ್ ಅಳವಡಿಸಿ ಶೀಟ್ ಹಾಕಲಾಗಿದೆ. ಈಗಾಗಲೇ ಶೀಟ್ ಬಾಗಿರುವುದರ ಜೊತೆಗೆ ಕಟ್ಟಡದಲ್ಲಿ ಬಿರುಕುಗಳು ಕಾಣಿಸಿಕೊಂಡಿವೆ. ಪ್ಲಾಸ್ಟರಿಂಗ್, ನೆಲಹಾಸು ಹಾಗೂ ಇತರ ನಿರ್ಮಾಣ ಕಾಮಗಾರಿಗಳು ಅತ್ಯಂತ ಕಳಪೆ ಗುಣಮಟ್ಟದಲ್ಲಿದ್ದು, ಸರ್ಕಾರದ ಅನುದಾನವನ್ನು ಸಮರ್ಪಕವಾಗಿ ಬಳಸದೇ ಅವ್ಯವಹಾರ ನಡೆಸಿರುವ ಶಂಕೆ ವ್ಯಕ್ತವಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಹೀಗಾಗಿ ಕಾಮಗಾರಿಯ ಗುಣಮಟ್ಟ ಹಾಗೂ ಅನುದಾನದ ಬಳಕೆಯ ಕುರಿತು ಸಮಗ್ರ ತಾಂತ್ರಿಕ ಮತ್ತು ಹಣಕಾಸು ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಸಾರ್ವಜನಿಕ ಹಣದ ದುರುಪಯೋಗವನ್ನು ತಡೆಯಬೇಕು ಎಂದು ಗ್ರಾಮಸ್ಥರು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

# ತಪ್ಪು ಹೆಜ್ಜೆ ಇಡುವ ಮುನ್ನ ಸಾವಿರ ಬಾರಿ ಯೋಚಿಸಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಅಪರಾಧವು ಕೇವಲ ಒಬ್ಬ ವ್ಯಕ್ತಿಯ ಜೀವನವನ್ನಷ್ಟೇ ಅಲ್ಲ, ಆತನ ಕುಟುಂಬ, ಸಮಾಜ ಹಾಗೂ ಮುಂದಿನ ಪೀಳಿಗೆಯ ಮೇಲೂ ದುಷ್ಪರಿಣಾಮ ಬೀರುತ್ತದೆ. ಕ್ಷಣಿಕ ಕೋಪ, ದುಸ್ಸಾಹಸ ಅಥವಾ ತಪ್ಪು ನಿರ್ಧಾರದಿಂದ ಜೀವನವಿಡೀ ಶಿಕ್ಷೆ ಅನುಭವಿಸುವ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಆದ್ದರಿಂದ ಯಾವುದೇ ತಪ್ಪು ಹೆಜ್ಜೆ ಇಡುವ ಮುನ್ನ ಸಾವಿರ ಬಾರಿ ಯೋಚಿಸಬೇಕು ಎಂದು ಬೀದರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ (ಭಾ.ಪೊ.ಸೇ.) ಅವರು ಕಿವಿಮಾತು ಹೇಳಿದರು.

ಜಾನಪದ ಕಲೆ ಮತ್ತು ಸಂಸ್ಕೃತಿಯ ಮೂಲಕ ಕೈದಿಗಳಲ್ಲಿ ಆತ್ಮಾವಲೋಕನ, ಮನಃ ಪರಿವರ್ತನೆ ಹಾಗೂ ಸಮಾಜಮುಖಿ ಚಿಂತನೆ ಬೆಳೆಸುವ ಉದ್ದೇಶದಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು, ಜಾನಪದ ಕಲಾವಿದರ ಬಳಗ (ರಿ), ಬೀದರ ಹಾಗೂ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಬೀದರ ಜಿಲ್ಲಾ ಕಾರಾಗೃಹ ಕೇಂದ್ರದಲ್ಲಿ ಸೋಮವಾರ "ಜೈಲಲ್ಲಿ ಜಾನಪದ" ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕೈದಿಗಳು ಶಿಕ್ಷೆಯನ್ನು ಕೇವಲ ದಂಡನೆಯಾಗಿ ಪರಿಗಣಿಸದೆ, ತಮ್ಮ ಬದುಕನ್ನು ತಿದ್ದಿಕೊಳ್ಳುವ ಅವಕಾಶವನ್ನಾಗಿ ಸ್ವೀಕರಿಸಬೇಕು. ಮನಃ ಸಾಕ್ಷಿಯೊಂದಿಗೆ ಆತ್ಮಾವಲೋಕನ ಮಾಡಿಕೊಂಡು ಸಮಾಜದ ಮುಖ್ಯವಾಹಿನಿಗೆ ಮರಳಬೇಕು.



ಉತ್ತಮ ನಾಗರಿಕರಾಗಿ ಸಮಾಜದಲ್ಲಿ ಬದುಕಿದಾಗ ಮಾತ್ರ ಗೌರವ, ವಿಶ್ವಾಸ ಮತ್ತು ಸ್ವಾಭಿಮಾನ ದೊರೆಯುತ್ತದೆ. ಜೀವನದಲ್ಲಿ ಪ್ರತಿಯೊಬ್ಬರಿಗೂ ಮತ್ತೊಂದು ಅವಕಾಶ ಸಿಗುತ್ತದೆ; ಅದನ್ನು ಸದುಪಯೋಗಪಡಿಸಿಕೊಂಡು ಹೊಸ ಬದುಕನ್ನು ಕಟ್ಟಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷರಾದ ಡಾ.ಗೊಲ್ಲಹಳ್ಳಿ ಶಿವಪ್ರಸಾದ್ ಅವರು ಮಾತನಾಡಿ, ಪ್ರತಿಯೊಬ್ಬ ಮನುಷ್ಯನು ತಾಯಿಯ ಗರ್ಭದಿಂದ ಜನಿಸುವಾಗ ನಿರಪರಾಧಿಯಾಗಿಯೇ ಜನಿಸುತ್ತಾನೆ. ಯಾರೂ ಅಪರಾಧಿಯಾಗಿ ಅಥವಾ ಆಯುಧ ಹಿಡಿದು ಹುಟ್ಟುವುದಿಲ್ಲ. ಸಂದರ್ಭ, ಪರಿಸ್ಥಿತಿ, ತಪ್ಪು ಸಂಗಡಿಗರು ಹಾಗೂ ತಪ್ಪು ನಿರ್ಧಾರಗಳಿಂದ ಕೆಲವರು ಅಪರಾಧದ ದಾರಿಯನ್ನು ಹಿಡಿಯುತ್ತಾರೆ. ಆದರೆ ಮನುಷ್ಯನ ಬದುಕಿನಲ್ಲಿ ಪರಿವರ್ತನೆಗೆ ಯಾವಾಗಲೂ ಅವಕಾಶವಿದೆ ಎಂದು ಹೇಳಿದರು.

ಒಳ್ಳೆಯದು ಮತ್ತು ಕೆಟ್ಟದ್ದು ಎರಡೂ ಮನುಷ್ಯನಲ್ಲಿಯೇ ಅಡಗಿವೆ. ಒಳ್ಳೆಯದನ್ನೆ ಆಯ್ಕೆ ಮಾಡಿಕೊಳ್ಳಬೇಕು. ತತ್ವಪದ, ಜಾನಪದ ಕಲೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಬದುಕಿನ ಮೌಲ್ಯಗಳನ್ನು ಬೋಧಿಸುವ ಶಕ್ತಿಯುತ ಮಾಧ್ಯಮಗಳಾಗಿವೆ. ಇಂತಹ ಕಾರ್ಯಕ್ರಮಗಳು ಕೈದಿಗಳಲ್ಲಿ ಹೊಸ ಚೈತನ್ಯ, ಆತ್ಮವಿಶ್ವಾಸ ಹಾಗೂ ಉತ್ತಮ ಬದುಕಿನ ಆಶಯವನ್ನು ಮೂಡಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯ ವಿಜಯಕುಮಾರ ಸೋನಾರೆ ಪ್ರಾಸ್ತಾವಿಕವಾಗಿ ಮಾತನಾಡಿ, ಜಾನಪದ ಕಲೆ, ಜನಪದ ಸಾಹಿತ್ಯ ಹಾಗೂ ತತ್ವಪದಗಳಲ್ಲಿರುವ ಜೀವನ ಮೌಲ್ಯಗಳನ್ನು ಕೈದಿಗಳಿಗೆ ಪರಿಚಯಿಸಿ, ಅವರಲ್ಲಿ ಸಕಾರಾತ್ಮಕ ಚಿಂತನೆ ಮತ್ತು ಆತ್ಮವಿಶ್ವಾಸ ಬೆಳೆಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಸಂಜೀವಕುಮಾರ ಅತಿವಾಳೆ, ಜಿಲ್ಲಾ ಕಾರಾಗೃಹ ಕೇಂದ್ರದ ಅಧೀಕ್ಷಕ ದತ್ತಾತ್ರಿ ಮೇಧಾ, ಲೋಕೋಪಯೋಗಿ ಇಲಾಖೆ ಉಪವಿಭಾಗದ ಸಹಾಯಕ ಅಭಿಯಂತರ ಸುನೀಲ ಆರ್., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಥೆ ಸೇರಿದಂತೆ ಇತರರು ವೇದಿಕೆಮೇಲಿದ್ದರು.

ಪ್ರಾರಂಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಥೆ ಸ್ವಾಗತಿಸಿದರು. ಚಂದ್ರಕಾಂತ ಹಳ್ಳಿಖೇಡಕರ್ ನಿರೂಪಿಸಿದರೇ, ಕೊನೆಯಲ್ಲಿ ಸುನೀಲ ಭಾವಿಕಟ್ಟಿ ವಂದಿಸಿದರು.

ಬಳಿಕ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿದ ಖ್ಯಾತ ಜಾನಪದ ಹಾಗೂ ತತ್ವಪದ ಕಲಾವಿದರು ತಮ್ಮ ವಿಶಿಷ್ಟ ಕಲಾ ಪ್ರದರ್ಶನಗಳ ಮೂಲಕ ಕೈದಿಗಳು ಹಾಗೂ ಪ್ರೇಕ್ಷಕರ ಮನ ಗೆದ್ದರು. ಜಾನಪದ ಗೀತೆಗಳು, ತತ್ವಪದಗಳು, ಗೀಗಿ ಪದಗಳು ಹಾಗೂ ಸಾಂಪ್ರದಾಯಿಕ ಜಾನಪದ ನೃತ್ಯಗಳ ಮೂಲಕ ಮಾನವೀಯ ಮೌಲ್ಯಗಳು, ಸಾಮಾಜಿಕ ಸಾಮರಸ್ಯ, ಜೀವನದ ಸತ್ಯ ಹಾಗೂ ಪರಿವರ್ತನೆಯ ಸಂದೇಶವನ್ನು ಸಾರಲಾಯಿತು.

ಶಂಭುಲಿಂಗ ವಾಲ್ದೊಡ್ಡಿ, ಮಾರುತಿ ಕೋಳಿ, ಮಧುಕರ್ ಘೋಡಕೆ ಹಾಗೂ ಸಂಗಮೇಶ ಬೆಲ್ದಾಳ ಅವರು ಜಾನಪದ ಗಾಯನವನ್ನು ಪ್ರಸ್ತುತಪಡಿಸಿದರು. ದಿಲೀಪ ಕಾಡವಾದ, ಮಲ್ಲಿಕಾರ್ಜುನ ಸ್ವಾಮಿ, ಶಂಕರ ಚೊಂಡಿ ಹಾಗೂ ಸಂಜುಕುಮಾರ ಸ್ವಾಮಿ ಮತ್ತು ತಂಡ ತತ್ವಪದ ಗಾಯನದ ಮೂಲಕ ಪ್ರೇಕ್ಷಕರನ್ನು ರಂಜಿಸಿದರು. ದೇವದಾಸ ಚಿಮಕೋಡ ಅವರ ತಂಡ ಗೀಗಿ ಪದ ಹಾಗೂ ಶಾಂತಮ್ಮಾ ವಾಡೆ ಅವರ ತಂಡ ಸಾಂಪ್ರದಾಯಿಕ ಜಾನಪದ ಕುಣಿತವನ್ನು ಮನೋಜ್ಞವಾಗಿ ಪ್ರದರ್ಶಿಸಿ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದಿತು.

ಕಾರ್ಯಕ್ರಮದುದ್ದಕ್ಕೂ ಕೈದಿಗಳು ಕಲಾವಿದರ ಗಾಯನ ಹಾಗೂ ನೃತ್ಯಗಳನ್ನು ಆಸಕ್ತಿಯಿಂದ ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಜಾನಪದ ಕಲೆ ಮತ್ತು ತತ್ವಪದಗಳಲ್ಲಿರುವ ಬದುಕಿನ ಮೌಲ್ಯಗಳು ಹಾಗೂ ನೈತಿಕ ಸಂದೇಶಗಳು ಕೈದಿಗಳ ಮನಸ್ಸನ್ನು ಸ್ಪರ್ಶಿಸಿದವು.

ಕಾರಾಗೃಹದಂತಹ ವಾತಾವರಣದಲ್ಲಿ ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಕೈದಿಗಳಲ್ಲಿ ಮಾನಸಿಕ ನೆಮ್ಮದಿ, ಆತ್ಮಾವಲೋಕನ ಹಾಗೂ ಉತ್ತಮ ಬದುಕಿನ ಸಂಕಲ್ಪ ಮೂಡಿಸಲು ಸಹಕಾರಿಯಾಗುತ್ತವೆ ಎಂಬ ಅಭಿಪ್ರಾಯವೂ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಬೀದರ ಜಿಲ್ಲಾ ಕಾರಾಗೃಹ ಕೇಂದ್ರದ ಅಧಿಕಾರಿಗಳು, ಸಿಬ್ಬಂದಿ ವರ್ಗ, ನಿಯಮಿತ ಜಾನಪದ ಕಲಾವಿದರು, ಆಹ್ವಾನಿತರು ಭಾಗವಹಿಸಿದರು, ಕೈದಿಗಳು ಉಪಸ್ಥಿತರಿದ್ದರು.

ಜಾನಪದ ಕಲೆ, ಸಂಸ್ಕೃತಿ ಮತ್ತು ಮಾನವೀಯ ಮೌಲ್ಯಗಳ ಸಂಗಮವಾಗಿದ್ದ ಈ ವಿಶೇಷ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

# ಉತ್ತಮ ಮಳೆಗಾಗಿ ದೇವರ ಮೊರೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲೂಕಿನಲ್ಲಿ ಉತ್ತಮ ಮಳೆ, ಬೆಳೆ ಬೆಳೆಯಲಿ ಎಂದು ಆಶಿಸಿ ರೈತರು, ಮಹಿಳೆಯರು ದೇವರು ಮೊರೆ ಹೋಗಿದ್ದಾರೆ. ಮಳೆ ಕೊರತೆಯಿಂದ ರೈತರು ಆತಂಕಕ್ಕೊಳಗಾಗಿದ್ದು, ಬಿತ್ತನೆ ಮಾಡಿದ ಬೆಳೆಗಳು ಒಣಗುವ ಭೀತಿ ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ದೇವರ ಕೃಪೆಯಿಂದ ಉತ್ತಮ ಮಳೆಯಾಗಲಿ ಎಂಬ ನಂಬಿಕೆಯಿಂದ ಗ್ರಾಮಸ್ಥರು ಸಾಮೂಹಿಕವಾಗಿ ಗ್ರಾಮ ಪ್ರದಕ್ಷಣೆ ಹಾಕಿ ದೇವರಿಗೆ ಪ್ರಾರ್ಥನೆ ಸಲ್ಲಿಸಿದ್ದಾರೆ.

ಉತ್ತಮ ಮಳೆ ಸುರಿದು ಬೆಳೆಗಳು ಸಮೃದ್ಧಿಯಾಗಿ ಬೆಳೆಯಲಿ ಎಂಬ ಆಶಯದಿಂದ ತಾಲೂಕಿನ ಭಾತಂಬ್ರಾ ಗ್ರಾಮದ ಗ್ರಾಮಸ್ಥರು ಹಾಗೂ ರೈತರು ವಿಶೇಷ ಪ್ರಾರ್ಥನೆ, ಪೂಜೆ ಸಲ್ಲಿಸಿದರು.

ಗ್ರಾಮದಲ್ಲಿ ದೇವರ ನಾಮಸ್ಮರಣೆ, ಭಜನೆ ಮತ್ತು ಕೀರ್ತನೆಗಳನ್ನು ಮಾಡುತ್ತಾ ಗ್ರಾಮ ಪ್ರದಕ್ಷಿಣೆ ನಡೆಸಿದ ಭಕ್ತರು, ಗ್ರಾಮದ ವಿವಿಧ ದೇವಸ್ಥಾನಗಳಿಗೆ ತೆರಳಿ ದೇವರಿಗೆ ನೀರಿನ ಅಭಿಷೇಕ ಮಾಡಿ ವಿಶೇಷ ಪೂಜೆ ಸಲ್ಲಿಸಿದರು. ಉತ್ತಮ ಮಳೆ ಸುರಿದು ರೈತರ ಬದುಕು ಹಸನಾಗಲಿ, ಕೃಷಿ ಚಟುವಟಿಕೆಗಳು ಸುಗಮವಾಗಿ ನಡೆಯಲಿ ಎಂದು ಭಕ್ತಿಭಾವದಿಂದ ದೇವರಲ್ಲಿ ಪ್ರಾರ್ಥಿಸಿದರು.

ಗ್ರಾಮ ಪ್ರದಕ್ಷಿಣೆ, ಗ್ರಾಮದ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ ನೀರಿನ ಅಭಿಷೇಕ ಸಲ್ಲಿಸಿ ನಂತರ ಗ್ರಾಮದ ಹೊರವಲಯದ ಮಹಾದೇವ ದೇವಸ್ಥಾನದಲ್ಲಿ ಮಂಗಳಾರತಿ ಮಾಡಿ ಬುಟ್ಟಿ ಜಾತ್ರೆ ಜತೆಗೆ ಸಾಮೂಹಿಕ ಊಟ ಮಾಡಿ ಸಂಜೆ ಮನೆಗೆ ಹಿಂದುರಿಗದರು.

# ಆರೋಗ್ಯದೃಷ್ಟಿಯಿಂದ ಸುರಕ್ಷತಾಸಾಮಾಗ್ರಿಗಳನ್ನು ಉಪಯೋಗಿಸಿರಿ;ಸಿಇಒ ದತ್ತಾತ್ರೇಯಹೆಗೆಡೆ



• ಮಲ್ಲಮ್ಮ ನುಡಿ ವಾರ್ತೆಕುರುಗೋಡು

.ಜು.14 ತ್ಯಾಜ್ಯ ಸಂಗ್ರಹಕಾರರು ಸ್ವಚ್ಛ, ಸಮಗ್ರ ಹಾಗು ಸುಸ್ಥಿರ ನಗರಗಳ ನಿರ್ಮಾಣದಲ್ಲಿ ಪ್ರಮುಖಪಾತ್ರ ವಹಿಸುತ್ತಾರೆ. ಆದ್ದರಿಂದ ತ್ಯಾಜ್ಯಸಂಗ್ರಹಕಾರರು ತಮ್ಮ ಆರೋಗ್ಯಹಿತದೃಷ್ಟಿಯಿಂದ ಶೂ, ಹೆಲ್ಮೆಟ್, ಗ್ಲೌಸ್ ಸೇರಿದಂತೆ ಇತರೆ ಆರೋಗ್ಯಸುರಕ್ಷತಾ ಸಾಮಾಗ್ರಿಗಳನ್ನು ಉಪಯೋಗಿಸುವುದು ಒಳ್ಳೆಯದು ಎಂದು ಕುರುಗೋಡು ಪುರಸಭೆ ಮುಖ್ಯಾಧಿಕಾರಿ ದತ್ತಾತ್ರೇಯಹೆಗೆಡೆ ಅವರು ಹೇಳಿದರು.

ಅವರು ಕುರುಗೋಡು ಪುರಸಭೆ ಕಾರ್ಯಾಲಯದಲ್ಲಿ ಪೌರಾಡಳಿತ ನಿರ್ದೇಶನಾಲಯ ಪುರಸಭೆ ಕಾರ್ಯಾಲಯ ಕುರುಗೋಡು ಇವರ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ನಮಸ್ತೆ ದಿನಾಚರಣೆಯಲ್ಲಿ ತ್ಯಾಜ್ಯ ಸಂಗ್ರಹಕಾರರಿಗೆ ಶೂ, ಬ್ಯಾಗ್, ಗ್ಲೌಜ್, ಹೆಲ್ಮೆಟ್ ಸೇರಿದಂತೆ ಇತರೆ ಆರೋಗ್ಯಸುರಕ್ಷತಾ ಸಾಮಾಗ್ರಿಗಳನ್ನು ವಿತರಿಸುವ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ತ್ಯಾಜ್ಯಸಂಗ್ರಹಕಾರರು, ಚರಂಡಿ ಮತ್ತು ಸೆಪ್ಟಿಟ್ ಟ್ಯಾಂಕ್ ಸ್ವಚ್ಛತಾ ಸಿಬ್ಬಂದಿವರ್ಗದವ ಸುರಕ್ಷತೆಯನ್ನು ಕಾಪಾಡುವುದು ನಮ್ಮ-ನಿಮ್ಮೆಲ್ಲರ ಆದ್ಯಕರ್ತವ್ಯ ಎಂದು ನುಡಿದರು.

ಕುರುಗೋಡು ಪುರಸಭೆ ಕಛೇರಿಯ ಆರೋಗ್ಯನಿರೀಕ್ಷಕ ಜಿ.ಆದಿಕೇಶವ ಅವರು ಪ್ರಸ್ತಾವಿಕವಾಗಿ ಮಾತನಾಡಿ, ತ್ಯಾಜ್ಯಸಂಗ್ರಹಕಾರರು ವೇಸ್ಟಿ??????? ಅವರು ತಾವು ಮಾಡುವ ದಿನದ ಕಾಯಕದಲ್ಲಿ ಪುರಸಭೆವತಿಯಿಂದ ನೀಡಲಾದ ಶೂ, ಹೆಲ್ಮೆಟ್, ಬ್ಯಾಗ್, ಗ್ಲೌಜ್ ಸೇರಿದಂತೆ ಇತರೆ ಸುರಕ್ಷಾ ಸಾಮಾಗ್ರಿಗಳನ್ನು ಬಳಸಿ ದಿನನಿತ್ಯದ ಕಾರ್ಯ ಮಾಡಿ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದು ಸಲಹೆ ನೀಡಿದರು.

ಪ್ರಾರಂಭದಲ್ಲಿ ಕುರುಗೋಡು ಪುರಸಭೆ ಅಧ್ಯಕ್ಷ ಜಿ.ಮಂಜುನಾಥ ಅವರು ಸಾಲು-ಸಲಾಗಿ ಬಂದಂತಹ ತ್ಯಾಜ್ಯಸಂಗ್ರಹಕಾರರಿಗೆ ಶೂ, ಬ್ಯಾಗ್, ಗ್ಲೌಜ್, ಹೆಲ್ಮೆಟ್ ಸೇರಿದಂತೆ ಇತರೆ ಸುರಕ್ಷಾ ಸಾಮಾಗ್ರಿಗಳನ್ನು 78 ಮಂದಿ ತ್ಯಾಜ್ಯಸಂಗ್ರಹಕಾರರಿಗೆ ವೇಸ್ಟಿರ್ಗೆ ವಿತರಿಸಿದರು. ಈ ಸಂದರ್ಭದಲ್ಲಿ ಪುರಸಭೆಯ ಉಪಾಧ್ಯಕ್ಷೆ ಶ್ರೀಮತಿ ನಾಗವೇಣಿ ಅಂಜಿನಪ್ಪ, ಪುರಸಭೆ ಸದಸ್ಯರು, ಪುರಸಭೆ ಕಛೇರಿಯ ರಾಜಶೇಖರ, ಪದ್ಮ, ಲಿಂಗಪ್ಪ ಸೇರಿದಂತೆ ಇತರೆ ತ್ಯಾಜ್ಯಸಂಗ್ರಹಕಾರರು, ಪುರಸಭೆ ಸಿಬ್ಬಂದಿವರ್ಗದವರು ಇದ್ದರು.

# ಮಣ್ಣೆತ್ತಿನ ಅಮಾವಾಸ್ಯೆ ಪ್ರಯುಕ್ತ, ಮಣ್ಣೆತ್ತುಗಳಿಗೆ ಪೂಜೆ,ಮಳೆಯ ಆಗಮನಕ್ಕೆ ಚಿಣ್ಣರಿಂದ ಪ್ರಾರ್ಥನೆ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ನಗರದ ಡಾ. ಬಿ. ಆರ್. ಅಂಬೇಡ್ಕರ್ ನಗರದಲ್ಲಿ ಮಣ್ಣೆತ್ತಿನ ಅಮಾವಾಸ್ಯೆ ಪ್ರಯುಕ್ತ ಮಂಗಳವಾರ ಚಿಣ್ಣರು ಮಣ್ಣೆತ್ತಿನ ಪೂಜೆ ಮಾಡುವುದರ ಜೊತೆಗೆ ರಾಜ್ಯದಲ್ಲಿ ಮಳೆಯಾಗದೆ ರೈತರು ಬೆಳೆದ ಬೆಳೆಬಾರದೆ, ಇದ್ದುದ್ದರಿಂದ ರಾಜ್ಯದಲ್ಲಿ ಬರಗಾಲದಂತ ಪರಿಸ್ಥಿತಿ ಎದುರಾದ ಹಿನ್ನಲೆ, ಚಿಣ್ಣರು ಮಣ್ಣೆತ್ತುಗಳಿಗೆ ಶೃಂಗರಿಸಿ, ಪೂಜೆ ಸಲ್ಲಿಸಿ ರಾಜ್ಯದಲ್ಲಿ ಮಳೆ ಬಂದು ರೈತರ ಮುಖದಲ್ಲಿ ಸಂತಸದ ಕಳೆ ತುಂಬಲಿ ಎಂದು ಪ್ರಾರ್ಥನೆ ಮೂಲಕ ಬೇಡಿ-ಕೊಂಡರು. ಚಿಣ್ಣರಾದ ಹರಿ ಪೂಜಾರಿ, ಶಿವಲಿಂಗ ಪೂಜಾರಿ, ಮನೋಹರ್ ಪೂಜಾರಿ, ಮದನ್ ರೆಡ್ಡಿ ಪೂಜಾರಿ, ಗೌರಿ ಪೂಜಾರಿ, ಸೇರಿದಂತೆ ಇನ್ನಿತರ ಮಕ್ಕಳು ಇದ್ದರು.

# ಬಳ್ಳಾರಿಯಲ್ಲಿ ವಿಶ್ವ ಜನಸಂಖ್ಯಾ ದಿನಾಚರಣೆಗೆ ಚಾಲನೆ
# ಜನಸಂಖ್ಯೆ ಸ್ಥಿರತೆಗೆ ಸಮುದಾಯದ ಪಾತ್ರ ಮುಖ್ಯ :ಡಾ.ಯಲ್ಲಾ ರಮೇಶ್‌ಬಾಬು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜನಸಂಖ್ಯಾ ನಿಯಂತ್ರಣಕ್ಕೆ ಕೇವಲ ಸರ್ಕಾರಿ ಇಲಾಖೆಗಳು ಮಾತ್ರವಲ್ಲದೆ ಸಮುದಾಯವು ಸಕ್ರೀಯವಾಗಿ ಭಾಗವಹಿಸಿದರೆ ಮುಂಬರುವ ದಿನಗಳಲ್ಲಿ ದೇಶದ ಜನಸಂಖ್ಯೆಯನ್ನು ನಿಯಂತ್ರಣ ಮಾಡಲು ಸಾಧ್ಯವಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಕೌಲ್‌ಬಜಾರ್ ಇವರ ಜಂಟಿ ಆಶ್ರಯದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ 'ವಿಶ್ವಜನಸಂಖ್ಯಾದಿನಾಚರಣೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಪ್ರಸ್ತುತ ನಮ್ಮ ದೇಶದ ಜನಸಂಖ್ಯೆ 147.6 ಕೋಟಿ ಹಾಗೂ ಕರ್ನಾಟಕದ ಜನಸಂಖ್ಯೆ 6.9 ಕೋಟಿಯನ್ನು ದಾಟಿದೆ. ಹೆಚ್ಚುತ್ತಿರುವ ಜನಸಂಖ್ಯೆಯಿಂದಾಗಿ ದೇಶದ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಯಲ್ಲಿ ಅನೇಕ ತೊಂದರೆಗಳನ್ನು ಎದುರಿಸಬೇಕಾಗಿದೆ. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯ ಕುಟುಂಬ ಕಲ್ಯಾಣ ಯೋಜನೆಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು, ಎರಡು ಮಕ್ಕಳ ನಡುವೆ ಕನಿಷ್ಠ 3 ವರ್ಷಗಳ ಅಂತರ ಕಾಯ್ದುಕೊಳ್ಳುವ ಮೂಲಕ ಚಿಕ್ಕ ಸಂಸಾರಕ್ಕೆ ಪ್ರತಿಯೊಬ್ಬರೂ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು.

ಜನಸಂಖ್ಯೆ ನಿಯಂತ್ರಣದಲ್ಲಿ ಅಲ್ಪಮಟ್ಟಿನ ಸಾಧನೆ ಮಾಡಲಾಗಿದ್ದರೂ, ಸದ್ಯಕ್ಕೆ 'ಜನಸಂಖ್ಯಾ ಸ್ಥಿರತೆ' ಕಾಯ್ದುಕೊಳ್ಳುವುದು ನಮ್ಮ ಮುಂದಿರುವ ದೊಡ್ಡ ಸವಾಲಾಗಿದೆ. ಇದಕ್ಕಾಗಿ ಸರ್ಕಾರಿ ಆಸ್ಪತ್ರೆಗಳಲ್ಲಿ ಲಭ್ಯವಿರುವ ಹಲವು ಉಚಿತ ತಾತ್ಕಾಲಿಕ ಹಾಗೂ ಶಾಶ್ವತ ವಿಧಾನಗಳನ್ನು ಸಾರ್ವಜನಿಕರು ಬಳಸಿಕೊಳ್ಳಬೇಕು ಎಂದು ಮಾಹಿತಿ ನೀಡಿದರು.*ತಾತ್ಕಾಲಿಕ ವಿಧಾನಗಳು:*ಮದುವೆಯಾದ ಮೊದಲ 2 ವರ್ಷಗಳವರೆಗೆ ಗರ್ಭಧಾರಣೆ ತಡೆಯಲು ತಾತ್ಕಾಲಿಕ ವಿಧಾನಗಳು, ಮೊದಲ ಮಗುವಿನ ನಂತರ 3 ವರ್ಷಗಳ ಅಂತರಕ್ಕಾಗಿ 'ಮಾಲಾ' ಮತ್ತು 'ಛಾಯಾ' ಮಾತ್ರೆಗಳು.*ಆಧುನಿಕ ಪದ್ಧತಿಗಳು:*

ಹೆರಿಗೆಯಾದ ತಕ್ಷಣ ಅಳವಡಿಸುವ ಪಿಪಿಐಯುಸಿಡಿ, 5 ರಿಂದ 10 ವರ್ಷಗಳ ಅವಧಿಗೆ ಐಯುಸಿಡಿ 375 ಮತ್ತು 380ಎ, ಹಾಗೂ ಮಹಿಳೆಯರಿಗಾಗಿ ಪ್ರತಿ 3 ತಿಂಗಳಿಗೊಮ್ಮೆ ನೀಡಲಾಗುವ ಅತ್ಯಂತ ಜನಪ್ರಿಯ 'ಅಂತರ' ಚುಚ್ಚುಮದ್ದು. ಪುರುಷರಿಗಾಗಿ 'ನಿರೋಧ್' ಸೇವೆಗಳು ಲಭ್ಯವಿವೆ.

*ಶಾಶ್ವತ ವಿಧಾನಗಳು:*

ಇನ್ನು ಮುಂದೆ ಮಕ್ಕಳು ಬೇಡವೆಂದು ನಿರ್ಧರಿಸಿದವರಿಗೆ ಮಹಿಳೆಯರಲ್ಲಿ ಲ್ಯಾಪ್ರೋಸ್ಕೋಪಿಕ್, ಟ್ಯುಬೆಕ್ಟಮಿ ಹಾಗೂ ಪುರುಷರಲ್ಲಿ ನೋ-ಸ್ಕಾಲ್ಪೆಲ್ ವ್ಯಾಸಕ್ಟಮಿ ಶಸ್ತ್ರಚಿಕಿತ್ಸೆಗಳನ್ನು ಸಂಪೂರ್ಣ ಉಚಿತವಾಗಿ ಮಾಡಲಾಗುತ್ತದೆ.

ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ.ವೀರೇಂದ್ರಕುಮಾರ್ ಅವರು ಮಾತನಾಡಿ, ಹೆಣ್ಣು ಜೀವ ಉಳಿಸಿ ಸಾಮಾಜಿಕ ಜೀವನದಲ್ಲಿ ಹೆಣ್ಣಿಗೆ ಸಮಾನ ಸ್ಥಾನಮಾನ ನೀಡುವುದು ದೇಶದ ಅಭಿವೃದ್ಧಿಗೆ ಆಸ್ತಿಯಿದ್ದಂತೆ. ಈ ನಿಟ್ಟಿನಲ್ಲಿ ಭ್ರೂಣಲಿಂಗ ಪತ್ತೆ ಮತ್ತು ಹತ್ಯೆ ತಡೆಗೆ ಕಟ್ಟುನಿಟ್ಟಿನ ಜಾಗೃತಿ ಮೂಡಿಸಲಾಗುತ್ತಿದ್ದು, 'ಬೇಟಿ ಬಚಾವೋ – ಬೇಟಿ ಪಡಾವೋ' ಆಂದೋಲನ ವ್ಯಾಪಕವಾಗಿ ನಡೆಯುತ್ತಿದೆ ಎಂದರು.

'ಆರೋಗ್ಯಕರ ಸಮಯದಲ್ಲಿ ಗರ್ಭಧಾರಣೆ ಹಾಗೂ ಮಕ್ಕಳ ನಡುವಿನ ಆರೋಗ್ಯಕರ ಅಂತರ ಕಾಪಾಡುವುದರಿಂದ ತಾಯಿ ಮತ್ತು ಮಕ್ಕಳ ಆರೋಗ್ಯ ವೃದ್ಧಿಸುವುದರೊಂದಿಗೆ ಅನಗತ್ಯ ಗರ್ಭಧಾರಣೆಗಳನ್ನು ತಡೆಗಟ್ಟಬಹುದು' ಈ ವರ್ಷದ ಘೋಷಣೆಯಾಗಿದೆ ಎಂದು ತಿಳಿಸಿದರು.

ಬಾಲ್ಯ ವಿವಾಹ ತಡೆಗಟ್ಟುವುದು, ಹೆಣ್ಣಿಗೆ 18 ವರ್ಷ ಹಾಗೂ ಗಂಡಿಗೆ 21 ವರ್ಷ ತುಂಬಿದ ನಂತರವೇ ಮದುವೆ ಮಾಡುವುದು ಮತ್ತು ಕುಟುಂಬ ಯೋಜನೆಯನ್ನು ಸಮರ್ಪಕವಾಗಿ ಅಳವಡಿಸಿಕೊಳ್ಳುವ ಮೂಲಕ ದೇಶದ ಸಮಗ್ರ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿ ಡಾ.ಇಂದ್ರಾಣಿ .ವಿ., ಆಡಳಿತ ವೈದ್ಯಾಧಿಕಾರಿ ಡಾ.ಭಾರತಿ, ಸುರಕ್ಷಿತ ಗರ್ಭಪಾತ ಕಾರ್ಯಕ್ರಮದ ರಾಜ್ಯ ಕನ್ಸಲ್ಟೆಂಟ್ ದೊಡ್ಡನಗೌಡ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೇಣುಕಾ ಜಡಗನ್ನವರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಮ್, ಮಹಾದೇವಿ (ಎ.ಎಸ್.ಒ), ಹಿರಿಯ ಪ್ರಾಥಮಿಕ ಸುರಕ್ಷತಾ ಅಧಿಕಾರಿ ಮೇರಿ, ಆರೋಗ್ಯ ನಿರೀಕ್ಷಕ ಅರುಣ್ ಕುಮಾರ್ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಬಾಪೂಜಿ ನಗರದಲ್ಲಿ ಎಸ್‌ಐಆರ್ ಗಣತಿ ನಮೂನೆ ಫಾರಂ ವಿತರಣೆ ಪ್ರಕ್ರಿಯೆ ವೀಕ್ಷಿಸಿದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಗರದ ಬಾಪೂಜಿ ನಗರ ಬಡಾವಣೆಗೆ ಮಂಗಳವಾರ ಭೇಟಿ ನೀಡಿದ ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು, ಅಲ್ಲಿ ಸಾರ್ವಜನಿಕರಿಗೆ ವಿತರಿಸಲಾಗುತ್ತಿದ್ದ ಎಸ್‌ಐಆರ್ ಎನ್ಯುಮರೇಶನ್ ಫಾರಂ ವಿತರಣಾ ಪ್ರಕ್ರಿಯೆಯನ್ನು ಹತ್ತಿರದಿಂದ ವೀಕ್ಷಿಸಿದರು.

ಫಾರಂ ವಿತರಣೆಯಲ್ಲಿ ಯಾವುದೇ ಗೊಂದಲಗಳಿಗೆ ಆಸ್ಪದ ನೀಡದಂತೆ ಮತ್ತು ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ಫಾರಂ ತಲುಪುವಂತೆ ಕ್ರಮವಹಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

*ಶಾಲಾ ಬಿಸಿಯೂಟ ಸವಿದು ಗುಣಮಟ್ಟ ಪರಿಶೀಲಿಸಿದ ಜಿಲ್ಲಾಧಿಕಾರಿ:*

ಬಾಪೂಜಿ ನಗರದ ಭೇಟಿಯ ನಂತರ ನೇರವಾಗಿ ಆಂಧ್ರಾಳ್ ಗ್ರಾಮದ ಸರ್ಕಾರಿ ಪ್ರೌಢ ಶಾಲೆಗೆ ಜಿಲ್ಲಾಧಿಕಾರಿಗಳು ಭೇಟಿ ನೀಡಿದರು. ಶಾಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಪರಿಶೀಲಿಸಿದ ಅವರು, ಮಕ್ಕಳಿಗೆ ನೀಡುತ್ತಿರುವ ಆಹಾರವನ್ನು ವೀಕ್ಷಿಸಿದರು. ಬಳಿಕ ತಾವೂ ಕೂಡ ಊಟ ಸವಿದರು.

ಊಟದ ರುಚಿ ಮತ್ತು ಗುಣಮಟ್ಟವನ್ನು ಖುದ್ದಾಗಿ ಪರೀಕ್ಷಿಸಿದ ಡಿಸಿ, ಮಕ್ಕಳಿಗೆ ಪೌಷ್ಟಿಕ ಹಾಗೂ ಸ್ವಚ್ಛವಾದ ಆಹಾರವನ್ನು ನಿರಂತರವಾಗಿ ಒದಗಿಸುವಂತೆ ಶಾಲಾ ಮುಖ್ಯೋಪಾಧ್ಯಾಯರಿಗೆ ಸೂಚಿಸಿದರು.

*ಹಾಜರಾತಿ ವಹಿ ಪರಿಶೀಲನೆ ಮತ್ತು ಮೂಲಸೌಕರ್ಯ ವೀಕ್ಷಣೆ:*

ಬಿಸಿಯೂಟದ ಪರಿಶೀಲನೆಯ ನಂತರ ಶಾಲೆಯ ಆಡಳಿತಾತ್ಮಕ ಕಾರ್ಯಗಳ ಕಡೆಗೆ ಗಮನಹರಿಸಿದ ಜಿಲ್ಲಾಧಿಕಾರಿಯವರು, ಶಾಲೆಯ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಹಾಜರಾತಿ ಪುಸ್ತಕಗಳನ್ನು ಕೂಲಂಕುಷವಾಗಿ ಪರಿಶೀಲಿಸಿದರು.

ಶಾಲೆಯ ಸುರಕ್ಷತೆಯ ದೃಷ್ಟಿಯಿಂದ ಅತ್ಯಂತ ಅಗತ್ಯವಿರುವ ತಡೆಗೋಡೆ ನಿರ್ಮಾಣದ ಕುರಿತಾಗಿ ಮಹಾನಗರ ಪಾಲಿಕೆಯ ಅಧಿಕಾರಿಗಳೊಂದಿಗೆ ಸ್ಥಳದಲ್ಲೇ ಚರ್ಚೆ ನಡೆಸಿದರು. ಕಾಮಗಾರಿಯನ್ನು ಶೀಘ್ರವಾಗಿ ಕೈಗೆತ್ತಿಕೊಳ್ಳುವಂತೆ ಸೂಚನೆ ನೀಡಿದರು. ಶಾಲಾ ಮಕ್ಕಳ ಆಟದ ಮೈದಾನವನ್ನು ವೀಕ್ಷಿಸಿದ ಅವರು, ಮೈದಾನವನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಲು ಅಗತ್ಯಕ್ರಮ ಕೈಗೊಳ್ಳುವಂತೆ ಶಾಲಾ ಮುಖ್ಯಸ್ಥರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತ ನಂದೀಶ್, ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯ ನಿರಂಜನ್, ಪಾಲಿಕೆಯ ಇತರೆ ಅಧಿಕಾರಿಗಳು, ಬೂತ್ ಮಟ್ಟದ ಅಧಿಕಾರಿಗಳು, ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಸಿಬ್ಬಂದಿ ಹಾಜರಿದ್ದರು.

# ಮತದಾರರ ಪಟ್ಟಿ ಪರಿಷ್ಕರಣೆ ಚುರುಕು: SIR ಫಾರಂ ಭರ್ತಿ, ಜಾಗೃತಿ ಅಭಿಯಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಜು.14:ಯಾದಗಿರಿ ತಾಲೂಕಿನ ಕೂಡಲೂರು ಗ್ರಾಮದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (SIR) ಕಾರ್ಯಕ್ಕೆ ವೇಗ ನೀಡಲಾಗಿದ್ದು, ಅಂಗನವಾಡಿ ಶಿಕ್ಷಕಿ ಹಾಗೂ ಬೂತ್ ಮಟ್ಟದ ಅಧಿಕಾರಿ (BLO) ಮಾಲಾಶ್ರೀ ಅವರ ನೇತೃತ್ವದಲ್ಲಿ ಃಐಂ-2 ಸದಸ್ಯರ ಸಹಯೋಗದೊಂದಿಗೆ ಖಿಖಿಖಿ ಫಾರ್ಮ್ ಭರ್ತಿ ಮಾಡಿಸಿ, ಸಾರ್ವಜನಿಕರಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ವ್ಯಾಪಕ ಜಾಗೃತಿ ಮೂಡಿಸಲಾಯಿತು.

ಗ್ರಾಮದ ಮತದಾರರ ಪಟ್ಟಿಯನ್ನು ಸಮಗ್ರವಾಗಿ ಪರಿಷ್ಕರಿಸುವ ಉದ್ದೇಶದಿಂದ ಮನೆಮನೆಗೆ ತೆರಳಿ ಮತದಾರರ ವಿವರಗಳನ್ನು ಪರಿಶೀಲಿಸಲಾಯಿತು. ಹೊಸ ಮತದಾರರ ಸೇರ್ಪಡೆ, ಹೆಸರು, ವಿಳಾಸ ಹಾಗೂ ಇತರೆ ವಿವರಗಳ ತಿದ್ದುಪಡಿ ಸೇರಿದಂತೆ ಅಗತ್ಯ ದಾಖಲೆಗಳ ಪರಿಶೀಲನೆ ನಡೆಸಿ, ಸ್ಥಳದಲ್ಲೇ ಖಿಖಿಖಿ ಅರ್ಜಿಗಳನ್ನು ಭರ್ತಿ ಮಾಡಿಸಲಾಯಿತು.

ಮತದಾರರ ಪಟ್ಟಿಯಲ್ಲಿ ಯಾವುದೇ ಅರ್ಹ ನಾಗರಿಕರ ಹೆಸರು ಕೈತಪ್ಪದಂತೆ ನೋಡಿಕೊಳ್ಳುವುದು ಹಾಗೂ ತಪ್ಪು ಮಾಹಿತಿಯನ್ನು ಸರಿಪಡಿಸುವ ಉದ್ದೇಶದಿಂದ ಖಿಖಿಖಿ ಫಾರ್ಮ್ ಭರ್ತಿ ಮಾಡುವ ವಿಧಾನ, ಅಗತ್ಯ ದಾಖಲೆಗಳು ಹಾಗೂ BLA-2ರ ಪಾತ್ರದ ಕುರಿತು ಗ್ರಾಮಸ್ಥರಿಗೆ ಮಾಹಿತಿ ನೀಡಲಾಯಿತು. ಸಾರ್ವಜನಿಕರು ಸಹ ಉತ್ಸಾಹದಿಂದ ಭಾಗವಹಿಸಿ ತಮ್ಮ ದಾಖಲೆಗಳನ್ನು ಸಲ್ಲಿಸಿ ಪರಿಷ್ಕರಣೆ ಕಾರ್ಯಕ್ಕೆ ಸಹಕರಿಸಿದರು.

ಈ ಜಾಗೃತಿ ಕಾರ್ಯಕ್ರಮದಲ್ಲಿ ಯುವ ಮುಖಂಡ ಬಸವರಾಜ್ ಪೂಜಾರಿ, ಚಂದ್ರಪ್ಪ ಅಜೇರಿ, ಮಲ್ಲು ಸೈದಾಪುರ ಸೇರಿದಂತೆ ಅನೇಕರು ಉಪಸ್ಥಿತರಿದ್ದು, ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರುವುದನ್ನು ಕಡ್ಡಾಯವಾಗಿ ಪರಿಶೀಲಿಸಿಕೊಂಡು, ಅಗತ್ಯವಿದ್ದಲ್ಲಿ SIR ಫಾರ್ಮ್ ಸಲ್ಲಿಸಿ ಪರಿಷ್ಕರಣೆ ಮಾಡಿಸಿಕೊಳ್ಳುವಂತೆ ಮನವಿ ಮಾಡಿದರು.

ಅಧಿಕಾರಿಗಳು, ಃಐಔ ಮಾಲಾಶ್ರೀ, ಃಐಂ-2 ಸದಸ್ಯರು, ಸ್ಥಳೀಯ ಸಿಬ್ಬಂದಿ ಹಾಗೂ ಗ್ರಾಮಸ್ಥರ ಸಹಕಾರದಿಂದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಯಶಸ್ವಿಯಾಗಿ ನಡೆಯುತ್ತಿದ್ದು, ಮುಂಬರುವ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಈ ಅಭಿಯಾನವನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮುಂದುವರಿಸಲಾಗುತ್ತಿದೆ.

# ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ :ಜಾಗೃತಿ ಜಾಥಾ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ತಾಲ್ಲೂಕಿನಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಎಲ್ಲೆಡೆ ಜಾಗೃತಿ ಜಾಥಾ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ತಾಲ್ಲೂಕಿನ ತಹಶೀಲ್ದಾರ್ ಮಂಜುನಾಥ್ ಹಾಗೂ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಯವರಾದ ಹೊಂಗಯ್ಯ ಕೇರವರು ಡೋಲು ಬಾರಿಸುವ ಮೂಲಕ ಇಂದು ಚಾಲನೆ ನೀಡಿದರು. ತಾಲ್ಲೂಕಿನ ಗೋವಿಂದನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಹುಣಸೂರಿನಲ್ಲಿರುವ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಇಂದು ಆಯೋಜಿಸಲಾಗಿದ್ದ ಜಾಗೃತಿ ಜಾಥಾ ಮತ್ತು ಚಿತ್ರಕಲಾ ಸ್ಪರ್ಧಾ ಕಾರ್ಯಕ್ರಮದಲ್ಲಿ ಚಾಲನೆ ನೀಡಿದ ಇ.ಓ ಹೊಂಗಯ್ಯನವರು ಒಂದು ವಾರಗಳ ಕಾಲ ತಾಲ್ಲೂಕಿನಲ್ಲಿರುವ ಪ್ರೌಢಶಾಲೆಗಳಲ್ಲಿ ಮಕ್ಕಳಿಂದ ಮತದಾರರ ಪರಿಷ್ಕರಣೆಯ ಜಾಗೃತಿ ಮೂಡಿಸು ಚಿತ್ರಕಲೆಗಳನ್ನು ಬೀಡಿಸಿ ಪೋಷಕರಲ್ಲಿ ಅರಿವು ಮೂಡಿಸಲಾಗುತ್ತಿದೆಂದರು.

ಇದೇ ಸಂದರ್ಭದಲ್ಲಿ ತಾಲ್ಲೂಕಿನ ಹಳೇಬೀಡು ಗ್ರಾಮ ಪಂಚಾಯಿತಿಯಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಅರಿವು ಮೂಡಿಸಲು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ವೇಳೆ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರಾದ ರಾಮಣ್ಣ, ಮಾತನಾಡಿ ಗ್ರಾಮೀಣ ಭಾಗದಲ್ಲಿ ಮತದಾರರ ಪರಿಷ್ಕರಣೆಯಲ್ಲಿ ಯಾವ ಒಬ್ಬ ಪ್ರಜೇಯು ತಪ್ಪದೆ ಭಾಗವಹಿಸಿ ತಮ್ಮ ಮತವನ್ನು ಖಾತರಿ ಪಡಿಸಿಕೊಳ್ಳಿ ಎಂದರು. ಇದರ ಅಂಗವಾಗಿ ನಮ್ಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಂಜೀವಿನ ಒಕ್ಕೂಟ ಸದಸ್ಯರು, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತರು ರಂಗೋಲಿ



ಬೀಡಿಸುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಿರುತ್ತಾರೆಂದರು.

# ಮತದಾರರ ಸಹಕಾರದಿಂದ ಎಸ್ಐಆರ್ ಅಭಿಯಾನ ಯಶಸ್ಸಿನತ್ತ ಸೈಯದ್ ಬಾಬಾ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಜು 14: ಮತದಾರರ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ (ಖಖಖ) ಕಾರ್ಯದ ಅಂಗವಾಗಿ ಗುರುಮಠಕಲ್ ಬೂತ್ ಸಂಖ್ಯೆ 122ರಲ್ಲಿ ಫಾರ್ಮ್ ಸಲ್ಲಿಕೆ ಪ್ರಕ್ರಿಯೆ ವೇಗ ಪಡೆದುಕೊಂಡಿದೆ, ಒಟ್ಟು 1,400 ಮತದಾರರಲ್ಲಿ ಮಂಗಳವಾರದವರೆಗೆ 800 ಮಂದಿ ತಮ್ಮ ಎಸ್ಐಆರ್ ಫಾರ್ಮ್‌ಗಳನ್ನು ತುಂಬಿ ಬಿಎಲ್ಒ ನರಸಿಂಗಮ್ಮ ಹಾಗೂ ಶ್ರೀದೇವಿಯವರಿಗೆ ನೀಡಲಾಯಿತು.


ಈ ಸಂದರ್ಭದಲ್ಲಿ ಮತದಾರರಿಗೆ ಎಸ್ಐಆರ್ ಫಾರ್ಮ್ ಸಲ್ಲಿಸುವ ಕುರಿತು ಕಾಂಗ್ರೆಸ್ ಮುಖಂಡರಾದ ಸಯ್ಯದ್ ಬಾಬಾ ಜಾಗೃತಿ ಮೂಡಿಸಿದರು ಮತದಾರರ ಸಹಕಾರದಿಂದ ಎಸ್ಐಆರ್ ಅಭಿಯಾನ ಯಶಸ್ಸಿನತ್ತ ಸಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಾರ್ವಜನಿಕರಾದ ಸಾಮಿ ಉದ್ದೀನ್ ಪೇಶ್ಇಮಾಮ್, ಮುಖ್ತಾರ್ ಮೌಲಾಸಾಬ್, ಜಾವೇದ್ ಅಹ್ಮದ್, ಜಾವೇದ್ ಹಾಗೂ ವಿಕಾರ್ ಉಪಸ್ಥಿತರಿದ್ದರು.



ಯಾದಗಿರಿ: ನೂತನ ಸಮನ್ವಯ ಸುವಾರ್ತೆ ಕನ್ನಡ ದಿನ ಪತ್ರಿಕೆಯನ್ನು ಡಿ.ಕೆ.ದೇವಿಂದ್ರರವರು ಪ್ರಾರಂಭ ಮಾಡಿದ ಹಿನ್ನಲೆಯಲ್ಲಿ ಕರ್ನಾಟಕ ರಾಜ್ಯ ಶ್ರಮಜೀವಿ ಕಟ್ಟಡ ಮತ್ತು ಇತರೆ ಕಾರ್ಮಿಕ ಸೇವಾ ಸಂಘದ ಜಿಲ್ಲಾಧ್ಯಕ್ಷ ಭೀಮರಾಯ ಹತ್ತಿಕುಣಿ ಅವರು ತಮ್ಮ ಕಾರ್ಯಾಲಯಕ್ಕೆ ಕರೆಸಿ ಗೌರವ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಸುವರ್ಣ ಕಾರನಾಡು ಪತ್ರಿಕೆಯ ಜಿಲ್ಲಾ ವರದಿಗಾರ ಮಲ್ಲಿಕಾರ್ಜುನ ಕುಂಬಾರಹಳ್ಳಿ, ಶಿವು ಮತ್ತು ಮುಂದದವರು ಇದ್ದರು.

# ರಾಜ್ಯದಲ್ಲಿ ಉತ್ತಮ ಮಳೆಗಾಗಿ ಮಾಜಿ ಸಚಿವ ವೆಂಕಟರಾವ್ ನಾಡಗೌಡರಿಂದ ಪಾದಯಾತ್ರೆ




• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ರಾಜ್ಯದಲ್ಲಿ ಉತ್ತಮ ಮಳೆಯಾಗಿ, ನಾಡಿನಲ್ಲಿ ಸುಭಿಕ್ಷೆ ನೆಲೆಸಲಿ ಮತ್ತು ರೈತರ ಸರ್ವಾಂಗೀಣ ಅಭಿವೃದ್ಧಿಯಾಗಲಿ ಎಂದು ಪ್ರಾರ್ಥಿಸಿ, ಜೆಡಿಎಸ್ ಮುಖಂಡರು, ಕೆಒಎಫ್ ರಾಜ್ಯ ಅಧ್ಯಕ್ಷರು ಹಾಗೂ ಮಾಜಿ ಸಚಿವರಾದ ವೆಂಕಟರಾವ್ ನಾಡಗೌಡ ಅವರು ವಿಶೇಷ ಪಾದಯಾತ್ರೆ ಹಮ್ಮಿಕೊಳ್ಳಲಾಗಿತ್ತು.

ಪಾದಯಾತ್ರೆಗೂ ಮುನ್ನ ವೆಂಕಟರಾವ್ ನಾಡಗೌಡ ಅವರು ತಮ್ಮ ಸ್ವಗ್ರಾಮ ಜವಳಗೇರಾದ ಮನೆದೇವರಾದ ಶ್ರೀ ವೆಂಕಟೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ, ರೈತರ ಹಿತದೃಷ್ಟಿಯಿಂದ ಮಳೆರಾಯನ ಕೃಪೆಗಾಗಿ ಪ್ರಾರ್ಥಿಸಿದರು.

ಕಾರ್ಯಕ್ರಮದಲ್ಲಿ ಮಸ್ಕಿ ಗಚ್ಚಿನಮಠದ ವರರುದ್ರ ಮುನಿ ಸ್ವಾಮೀಜಿ, ರೌಡಕುಂದಾದ ವೆಂಕಟಗಿರಿ ಕ್ಯಾಂಪಿನ ಸಿದ್ದರಾಮೇಶ್ವರ ಶರಣರು, ತುರ್ವಿಹಾಳದ ಮಾದಯ್ಯಗುರುವಿನ್, ಮಲ್ಲಯ್ಯ ತಾತ ಗೋನವಾರ, ತುರ್ವಿಹಾಳದ ಅಮರಗುಂಡ ಸ್ವಾಮೀಜಿ, ವೀರೇಶ ಯಡಿಯೂರಮಠ ಸಾರಿದಂತೆ ಅನೇಕ ಸ್ವಾಮೀಜಿಗಳು, ಚರ್ಚ್ ಫಾದರ್ ಗಳು, ಮೌಲಾನಾಗಳು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ನಂತರ ಸಿಂಧನೂರು ನಗರದ ಕೋಟೆ ಈರಣ್ಣ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರ ಸಮ್ಮುಖದಲ್ಲಿ ಪಾದಯಾತ್ರೆಗೆ ಚಾಲನೆ ನೀಡಲಾಯಿತು. ಈ ಪಾದಯಾತ್ರೆಯು ಹೊಸಳ್ಳಿ (ಇ.ಜೆ), ಅಮರಾಪುರ, ಸಸಾಲಮರಿ ಕ್ಯಾಂಪ್, ರೌಡಕುಂದಾ ಹಾಗೂ ಸೋಮಲಪುರ ಗ್ರಾಮಗಳ ಮೂಲಕ ಹಾದುಹೋಗಿ, ಅಂಬಾಮಠದ ಆದಿಶಕ್ತಿ ಶ್ರೀ ಅಂಬಾದೇವಿ ದೇವಸ್ಥಾನವನ್ನು ತಲುಪಿತು.

ಪಾದಯಾತ್ರೆಯ ಸಮಾರೋಪದಲ್ಲಿ ವೆಂಕಟರಾವ್ ನಾಡಗೌಡ ಅವರು ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿ, ಮಳೆ ಸುರಿದು ರೈತರು ಉತ್ತಮ ಬೆಳೆ ತೆಗೆದಾಗ ಮಾತ್ರ ರಾಜ್ಯ ಮತ್ತು ದೇಶದ ಅಭಿವೃದ್ಧಿ ಸಾಧ್ಯ. ರೈತರು, ಖಾಕಿ ಮತ್ತು ಖಾವಿ ಎಲ್ಲರೂ ಸುರಕ್ಷಿತವಾಗಿರಬೇಕಾದರೆ ರೈತರ ಹಿತ ಮುಖ್ಯ. ರೈತರ ಸಂಕಷ್ಟಕ್ಕೆ ಸ್ಪಂದಿಸುವುದು ನಮ್ಮ ಪಕ್ಷದ ಬದ್ಧತೆ, ನಮ್ಮದು ರೈತರ ಪರವಾಗಿರುವ ಪಕ್ಷ ಎಂದು ಹೇಳಿದರು. ಈ ಸಂದರ್ಭದಲ್ಲಿ ಮಾನ್ವಿ ತಾಲೂಕಿನ ಮಾಜಿ ಶಾಸಕರಾದ ವೆಂಕಟಪ್ಪನಾಯಕ, ಜೆಡಿಎಸ್ ತಾಲೂಕು ಅಧ್ಯಕ್ಷ ಬಸವರಾಜ ನಾಡಗೌಡ, ಧರ್ಮನಗೌಡ ಮಲ್ಕಾಪುರ, ಜಿ. ಸತ್ಯನಾರಾಯಣ ಹಂಚಿನಾಳ, ಚಂದ್ರಭೂಪಾಲ ನಾಡಗೌಡ, ಅಭಿಷೇಕ ನಾಡಗೌಡ, ನಾಗೇಶ್ ಹಂಚಿನಾಳ, ಶಂಕರಗೌಡ ಎಲೆಕೂಡಗಿ, ವೆಂಕಟೇಶ, ವೆಂಕೋಬಣ್ಣ ಕಲ್ಲೂರು, ಶೇಕ್ಷಾವಲಿ ಜನತಾ ಕಾಲೋನಿ, ಎಸ್.ದೇವೇಂದ್ರಗೌಡ ಹೊಸಳ್ಳಿ (ಇ.ಜೆ), ರವಿ ಪನ್ನಾಪುರ, ರೆಡ್ಡಿ, ಸಲ್ಮಾನ್ ಜಾಹಗೀರ್ ಅಸೀಫ್ ಸೇರಿದಂತೆ ಸಾವಿರಾರು ಸಂಖ್ಯೆಯ ಪಕ್ಷದ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಪಾಲ್ಗೊಂಡಿದ್ದರು.

# ಪ್ರಾವಿಡೆಂಟ್ ಫಂಡ್ ಟ್ರಸ್ಟ್‌ಗಳಿಂದ ಕ್ಷಮಾದಾನ ಯೋಜನೆಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜು.14: ಕೇಂದ್ರಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯವು ಆದಾಯ ತೆರಿಗೆ ಕಾಯ್ದೆ–1961ರ ಅಡಿಯಲ್ಲಿ ಗುರುತಿಸಲ್ಪಟ್ಟ ವಿನಾಯಿತಿ ಪಡೆದ ಭವಿಷ್ಯನಿಧಿ (ಪಿಎಫ್) ಟ್ರಸ್ಟ್‌ಗಳನ್ನು ನಿರ್ವಹಿಸುವ ಸಂಸ್ಥೆಗಳಿಗೆ ತಮ್ಮ ಸ್ಥಿತಿಯನ್ನು ಕ್ರಮಬದ್ಧಗೊಳಿಸಲು "ಕ್ಷಮಾದಾನ ಯೋಜನೆ– 2026" ಎಂಬ ಯೋಜನೆ ಹೊಸದಾಗಿ ಪರಿಚಯಿಸಿ ಒಂದು ಬಾರಿಯ ಅವಕಾಶ ಕಲ್ಪಿಸಿದ್ದು, ಲಾಭ ಪಡೆಯಲು ಅರ್ಹ ಪ್ರಾವಿಡೆಂಟ್ ಫಂಡ್ ಟ್ರಸ್ಟ್ ಗಳಿಂದ ಅರ್ಜಿ ಆಹ್ವಾನಿಸಿದೆ. ಕೇಂದ್ರ ಸರ್ಕಾರವು 2026ರ ಜೂನ್ 9 ರಂದು ಅಧಿಸೂಚನೆ ಹೊರಡಿಸಿ 6 ತಿಂಗಳ ಒಳಗಾಗಿ ಕ್ಷಮದಾನ ಯೀಜನೆ ಲಾಭ ಪಡೆಯಲು ಅರ್ಜಿ ಆಹ್ವಾನಿಸಿದ್ದು, ವರ್ಗ–1ರಡಿ ವಿನಾಯಿತಿ ಪಡೆಯದೆ ಸ್ಥಾಪನೆಯಾಗಿ ಈಗಾಗಲೇ ಅನುಸರಣೆಯನ್ನು ಪ್ರಾರಂಭಿಸಿರುವ ಅಥವಾ ವಿನಾಯಿತಿ ಪಡೆಯದ ಸ್ಥಾಪನೆಯಾಗಿ ನಿರೀಕ್ಷಿತ ಅನುಸರಣೆಯನ್ನು ಆಯ್ಕೆ ಮಾಡಿಕೊಳ್ಳುತ್ತಿರುವ ಪೂರ್ವಾನ್ವಯ ಟ್ರಸ್ಟ್‌ಗಳು ತಾವಾಗಿಯೇ ಕ್ರಮಬದ್ಧಗೊಳಿಸುವಿಕೆಯನ್ನು ಬಯಸುವ ಸಂಸ್ಥೆಗಳು ಅರ್ಹವಾಗಿವೆ. ಅದೇ ರೀತಿ ವರ್ಗ–2ರಲ್ಲಿ ಸಾಮಾಜಿಕ ಭದ್ರತಾ ಸಂಹಿತೆ–2020ರ ಅಡಿಯಲ್ಲಿ ವಿನಾಯಿತಿ ಪಡೆದ ಸಂಸ್ಥೆಗಳಾಗಿ ಕಾರ್ಯನಿರ್ವಹಿಸುವುದನ್ನು ಮುಂದುವರೆಸಲು ಆಯ್ಕೆ ಮಾಡುವ ಮತ್ತು ಹಿಂದಿನ ಸೂಚಿತದಿನದಿಂದ ಇಂದಿನವರೆಗೆ ಸಂಪೂರ್ಣವಾಗಿ ಟ್ರಸ್ಟ್ ಕ್ರಮಬದ್ಧಗೊಳಿಸುವಿಕೆಯನ್ನು ಬಯಸುವ ಸಂಸ್ಥೆಗಳು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಾಮಾನ್ಯ ಭವಿಷ್ಯ ನಿಧಿ ಪ್ರಾದೇಶಿಕ ಆಯುಕ್ತ ಎಂ.ಸುಬ್ರಮಣ್ಯಂ ತಿಳಿಸಿದ್ದಾರೆ. ಈ ಯೋಜನೆಯಿಂದ ವಿನಾಯಿತಿ ಸ್ಥಿತಿ ಮತ್ತು ಟ್ರಸ್ಟ್ ಮಾನ್ಯತೆಯನ್ನು ಟ್ರಸ್ಟ್‌ನ ಪ್ರಾರಂಭದಿಂದ ಗೊತ್ತುಪಡಿಸಿದ ದಿನಾಂಕದ ವರೆಗೆ ನೀಡಲಾಗುತ್ತದೆ.

# ಐತಿಹಾಸಿಕ ಗುಡ್ಡದ ದೇವರು (ವೀರಗಲ್ಲು) ಪುನಃ ಪ್ರತಿಷ್ಠಾಪನೆ: ಇತಿಹಾಸ ಉಳಿಸಲು ಯುವಕರ ಸಂಕಲ್ಪ





• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಪಟ್ಟಣದ ನೇಕಾರರ ಬಡಾವಣೆಗೆ ಹೊಂದಿಕೊಂಡಿರುವ ಐತಿಹಾಸಿಕ ಗುಡ್ಡದ ದೇವರು (ವೀರಗಲ್ಲು) ಪುನಃ ಪ್ರತಿಷ್ಠಾಪನಾ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರಿತು. ಈ ಕಾರ್ಯಕ್ರಮಕ್ಕೆ ಹಿಂದೂ ಯುವ ಘರ್ಜನೆ ಸಂಘಟನೆ ಸಮಿತಿ ಹಾಗೂ ಸ್ಥಳೀಯ ಯುವಕರು ಸಕಲ ಸಿದ್ಧತೆಗಳನ್ನು ಕೈಗೊಂಡು ಯಶಸ್ವಿಯಾಗಿ ಆಯೋಜಿಸಿದರು. ಕಾರ್ಯಕ್ರಮದಲ್ಲಿ ಗುರುಮಠಕಲ್ ಯುವಕರ ನೆಚ್ಚಿನ ಮುಖಂಡ ರಾಜಾರಮೇಶ್ ಗೌಡ ಸೇರಿದಂತೆ ಹಿಂದೂ ಯುವ ಘರ್ಜನೆಯ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಅಪಾರ ಸಂಖ್ಯೆಯ ಸಾರ್ವಜನಿಕರು ಭಾಗವಹಿಸಿ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಿಂದೂ ಯುವ ಘರ್ಜನೆ ಅಧ್ಯಕ್ಷ ವೆಂಕಟೇಶ್‌ಮುದಿರಾಜ್, "ಸುಮಾರು 500–600 ವರ್ಷಗಳ ಇತಿಹಾಸ ಹೊಂದಿರುವ ಈವೀರಗಲ್ಲು ನಮ್ಮ ಪೂರ್ವಜರ ಶೌರ್ಯ ಮತ್ತು ತ್ಯಾಗದ ಸಂಕೇತವಾಗಿದೆ. ಇಂತಹ ಪುರಾತನ ಶಿಲೆಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆಗಾರಿಕೆ. ಕಾಲಕ್ರಮೇಣ ಈ ವೀರಗಲ್ಲು ದೈವಶಿಲೆಯಾಗಿ ಆರಾಧನೆಗೆ ಪಾತ್ರವಾಗಿದ್ದು, ಶುಭ ಕಾರ್ಯಗಳಲ್ಲಿ ನೈವೇದ್ಯ ಸಮರ್ಪಿಸುವ ಸಂಪ್ರದಾಯವೂ ಬೆಳೆದಿದೆ. ಮುಂದೆಯೂ ಈ ಐತಿಹಾಸಿಕ ವೀರಗಲ್ಲಿಗೆ ಸಲ್ಲಬೇಕಾದ ಗೌರವ ಮತ್ತು ಸಂರಕ್ಷಣೆಯಲ್ಲಿ ಯಾವುದೇ ಲೋಪವಾಗದಂತೆ ನಾವು ಎಲ್ಲರೂ ಶ್ರಮಿಸುತ್ತೇವೆ. ಈ ಪುನಃ ಪ್ರತಿಷ್ಠಾಪನೆ ಕಾರ್ಯದಲ್ಲಿ ಭಾಗಿಯಾಗಿರುವುದು ನಮಗೆ ಹೆಮ್ಮೆಯ ಸಂಗತಿಯಾಗಿದೆ," ಎಂದು ಹೇಳಿದರು. ಕಾರ್ಯಕ್ರಮದಲ್ಲಿ ನರಸಪ್ಪ ಗಂಗಾನೊಳ, ಸಾಬಣ್ಣ ಕಂದೂರ್, ಮುಕುಂದ, ಭೀಮು ಕಂದೂರ್, ರಾಹುಲ್ ಮನ್ನೇ, ಅಂಜಿ ಪುರುಷೋತ್ತಮ, ಪರಮಾನಂದ ಮಜ್ಜಿಗೆ, ಮಹೇಶ್ ಗಡ್ಡಂ ಸೇರಿದಂತೆ ಅನೇಕರು ಇದ್ದರು.

# ಆತ್ಮಹತ್ಯೆ ಮಾಡಿಕೊಂಡ ರೈತನ ಕುಟುಂಬಸ್ಥರ ಮನೆಗೆ ಭೇಟಿ ರಾಚಣ್ಣಗೌಡ ಮುದ್ನಾಳರಿಂದ 51 ಸಾವಿರ ರೂ. ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಮಳೆ ಇಲ್ಲದೇ ಜಿಲ್ಲೆಯ ರೈತರು ತೊಂದರೆಯಲ್ಲಿದ್ದು, ಸರ್ಕಾರ ಈ ಕೂಡಲೇ ಗಮನ ಹರಿಸಿ ಸೂಕ್ತ ಕ್ರಮ ಜರುಗಿಸಬೇಕು ಮತ್ತು ಜಿಲ್ಲೆಯ ಶಾಸಕರು ಮಂತ್ರಿ ಆಗುವ ಆಶೆ ಬಿಟ್ಟು ಹಳ್ಳಿಗಳಿಗೆ ಭೇಟಿ ನೀಡಿ ರೈತರ ಕಷ್ಟ ಕೇಳುವ ಮೂಲಕ ಇನ್ನಷ್ಟು ಆತ್ಮಹತ್ಯೆಗಳು ತಡೆಯಬೇಕೆಂದು ಮಾಜಿ ಸಚಿವ ರಾಜೂಗೌಡ ಆಗ್ರಹಿಸಿದರು.

ತಾಲೂಕಿನ ಚಟ್ನಳ್ಳಿ ಗ್ರಾಮಕ್ಕೆ ಮಂಗಳವಾರ ಬಿಜೆಪಿ ಮುಖಂಡರ ನಿಯೋಗದೊಂದಿಗೆ ಭೇಟಿ ನೀಡಿದ ಅವರು ಇತ್ತೀಚಿಗೆ ಆತ್ಮಹತ್ಯೆ ಮಾಡಿಕೊಂಡ ರೈತ ಮಲ್ಲಿಕಾರ್ಜುನ ಅವರ ಕುಟುಂಬಸ್ಥರನ್ನು ಭೇಟಿ ಸುದ್ದಿಗಾರರೊಂದಿಗೆ ಮಾತನಾಡಿದರು. ಒಂದೇ ವಾರದಲ್ಲಿ ಚಟ್ನಳ್ಳಿ ಗ್ರಾಮದಲ್ಲಿ ಇಬ್ಬರು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಕಳೆದ ಒಂದುವರೆ ತಿಂಗಳಿಂದ ಮಳೆ ಇಲ್ಲ, ಬಿತ್ತಿದ ಬೆಳೆ ಬಹುತೇಕ ಒಣಗಿವೆ. ಆದರೂ ರಾಜ್ಯ ಸರ್ಕಾರಕ್ಕೆ ಕಿಂಚಿತ್ತು ಗಮನವಿಲ್ಲ. ಕೃಷಿ ಸಚಿವರೇ ಇಲ್ಲದ ಡಿ.ಕೆ.ಶಿವಕುಮಾರ ನೇತೃತ್ವದ ಸಂಪುಟದ ಕೆಲವೇ ಸಚಿವರು ಬೇರೆ, ಬೇರೆ ವಿಚಾರಗಳಿಗೆ ಒತ್ತು ನೀಡುತ್ತಿದ್ದಾರೆ. ಆದರೇ ಅನ್ನದಾತನ ನೆರವಿಗೆ ಬರುತ್ತಿಲ್ಲ. ಕೂಡಲೇ ಸರ್ಕಾರ ಇತ್ತ ಚಿತ್ತ ಹರಿಸಬೇಕು. ನಿರ್ಲಕ್ಷ್ಯವಹಿಸಿದರೆ ಬಿಜೆಪಿ ಬೀದಿಗಿಳಿದು ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಸಿದರು. ಬಿಡದಿ ಟೌನ್ ಶಿಪ್ ರೈತರ ಮನವೊಲಿಸಿ ಮಾಡಬೇಕೇ ವಿನಾಃ ದಲ್ಲಾಳರಿಗೆ ಅನುಕೂಲವಾಗಲು ಮಾಡಬಾರದೆಂದು ರಾಜೂಗೌಡ ಹೇಳಿದರು.

ಬಿಜೆಪಿ ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ ಅವರು ವೈಯಕ್ತಿಕವಾಗಿ 51 ಸಾವಿರ ರೂ. ಪರಿಹಾರವನ್ನು ಮೃತ ಮಲ್ಲಿಕಾರ್ಜುನ ಹೆಂಡತಿ, ಮಕ್ಕಳಿಗೆ ನೀಡಿದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜಪ್ಪ ವಿಭೂತಿಹಳ್ಳಿ, ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸದಸ್ಯ ಮಹೇಶರೆಡ್ಡಿ ಮುದ್ನಾಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪರುಶುರಾಮ ಕುರಕುಂದಾ, ಬಿಜೆಪಿ ಯುವ ಘಟಕದ ಜಿಲ್ಲಾಧ್ಯಕ್ಷ ಶ್ರೀಧರ ಸಾಹುಕಾರ, ಭೀಮಣ್ಣಗೌಡ ಖ್ಯಾತನಾಳ, ಸಿದ್ದಣ್ಣಗೌಡ ಕಾಡಂನೊರ, ಡಾ.ಚಂದ್ರಶೇಖರ ಸುಬೇದಾರ, ವಿಜಯಕುಮಾರ ಸಾಹುಕಾರ, ಸುರೇಶ ಮಾಲಿಪಾಟೀಲ್, ಬಸವರಾಜ ಸೊನ್ನದ, ಸೋಮಯ್ಯ ಸ್ವಾಮಿ ಹಿರೇಮಠ, ಚಂದಪ್ಪ ಕಾವಲಿ, ರಾಜಶೇಖರ ಕಾಡಂನೂರ ಸೇರಿದಂತೆಯೇ ಇತರರಿದ್ದರು.

## ಬರದ ಸಂಕಷ್ಟದಿಂದ ಕಂಗಾಲಾದ ರೈತರು; ಪೋಚಮ್ಮ ದೇವಿಯ ಸನ್ನಿಧಿಯಲ್ಲಿ ಮಳೆಗಾಗಿ ಪ್ರಾರ್ಥನೆ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ಕಳೆದ ಒಂದೂವರೆ ತಿಂಗಳಿನಿಂದ ಸಮರ್ಪಕವಾಗಿ ಮುಂಗಾರು ಮಳೆಯಾಗದ ಹಿನ್ನೆಲೆಯಲ್ಲಿ ಬೆಳೆಗಳು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಮಳೆಗಾಗಿ ಪಟ್ಟಣದ ರೈತರು ಹಾಗೂ ಮಹಿಳೆಯರು ಕುಂಭಹೊತ್ತು ಡೊಳ್ಳು ವಾದ್ಯಗಳೊಂದಿಗೆ ಪೋಚಮ್ಮ ದೇವಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥನೆ ಮಾಡಿದರು.

ಮನೆಯಿಂದ ಕುಂಭ ಹೊತ್ತು ಬಂದ ಮಹಿಳೆಯರು ದೇವಸ್ಥಾನದ ಸುತ್ತ ಐದು ಪ್ರದಕ್ಷಿಣೆ ಹಾಕಿ, ದೇವಿಗೆ ವಿಶೇಷ ಪೂಜೆ ಸಲ್ಲಿಸಿ ಉತ್ತಮ ಮಳೆಯಾಗಿ ರೈತರ ಬೆಳೆಗಳು ಸಮೃದ್ಧಿಯಾಗಲಿ ಎಂದು ಬೇಡಿಕೊಂಡರು. ಈ ಸಂದರ್ಭದಲ್ಲಿ ಮಾತನಾಡಿದ ಹಿರಿಯರು, "ಪ್ರತಿ ವರ್ಷ ಇಂತಹ ಸಂದರ್ಭದಲ್ಲಿ ಪೋಚಮ್ಮ ದೇವಿಗೆ ಕುಂಭಹೊತ್ತು ಹಾಗೂ ಬೋನಲು ಸಲ್ಲಿಸುವ ಸಂಪ್ರದಾಯವಿದೆ. ಈ ಪೂಜೆ ಬಳಿಕ ಮಳೆ ಸುರಿಯುತ್ತದೆ ಎಂಬುದು ನಮ್ಮ ನಂಬಿಕೆ. ದೇವಿ ನಮ್ಮನ್ನು ಎಂದಿಗೂ ಕೈಬಿಡುವುದಿಲ್ಲ" ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕಳೆದ ಒಂದೂವರೆ ತಿಂಗಳಿನಿಂದ ಸಮರ್ಪಕ ಮಳೆಯಾಗದ ಕಾರಣ ತೊಗರಿ, ಹೆಸರೆ ಸೇರಿದಂತೆ ಹಲವು ಬೆಳೆಗಳು ಬೆಳವಣಿಗೆ ಕಾಣದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರವೂ ರೈತರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿ, ಬೆಳೆ ನಷ್ಟಕ್ಕೆ ಎಕರೆಗೆ ಸೂಕ್ತ ಪರಿಹಾರ ಘೋಷಿಸಬೇಕು ಎಂದು ರೈತರು ಆಗ್ರಹಿಸಿದರು. ಮಳೆಗಾಗಿ ನಡೆದ ಈ ವಿಶೇಷ ಪೂಜೆಯಲ್ಲಿ ರೈತರು, ಮಹಿಳೆಯರು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಉತ್ತಮ ಮಳೆಯಾಗಲೆಂದು ದೇವಿಯಲ್ಲಿ ಪ್ರಾರ್ಥನೆ ಸಲ್ಲಿಸಿದರು.

# ಜೋಗಿ ಸಮುದಾಯಕ್ಕೆ ಹಂಡಿ ಜೋಗಿ ಜಾತಿ ಪ್ರಮಾಣ ಪತ್ರ ನೀಡುವಂತೆ ತಹಶೀಲ್ದಾರ್‌ಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ಪಟ್ಟಣದ ಜೋಗಿ ಸಮುದಾಯದ ಸದಸ್ಯರಿಗೆ 'ಹಂಡಿ ಜೋಗಿ' (ಪರಿಶಿಷ್ಟ ಜಾತಿ) ಎಂದು ಜಾತಿ ಪ್ರಮಾಣ ಪತ್ರ ನೀಡುವಂತೆ ಒತ್ತಾಯಿಸಿ, ಅಖಂಡ ಕರ್ನಾಟಕ ಅಲೆಮಾರಿ ಪಕ್ಷ ಹಾಗೂ ಜಾತಿ ಹಂಡಿ ಜೋಗಿ ಸಮಾಜ ಸುಧಾರಕ ಸಂಘ (ರಿ.), ಕುಕನೂರು ತಾಲೂಕು ವತಿಯಿಂದ ಇಂದು (ಮಂಗಳವಾರ) ಗ್ರೇಡ್–1 ತಹಶೀಲ್ದಾರ್ ಮುರುಳಿದರಾವ್ ಕುಲಕರ್ಣಿ ಅವರಿಗೆ ಮನವಿ ಸಲ್ಲಿಸಲಾಯಿತು. ಇಂದು ತಹಶೀಲ್ದಾರ್ ಕಚೇರಿ ಮುಂಭಾಗದಲ್ಲಿ ಸಮುದಾಯದ ಮುಖಂಡರು ಹಾಗೂ ಮಹಿಳೆಯರು ಸೇರಿ ಮನವಿ ಸಲ್ಲಿಸಿ, ಮಾತಾಡಿದ ಶಿವರಾಜ್ ಜೋಗಿನ, 'ನಮ್ಮ ಸಮುದಾಯವು ಅತ್ಯಂತ ಸಣ್ಣ ಹಾಗೂ ಹಿಂದುಳಿದ ಸಮುದಾಯವಾಗಿದ್ದು, ಬಹುತೇಕ ಕುಟುಂಬಗಳು ಕಿಲಿಪತ್ತಿ, ಡಬ್ಬಾ ರಿಪೇರಿ ಸೇರಿದಂತೆ ಸಾಂಪ್ರದಾಯಿಕ ವೃತ್ತಿಯನ್ನೇ ಅವಲಂಬಿಸಿ ಜೀವನ ಸಾಗಿಸುತ್ತಿವೆ' ಎಂದು ವಿವರಿಸಿದರು.

ಆಧುನಿಕ ವಸ್ತುಗಳು ಮಾರುಕಟ್ಟೆಗೆ ಬಂದ ಪರಿಣಾಮ ತಮ್ಮ ಸಾಂಪ್ರದಾಯಿಕ ವೃತ್ತಿಗೆ ತೀವ್ರ ಹೊಡೆತ ಬಿದ್ದಿದ್ದು, ಅನೇಕ ಕುಟುಂಬಗಳು ಜೀವನೋಪಾಯದ ಸಂಕಷ್ಟ ಎದುರಿಸುತ್ತಿವೆ. ಹಲವರಿಗೆ ಸ್ವಂತ ಮನೆಗಳೂ ಇಲ್ಲದೆ ಅಂಗಡಿಗಳನ್ನು ಹಾಕಿಕೊಂಡು ಜೀವನ ನಡೆಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಇದೇ ವೇಳೆ, ಸರ್ಕಾರ ಹಲವು ವರ್ಷಗಳ ಹಿಂದೆಯೇ 'ಹಂಡಿ ಜೋಗಿ' ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸಿದ್ದು, ಕೊಪ್ಪಳ, ಬಳ್ಳಾರಿ, ಕಾರಟಗಿ, ಕನಕಗಿರಿ, ಕುರುಗೋಡು, ಕೊಟ್ಟೂರು ಸೇರಿದಂತೆ ವಿವಿಧ ಭಾಗಗಳಲ್ಲಿ ಜಾತಿ ಪ್ರಮಾಣ ಪತ್ರ ನೀಡಲಾಗುತ್ತಿದೆ. ಆದರೆ ಕುಕನೂರು ತಾಲೂಕಿನಲ್ಲಿ ಮಾತ್ರ ಕಳೆದ ಮೂರು–ನಾಲ್ಕು ತಿಂಗಳಿಂದ ಜಾತಿ ಪ್ರಮಾಣ ಪತ್ರ ನೀಡುವಲ್ಲಿ ವಿಳಂಬ ಹಾಗೂ ಗೊಂದಲ ಉಂಟಾಗಿದ್ದು, ಅರ್ಹರಿಗೆ ಪ್ರಮಾಣ ಪತ್ರ ಸಿಗುತ್ತಿಲ್ಲ ಎಂದು ಸಮುದಾಯದ ಮುಖಂಡರು ಆರೋಪಿಸಿದರು.

ಈ ಸಮಸ್ಯೆಯನ್ನು ಸರ್ಕಾರದ ಗಮನಕ್ಕೆ ತಂದು, ಕುಕನೂರು ತಾಲೂಕಿನ ಅರ್ಹ ಫಲಾನುಭವಿಗಳಿಗೆ 'ಹಂಡಿ ಜೋಗಿ' ಪರಿಶಿಷ್ಟ ಜಾತಿಯ ಜಾತಿ ಪ್ರಮಾಣ ಪತ್ರವನ್ನು ತ್ವರಿತವಾಗಿ ನೀಡುವಂತೆ ತಹಶೀಲ್ದಾರ್ ಮೂಲಕ ಸರ್ಕಾರಕ್ಕೆ ಶಿಫಾರಸು ಮಾಡುವಂತೆ ಮನವಿಯಲ್ಲಿ ಆಗ್ರಹಿಸಲಾಯಿತು.

ಈ ವೇಳೆಯಲ್ಲಿ ಹಂಡಿ ಜೋಗಿ ಸಮಾಜದ ಮಂಜುನಾಥ ಹಂಡಿ ಜೋಗಿ, ಅಶೋಕ, ಗಿರೀಶ್, ರಾಣಪ್ಪ, ಮಾರುತಿ, ನಾಗರಾಜ್ ಆನಂದ, ಅನ್ನಪೂರ್ಣ, ಪದ್ಮ, ರಾಧಾ, ಮಂಜುಳಾ, ಲಲಿತವ್ವ ಸಂಘದ ಪದಾಧಿಕಾರಿಗಳು, ಮಹಿಳೆಯರು ಹಾಗೂ ಸಮುದಾಯದ ಸದಸ್ಯರು ಉಪಸ್ಥಿತರಿದ್ದರು

# ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆ: ಹೆಸರು ಬೆಳೆಗೆ ನೋಂದಾಯಿಸಲು ಜು 15 ಕೊನೆ ದಿನ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ - ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯನ್ನು ಕೊಪ್ಪಳ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಯೋಜನೆಯಡಿ ಹೆಸರು (ಮಳೆ ಆಶ್ರಿತ) ಬೆಳೆಗೆ ನೋಂದಾಯಿಸಲು ಜುಲೈ 15 ಕೊನೆಯ ದಿನವಾಗಿದೆ. ನಿಗದಿತ ದಿನಾಂಕದೊಳಗಾಗಿ ಬೆಳೆವಿಮೆ ನೋಂದಾಯಿಸಿ ಯೋಜನೆಯ ಪ್ರಯೋಜನ ಪಡೆಯುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಸವಕಲ್ಯಾಣ :- ಸರ್ಕಾರಿ ನೌಕರರ ಸಂಘದ ಗೌರವ ಅಧ್ಯಕ್ಷರಾಗಿ ನರಸಿಂಗರೆಡ್ಡಿ ಗದಲೇಗಾಂವ ಹಾಗೂ ಸಂಸ್ಕೃತಿಕ ಕಾರ್ಯದರ್ಶಿ ಅನೀಲ ಕಾಂಬಳೆ ನೇಮಕ ಗೊಂಡ ಪ್ರಯುಕ್ತ ಇವರಿಗೆ ಮಾಜಿ ವಿಧಾನ ಪರಿಷತ್ ಸದಸ್ಯ ವಿಜಯಸಿಂಗ ಅವರಿಂದ ಸನ್ಮಾನಿಸಲಾಯಿತು . ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ದೀಲಿಪ ಉತ್ತಮ. ನಿತ್ಯಾನಂದ ಮಂತಾಳಕರ್. ಇಕ್ರಮೊದ್ದಿನ್ ಖಾದಿವಾಲೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಮಳೆಗಾಗಿ ಕಪ್ಪೆಗಳ ಮದುವೆ



• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ

ತಾಲೂಕಿನ ಸುಕ್ಷೇತ್ರ ಯಲದಗುಂಡಿ ಗ್ರಾಮದಲ್ಲಿ ಮಳೆಗಾಗಿ ಕಪ್ಪೆಗಳ ಮದುವೆ ಮಾಡಲಾಯಿತು. ಮುಂಗಾರು ಆರಂಭವಾದರೂ ಸಮರ್ಪಕ ಮಳೆ ಸುರಿದ ಹಿನ್ನೆಲೆಯಲ್ಲಿ ವರುಣ ದೇವರ ಕೃಪೆಗಾಗಿ ಯಲದಗುಂಡಿ ಗ್ರಾಮದ ಮಹಿಳೆಯರು ಸಂಪ್ರದಾಯದ ಪ್ರಕಾರ ಕಪ್ಪೆಗಳಿಗೆ ಮದುವೆ ಮಾಡಿ ಮಳೆಗಾಗಿ ದೇವರಲ್ಲಿ ಪ್ರಾರ್ಥಿಸಿದರು.

ನಂತರ ಮದುವೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಊಟದ ವ್ಯವಸ್ಥೆ ಮಾಡಲಾಗಿತ್ತು. ಈ ಸಂದರ್ಭದಲ್ಲಿ ಖ್ಯಾದಾಬಾಯಿ ಎಲ್ದೆ, ಸಿದ್ದಮ್ಮ ಎನ್. ಮಾಲಿಪಾಟೀಲ, ರತ್ನಾಬಾಯಿ ಪೊಲೀಸ್ ಪಾಟೀಲ, ಶೋಭಾವತಿ ತಾಟೆ, ಸತ್ಯದೇವಿ ಮಠಪತಿ, ಮಹಾದೇವಿ ಪೊಲೀಸ್ ಪಾಟೀಲ, ಪೂಜಾ ಮಠಪತಿ, ಜಗದೇವಿ ಬಾಳೆ, ಜ್ಯೋತಿ ಇಂಡೆ, ಸಂಪತಾಬಾಯಿ ಜಂಗಲೆ, ತಾರಾಮತಿ ಭಂಗೆ ಈಜಮ್ಮ ಭಂಗೆ, ಮಂಗಲಾ ಚಿಂಚೋಳಿ ಸೇರಿದಂತೆ ಗ್ರಾಮಸ್ಥರು ಭಾಗವಹಿಸಿದ್ದರು.

# ಅಂಕೋಲಾದಲ್ಲಿ ಮಳೆ ವಿರಾಮ ಎಲ್ಲೆಡೆ ಭತ್ತದ ನಾಟಿ ಕಾರ್ಯ ಚುರುಕು



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ತಾಲೂಕಿನಲ್ಲಿ ಸೋಮವಾರ ಮಳೆ ವಿರಾಮ ನೀಡಿದ್ದರಿಂದಾಗಿ ಬಿಸಿಲಿನ ವಾತಾವರಣವಿದ್ದು, ರೈತರು ಕೃಷಿ ಚಟುವಟಿಕೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಮಳೆ ವಿರಾಮದಿಂದಾಗಿ ತಗ್ಗು ಪ್ರದೇಶದ ಕೃಷಿಭೂಮಿಯಲ್ಲಿ ನೀರಿನ ಮಟ್ಟ ಕಡಿಮೆಯಾಗಿರುವುದರಿಂದ ನಾಟಿ ಕಾರ್ಯವೂ ಹಲವೆಡೆ ಭರದಿಂದ ಸಾಗುತ್ತಿರುವುದು ಕಂಡುಬಂತು. ಬೆಳಸೆ, ಪೂಜಗೇರಿ, ತೆಂಕಣಕೇರಿ, ಹಿಚ್ಕಡ, ಬೆಳಂಬಾರ, ಭಾವಿಕೇರಿ ಹೀಗೆ ಸಾಕಷ್ಟು ಪ್ರದೇಶಗಳಲ್ಲಿ ನಾಟಿ-ಕಾರ್ಯ ಆರಂಭಗೊಂಡಿದೆ. ಒಂದೆಡೆ ಉಳುಮೆ ಮಾಡುತ್ತಿದ್ದರೆ ಇನ್ನೊಂದೆಡೆ ಭತ್ತದ ಸಸಿಗಳನ್ನು ಕಿತ್ತು ಸಾಲಾಗಿ ನೆಡುತ್ತಿರುವುದು ಕಂಡುಬಂದವು. ಮಳೆ ಕಡಿಮೆ ಇರುವುದರಿಂದ ಎತ್ತರದ ಪ್ರದೇಶದಲ್ಲಿ ನೀರಿನ ಸಮಸ್ಯೆ ಉಂಟಾಗಿದೆ. ಜೂನ್ ಕೊನೆಯ ವಾರದಲ್ಲಿ ಸಾಮಾನ್ಯವಾಗಿ ನಾಟಿಕಾರ್ಯ ಮಾಡುವುದು ಸಹಜವಾಗಿತ್ತು. ಆದರೆ ಅತಿಯಾದ ಮಳೆ ಮತ್ತು ಕೆಲವೊಮ್ಮೆ ಮಳೆ ನಿಂತುಹೋಗುವುದು ಕೃಷಿ ಚಟುವಟಿಕೆಗೆ ಮಾರಕವಾಗಿದೆ. ಈ ಬಾರಿ ಮಳೆಯ ಪ್ರಮಾಣ ಕಡಿಮೆ ಎಂಬ ವಿಷಯ ಹವಾಮಾನ ಇಲಾಖೆಯೇ ಹೇಳಿರುವುದರಿಂದ ಎತ್ತರದ ಪ್ರದೇಶಗಳಲ್ಲಿ ಕೃಷಿ ಚಟುವಟಿಕೆ ಈ ಬಾರಿ ನಡೆಸದಿರುವುದು ಕಂಡುಬರುತ್ತಿದೆ. ನಾಟಿಕಾರ್ಯದಲ್ಲಿ ಮಹಿಳೆಯರು ಹೆಚ್ಚಾಗಿ ಕಂಡುಬರುತ್ತಿದ್ದಾರೆ. ಕಳೆದ ವರ್ಷಕ್ಕಿಂತ ಈ ವರ್ಷ ಕೃಷಿ ಚಟುವಟಿಕೆಗೆ ಕಡಿಮೆಯಾಗುವ ಸಾಧ್ಯತೆಯ ಬಗ್ಗೆ ಕೃಷಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಆದರೆ ನಿರ್ದಿಷ್ಟ ಸಂಖ್ಯೆ ಸ್ಪಷ್ಟಪಡಿಸಿಲ್ಲ. ಇನ್ನು ನಾಟಿಕಾರ್ಯ ಈಗಷ್ಟೇ ಆರಂಭಗೊಂಡಿದ್ದರಿಂದ ನಂತರ ವ್ಯತ್ಯಾಸವಾಗುವ ಸಾಧ್ಯತೆಯಿದೆ ಎಂದು ಅಧಿಕಾರಿಗಳು ವಿವರಿಸಿದ್ದಾರೆ. ಒಟ್ಟಿನಲ್ಲಿ ಸೋಮವಾರ ತಾಲೂಕಿನ ಹಲವು ಭಾಗಗಳಲ್ಲಿ ನಾಟಿಕಾರ್ಯ ಭರದಿಂದ ನಡೆಯುತ್ತದೆ.

# ಮಾದನಗೇರಿಯಲ್ಲಿ ಸಿಕ್ಕ ವಿಶಿಷ್ಟ ಏಡಿ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಅಘನಾಶಿನಿ ನದಿಯ ಹಿನ್ನೀರು ಪ್ರದೇಶವಾದ ಮಾದನಗೇರಿಯಲ್ಲಿ 'ಕಲ್ಲು ಜೆಂಜಿ' (ಕ್ರಾಬ್) 4.5 ಕೆಜಿ ತೂಕದ ಏಡಿಯು ಅರಬ್ಬಿ ಸಮುದ್ರದ ಸಂಗಮ ಪ್ರದೇಶಗಳಲ್ಲಿ ಮಾತ್ರ ಕಂಡುಬಂದಿತು. ಅದನ್ನು ಭೈರವ ಹರಿಕಂತ್ರ ಎನ್ನುವವರು ಹಿಡಿದಿದ್ದಾರೆ. ವಿದೇಶಿ ಮಾರುಕಟ್ಟೆಯಲ್ಲಿ ಅತ್ಯಂತ ಬೇಡಿಕೆ ಹೊಂದಿರುವ ಅಪರೂಪದ ಈ ಏಡಿಯು ಸ್ಥಳೀಯವಾಗಿಯೂ ಕೂಡ ಅಧಿಕ ಬೆಲೆ ಹೊಂದಿದೆ.



# ಮತದಾರರಿಗೆ ಜಾಗೃತಿ ಮೂಡಿಸಲು ಬೈಕ್ ರ್‍ಯಾಲಿಗೆ ಜಿ.ಪಂ ಸಿಇಒ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)



ಜು.14:ಕರ್ನಾಟಕ ಮತದಾರರ ಪಟ್ಟಿ ಪರಿಷ್ಕರಣೆ - 2026 ರ ಕುರಿತು, ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಸೋಮವಾರ ಜಿಲ್ಲಾ ಪಂಚಾಯತ್ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಬೈಕ್ ರ್‍ಯಾಲಿಗೆ ಜಿಲ್ಲಾ ಪಂಚಾಯತ್ ಸಿಇಒ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಂ ಷಾ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.ಬೈಕ್ ರ್‍ಯಾಲಿಗೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಿಷ್ಠ ಮಾಡುವ ನಿಟ್ಟಿನಲ್ಲಿ, ಸಂವಿಧಾನ ಬದ್ಧ ಮೂಲಭೂತ ಹಕ್ಕಾದ ಮತದಾನದ ಹಕ್ಕು ಕೇವಲ ಅರ್ಹರಿಗೆ ದೊರಕಿಸುವ ಉದ್ದೇಶದಿಂದ ಮತದಾರರ ಪಟ್ಟಿಯನ್ನು ಪರೀಷ್ಕರಿಸಲಾಗುತ್ತಿದೆ ಎಂದು ತಿಳಿಸಿದರು. ಪ್ರತಿಯೊಬ್ಬ ನಾಗರಿಕರಿಗೂ ಯಾವುದೇ ತಾರತಮ್ಯವಿಲ್ಲದೆ ಮತದಾನ ಮಾಡುವ ಹಕ್ಕು ಸಿಗಬೇಕು ಎಂಬ ದೂರದೃಷ್ಟಿಯ ಉದ್ದೇಶದಿಂದ ಭಾರತೀಯ ಚುನಾವಣೆ ಆಯೋಗ ಭಾರತ ಸರ್ಕಾರ ವತಿಯಿಂದ ರಾಜ್ಯದಲ್ಲಿ ಕರ್ನಾಟಕ ವ್ಯವಸ್ಥಿತ ಮತದಾರರ ಪಟ್ಟಿ ಪರಿಷ್ಕರಣೆ-2026 ಪ್ರಕ್ರಿಯೆಯನ್ನು ಜೂನ್ 29 ರಿಂದ ಜುಲೈ 30 ರವರಿಗೆ ಕೈಗೊಳ್ಳಲಾಗುತ್ತಿದೆ.ಜಿಲ್ಲೆಯ ಎಲ್ಲಾ ತಾಲೂಕಿನಲ್ಲಿ ಈಗಾಗಲೇ ಮತಗಟ್ಟೆಯ ಅಧಿಕಾರಿಗಳು 2002 ರ ಮತದಾರರ ಪಟ್ಟಿಯ ಮತದಾರರೊಂದಿಗೆ ಮ್ಯಾಪಿಂಗ್ ಮಾಡುವ ಪ್ರಕ್ರಿಯೆ ಪೂರ್ಣಗೊಳಿಸಲಾಗಿದೆ. ಅದರಂತೆ ಮತದಾರರ ಪಟ್ಟಿಯಲ್ಲಿ ಈ ಹಿಂದೆ ಇರುವ ಮತದಾರರ ತಮ್ಮ ವಿಳಾಸ, ಹಾಗೂ ಪ್ರಸ್ತತವಿರುವ ಎಲ್ಲಾ ಮಾಹಿತಿಯ ವಿವರಗಳು ಬದಲಾವಣೆಯಾಗಿದ್ದಲ್ಲಿ ಮತ್ತೊಮ್ಮೆ ಪುನರ್ ಪರೀಶಿಲಿಸಿ ಮತದಾರರ ಪಟ್ಟಿಯನ್ನು ದೃಢಪಡಿಸಲು ಅವಕಾಶ ಕಲ್ಪಿಸಲಾಗಿದೆ. ಮತಗಟ್ಟೆಯ ಅಧಿಕಾರಿಗಳು ಗಣತಿ ನಮೂನೆಯನ್ನು ಭರ್ತಿ ಮಾಡಲು ಈಗಾಗಲೇ ಪ್ರತಿ ಮನೆ ಮನೆಗೂ ತೆರಳಿ ಅರ್ಹ ಮತದಾರರಿಗೆ ಗಣತಿ ನಮೂನೆಯನ್ನು ವಿತರಿಸಿರುತ್ತಾರೆ. ಬಿಎಲ್‌ಓಗಳು ವಿತರಿಸಲಾದ ಗಣತಿ ನಮೂನೆಯಲ್ಲಿ ಈ ಹಿಂದೆ ಇರುವ ಮಾಹಿತಿ ಹಾಗೂ ಪ್ರಸ್ತುತ ಇರುವ ಮಾಹಿತಿಯ ಎಲ್ಲಾ ವಿವರಗಳನ್ನು ಭರ್ತಿಮಾಡಿ, ಮತಗಟ್ಟೆಯ ಅಧಿಕಾರಿಗಳಿಗೆ ಸಲ್ಲಿಸುವ ಮೂಲಕ ಮತದಾರರ ಪಟ್ಟಿ ಪರಿಷ್ಕರಣೆ-2026ರ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬರೂ ಕ್ರೀಯಾಶೀಲರಾಗಿ ಭಾಗವಹಿಸಿ ಎಂದು ಸಾರ್ವಜನಿಕರಿಗೆ ಮನವಿ ಮಾಡಿದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ ಮಾತನಾಡಿ,ಮತದಾನದಿಂದ ಯಾವುದೇ ಅರ್ಹ ಮತದಾರರು ಹೊರಗುಳಿಯಬಾರದೆಂದು ಭಾರತೀಯ ಚುನಾವಣಾ ಆಯೋಗ ಜೂನ್ 29 ರಿಂದ ಜುಲೈ 30 ರವರೆಗೆ ಆಯೋಜಿಸಿರುತ್ತದೆ. ಸದರಿ ಮತದಾರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪ್ರತಿ ಕುಟುಂಬದ ಅರ್ಹ ಸದಸ್ಯರು ಭಾಗವಹಿಸಿ ಮತಗಟ್ಟೆಯ ಅಧಿಕಾರಿಗಳು ತಮ್ಮ ಮನೆಗಳಿಗೆ ಬಂದಾಗ ತಪ್ಪದೆ ಎಲ್ಲಾ ಸಂಬಂಧಿಸಿದ ದಾಖಲಾತಿ ನೀಡಿ ಸಹಕರಿಸಲು ತಿಳಿಸಿದರು.

ಬೃಹತ್ ಬೈಕ್ ರ್‍ಯಾಲಿ : ಬೈಕ್ ರ್‍ಯಾಲಿಯು ಜಿಲ್ಲಾ ಪಂಚಾಯತ್ ಆವರಣದಿಂದ ಆರಂಭಗೊಂಡು ಡ್ಯಾಮ್ ರೋಡ್ ಮೂಲಕ ನಗರದ ಸಾಯಿಬಾಬಾ ವೃತ್ತ, ಬಸವೇಶ್ವರ ವೃತ್ತ, ವಿಜಯನಗರ ಕಾಲೇಜು, ಪುನೀತ್ ರಾಜಕುಮಾರ್ ವೃತ್ತ,ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ, ವಾಲ್ಮೀಕಿ ಸರ್ಕಲ್ ಮೂಲಕ ದೀಪಾಯನ ಶಾಲೆಯವರೆಗೆ ವಿವಿಧ ಘೋಷಣೆಗಳೊಂದಿಗೆ ಸಂಚರಿಸಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.

ಈ ವೇಳೆ ಜಿಲ್ಲಾ ಪಂಚಾಯತಿ ಸಹಾಯಕ ಯೋಜನೆ ಅಧಿಕಾರಿ ಎಂ.ಉಮೇಶ್, ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಅಲಂಬಾಷ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ಭೀಮಾ ನೀರು ಕುಡಿಯುವ ಉಪಯೋಗಕ್ಕಾಗಿ ಕುಮಾರಸ್ವಾಮಿ ಮಹಾರಾಷ್ಟ್ರದ ಮುಖ್ಯಮಂತ್ರಿ ಜೊತೆ ಚರ್ಚೆ

ಇಂಡಿ: ತಾಲೂಕಿನ ಭೀಮಾ ನದಿ ದಂಡೆಯ ಗ್ರಾಮಗಳಿಗೆ ಕುಡಿಯುವ ನೀರಿನ ತೊಂದರೆ ಇದ್ದು ಅದಕ್ಕಾಗಿ ಕೇಂದ್ರ ಸಚಿವ ಕುಮಾರಸ್ವಾಮಿಯವರು ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೆಂದ್ರ ಫಡ್ನವೀಶ ಜೊತೆ ಚರ್ಚೆ ಮಾಡುವರು ಎಂದು ರಾಜ್ಯ ಯುವ ಜನತಾಧಳ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು.

ನಗರದ ಪ್ರವಾಸಿಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕೃಷ್ಣಾ ಕಾಲುವೆಗೆ ಈಗಾಗಲೇ ಒಂದುವರೆ ಟಿಎಂಸಿ ನೀರು ಹರಿಸುವದಾಗಿ ಕಲಬುರಗಿ ಆಯುಕ್ತರು ತಿಳಿಸಿದ್ದರು ಬೇಗನೇ ನೀರು ಬಿಡಬೇಕು ಇಲ್ಲದಿದ್ದರೆ ಒತ್ತಡ ಹೇರುವದಾಗಿ ತಿಳಿಸಿದರು.

ಕೆಎಸ್ ಎನ್‌ಡಿಎಂಸಿ ವರದಿ ಪ್ರಕಾರ ರಾಜ್ಯದ 135 ತಾಲೂಕುಗಳು ಡೆಫಿಸಿಯಂಟ್ ವಲಯದಲ್ಲಿವೆ. ವಿಜಯಪುರ ಸೇರಿ ಎಲ್ಲಾ ಭಾದಿತ ತಾಲೂಕುಗಳಿಗೆ ಅಧಿಕೃತ ಬರ ಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ಆಗ್ರಹಿಸಿದರು.

ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕುಗಳ ಎಲ್ಲಾ ಕೃಷಿ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು. ರೈತರ ಮೇಲೆ ಯಾವದೇ ಸಾಲದ ವಸೂಲಾತಿ ಒತ್ತಡ ಹೇರಬಾರದು ಎಂದರು.

ಶಾಸಕ ಮತ್ತು ಶಾಶಕಾಂಗ ಪಕ್ಷದ ನಾಯಕ ಸುರೇಶ ಬಾಬು ಮಾತನಾಡಿ ಜಿಲ್ಲೆಯ ಬಹುತೇಕ ಪ್ರದೇಶಗಳಲ್ಲಿ ತೀರ್ವ ಬರಗಾಲದ ಪರಿಸ್ಥಿತಿಯಿದ್ದು ಅನ್ನದಾತನ ಬವಣೆ ದುಸ್ತರವಾಗಿದೆ. ವಾಡಿಕೆಗಿಂತ ಸುಮಾರು 40 % ಕ್ಕಿಂತಲೂ ಕಡಿಮೆ ಮಳೆಯಾಗಿದೆ. ಏಕದಳ, ದ್ವಿದಳ, ಹಾಗೂ ಇತರೆ ಬೆಳೆಗಳಿಗೆ ತೀವ್ರ ಹಾನಿಯಾಗಿದ್ದು



ರೈತರು ಸಂಕಷ್ಟದಲ್ಲಿದ್ದಾರೆ ಎಂದರು. ಅಂತರ್ಜಲ ಸಂಪೂರ್ಣ ಬತ್ತಿದೆ. ಟ್ಯಾಂಕರ್ ಮೂಲಕ ನೀರು ಮತ್ತು ತುರ್ತು ಬೋರವೆಲ್ಲ ಗಳಿಗಾಗಿ ಪ್ರತಿ ತಾಲೂಕಿಗೆ ಕನಿಷ್ಠ ಐದು ಕೋಟಿ ರೂ ವಿಶೇಷ ಅನುದಾನ ಬಿಡುಗಡೆ ಮಾಡಬೇಕು ಎಂದರು.

ಕೋರ್ ಸಮಿತಿ ಅಧ್ಯಕ್ಷ ಜೆ.ಕೆ ಕೃಷ್ಣಾರೆಡ್ಡಿ ಮಾತನಾಡಿ ಮಳೆ ವೈಫಲ್ಯದಿಂದ ಬೆಳೆ ಸಂಪೂರ್ಣ ನಷ್ಟವಾಗಿದೆ. ಸುಮಾರು 70 ಲಕ್ಷ ಸಣ್ಣ ಅತಿ ಸಣ್ಣ ರೈತರ ಖಾತೆಗೆ ತಕ್ಷಣವೇ ಒನ್ ಟಾಯಿಮ್ ಕಾಂಪೆನ್ ಷೇಶನ್ ಜಮಾ ಮಾಡಬೇಕು ಎಂದರು.

ಇದಕ್ಕೂ ಮೊದಲು ಇಂಡಿ ವಿಧಾನಸಭಾ ಕ್ಷೇತ್ರದ ಅಗಸನಾಳ, ಹೊರ್ತಿ, ಝಳಕಿ ಹಾಗೂ ಅಂಜುಟಗಿ ಗ್ರಾಮಗಳಿಗೆ ಭೇಟಿ ನೀಡಿ ಸಮೀಕ್ಷೆ ನಡೆಸಿ ರೈತರ ಅಳಲನ್ನು ನಿಖಿಲ್ ಕುಮಾರಸ್ವಾಮಿ ಅವರು ಆಲಿಸಿ ಮನವಿಗಳನ್ನು ಸ್ವೀಕರಿಸಿದರು.

ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ, ಬಸವನ ಬಾಗೇವಾಡಿಯ ಅಪ್ಪುಗೌಡ ಪಾಟೀಲ, ಇಂಡಿ ಜೆಡಿ ಎಸ ಅಧ್ಯಕ್ಷ ಬಿ.ಡಿ.ಪಾಟೀಲ ಹಂಜಗಿ, ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಯಂಡಿಗೇರಿ, ಮಾಜಿ ಶಾಸಕ ದೇವಾನಂದ ಚವ್ಹಾಣ, ಅಯೂಬ ನಾಟಿ-ಕಾರ, ಶ್ರೀಶೈಲಗೌಡ ಪಾಟೀಲ, ಸಿದ್ದು ಡಂಗಾ, ಡಾ॥ ರಮೇಶ ರಾಠೋಡ ಮತ್ತಿತರಿದ್ದರು.

# ರಾಷ್ಟ್ರೀಯ ಹೆದ್ದಾರಿ ಅಡ್ಲೂರು ಸಮೀಪ ಲಾರಿ ಪಲ್ಟಿ : ವಿದ್ಯುತ್ ಕಂಬ ನಾಶ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ


ತಾಲೂಕಿನ ರಾಷ್ಟ್ರೀಯ ಹೆದ್ದಾರಿ 63 ರ ಅಡ್ಲೂರು ಸಮೀಪ ಜಿಪ್ಸಮ್ ಪುಡಿ ತುಂಬಿಕೊಂಡು ಕೇರಳದ ಕೊಚ್ಚಿಯಿಂದ ಕೊಪ್ಪಳ ಕಡೆಗೆ ತೆರಳುತ್ತಿದ್ದ ಲಾರಿಯೊಂದು ಚಾಲಕನ ನಿಯಂತ್ರಣ ತಪ್ಪಿ ರಸ್ತೆಯಲ್ಲಿಯೇ ಮುಗುಚಿಬಿದ್ದ ಘಟನೆ ಸೋಮವಾರ ನಡೆದಿದೆ.

ಲಾರಿಯ ರಭಸಕ್ಕೆ ರಸ್ತೆ ಪಕ್ಕದ ಮರ ಹಾಗೂ ವಿದ್ಯುತ್ ಕಂಬಗಳು ಮುರಿದುಬಿದ್ದಿದೆ. ಅಲ್ಲಿ ಯಾರೂ ಇಲ್ಲದಿರುವುದರಿಂದ ಬಹುದೊಡ್ಡ ದುರಂತ ತಪ್ಪಿದಂತಾಗಿದೆ. ಚಾಲಕ ಗಾಯಗೊಂಡಿದ್ದಾನೆ. ಪ್ರತಿದಿನ ಸಣ್ಣಪುಟ್ಟ ಅಪಘಾತಗಳು ನಡೆಯುತ್ತಲೇ ಇದೆ. ಪೊಲೀಸರು ಸ್ಥಳಕ್ಕೆ ಆಗಮಿಸಿ ಪಂಚನಾಮೆ ನಡೆಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ಈ ರಾಷ್ಟ್ರೀಯ ಹೆದ್ದಾರಿಯಲ್ಲಿ ಆಗಾಗ ಇಂತಹ ದೊಡ್ಡ ಅಪಘಾತಗಳು ನಡೆಯುತ್ತವೆ. ಇದೇ ರಸ್ತೆಯ ಯಲ್ಲಾಪುರಕ್ಕೆ ತೆರಳುವ ಆರತಿಬೈಲ್‌ನಲ್ಲಿ ಇತ್ತೀಚಿಗೆ ಲಾರಿ ಹಾಗೂ ಕ್ರೂಸರ್ ಮುಖಾಮುಖಿ ಡಿಕ್ಕಿಯಿಂದ 7 ಜನರು ಸಾವನ್ನಪ್ಪಿದ್ದರು. ಅಂಕೋಲಾ-ಯಲ್ಲಾಪುರ ರಸ್ತೆಯಲ್ಲಿ ಅಲ್ಲಲ್ಲಿ ಹೊಂಡಗಳು ಬಿದ್ದಿದ್ದು ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯಕ್ಕೆ ಹಲವರ ಪ್ರಾಣ ಹೋಗುವಂತಾಗಿದೆ. ತಾಲೂಕಿನ ಬಾಳೆಗುಳಿ ಸಮೀಪದ ರಾಷ್ಟ್ರೀಯ ಹೆದ್ದಾರಿಯಲ್ಲಿ ಹೊಂಡಗಳಿಂದಲೇ ಕೂಡಿದ ಅತಿವೇಗವಾಗಿ ಚಲಿಸುವ ವಾಹನಗಳು ಅಚಾನಕ ಆಗಿ ಹೊಂಡಕ್ಕೆ ಹಾಯಿಸುವುದರಿಂದ ಅಪಘಾತವಾಗುವ ಸಾಧ್ಯತೆ ಅಧಿಕವಾಗಿದೆ. ಈ ಬಗ್ಗೆ ಅಧಿಕಾರಿಗಳು ಹೆಚ್ಚಿನ ಗಮನಹರಿಸಬೇಕಾಗಿದೆ.

# ಎಸ್‌ಐಆರ್ ಅಭಿಯಾನದಲ್ಲಿ ಸಾರ್ವಜನಿಕರ ಪಾಲ್ಗೊಳ್ಳುವಿಕೆಗೆ ಡಿಕೆಸಿ ಕರೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ತಾಲೂಕಿನ ಕೇಸರಜವಳಗಾ ಗ್ರಾಮದಲ್ಲಿ ಚುನಾವಣಾ ಆಯೋಗದ ವಿಶೇಷ ತೀವ್ರ ಪರಿಷ್ಕರಣೆ (SIR) ಅಭಿಯಾನದ ಅಂಗವಾಗಿ ಭಾಲ್ಕಿ ಕ್ಷೇತ್ರದ ಯುವ ನಾಯಕ ಡಿ.ಕೆ. ಸಿದ್ರಾಮ ಅವರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡರು.

ಬಳಿಕ ಮಾತನಾಡಿದ ಅವರು, ಪ್ರಜಾಪ್ರಭುತ್ವದ ಬಲಿಷ್ಠ ಅಡಿಪಾಯವೇ ಮತದಾನ ಹಕ್ಕು ಎಂದು ತಿಳಿಸಿ, ಪ್ರತಿಯೊಬ್ಬ ಅರ್ಹ ನಾಗರಿಕರೂ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಕಡ್ಡಾಯವಾಗಿ ನೋಂದಾಯಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಈಗಾಗಲೇ ಮತದಾರರ ಪಟ್ಟಿಯಲ್ಲಿ ಹೆಸರು ಹೊಂದಿರುವವರು ತಮ್ಮ ಹೆಸರು, ವಿಳಾಸ ಹಾಗೂ ಇತರೆ ವಿವರಗಳನ್ನು ಪರಿಶೀಲಿಸಿಕೊಳ್ಳಬೇಕು. ಹೆಸರು ಇಲ್ಲದವರು, ಹೊಸದಾಗಿ ಸೇರ್ಪಡೆಯಾಗಬೇಕಿರುವವರು ಅಥವಾ ಯಾವುದೇ ತಿದ್ದುಪಡಿ ಅಗತ್ಯವಿರುವವರು ಚುನಾವಣಾ ಆಯೋಗದ ಎಸ್‌ಐಆರ್ (SIR) ವಿಶೇಷ ತೀವ್ರ ಪರಿಷ್ಕರಣೆ ಅಭಿಯಾನದ ಸದುಪಯೋಗ ಪಡೆದು ನೋಂದಣಿ ಮಾಡಿಸಿಕೊಳ್ಳುವಂತೆ ಸಾರ್ವಜನಿಕರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರು, ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಬೋರವೆಲ್ ಕೊರೆಸುವಾಗ ಕಾರಂಜಿಯಂತೆ ಚಿಮ್ಮಿದ ನೀರು

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ತಾಲೂಕಿನಲ್ಲಿ ಬನ್ನಿಕಲ್ಲುಗ್ರಾಮ ಬರಗಾಲದ ಮಧ್ಯೆಯೂ ಕೊರೆಸಿದ ಕೊಳವೆ ಬಾವಿಯೊಂದರಲ್ಲಿ ಭಾರೀ ಪ್ರಮಾಣದಲ್ಲಿ ನೀರು ಹೊರ ಚಿಮ್ಮಿದೆ.

ಮಳೆ ಕೈಕೊಟ್ಟು, ಜಮೀನೆಲ್ಲ ಬರಡು ಆಗಿದ್ರೂ ವಿಜಯನಗರ ಜಿಲ್ಲೆಯ ಜಮೀನಿನಲ್ಲಿ ಕೊರೆದ ಕೊಳವೆ ಬಾವಿಯೊಂದರಲ್ಲಿ (Borewell) ಭಾರೀ ಪ್ರಮಾಣದಲ್ಲಿ ನೀರು ದೊರೆತಿದ್ದು ಅಚ್ಚರಿ ಮೂಡಿಸುವಂತೆ ಮಾಡಿದೆ. ಜಾಮೀನಿಗೆ ಉಳಿಮೆ ಉದ್ದೇಶದಿಂದ ಹಗರಿಬೊಮ್ಮನಹಳ್ಳಿ ತಾಲೂಕಿನ ಬನ್ನಿಕಲ್ಲು ಗ್ರಾಮದಲ್ಲಿ ಸುನಿಲ್ ಬಿ ವಿ ಅವರು ಜಮೀನಿನಲ್ಲಿ ಬೋರ್‌ವೆಲ್ ಕೊರೆಸಿದ್ದಾರೆ. ಬೋರ್‌ವೆಲ್ ಕೊರೆಯಲು ಆರಂಭಿಸಿದ ಕೆಲವೇ ಹೊತ್ತಿಗೆ ನೀರಿನ ಬುಗ್ಗೆ ಬಾನಂಗಳಕ್ಕೆ ಚಿಮ್ಮಲು ಆರಂಭಿಸಿದ್ದು ವಿಶೇಷ.



# ಹೆಚ್.ಐ.ವಿ. ಮತ್ತು ಏಡ್ಸ್ ಮುಕ್ತ ಸಮಾಜ ನಿರ್ಮಾಣಕ್ಕಾಗಿ ನಿರಂತರ ಜಾಗೃತಿ ಅಗತ್ಯ: ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಹೆಚ್.ಐ.ವಿ. ಮತ್ತು ಏಡ್ಸ್ ಮುಕ್ತ ಜಿಲ್ಲೆಯನ್ನಾಗಿಸಲು ಸಾರ್ವಜನಿಕರಲ್ಲಿ ನಿರಂತರವಾಗಿ ಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್. ಝುಬೇರ್ ಅವರು ತಿಳಿಸಿದರು.

ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ 'ಮಿಷನ್ ಏಡ್ಸ್ ಸುರಕ್ಷಾ' ಅಭಿಯಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಏಡ್ಸ್ ರೋಗಕ್ಕೆ ಸಂಪೂರ್ಣ ಗುಣಮುಖ ಮಾಡುವ ಔಷಧ ಇನ್ನೂ ಲಭ್ಯವಿಲ್ಲದ ಕಾರಣ, ಮುನ್ನೆಚ್ಚರಿಕೆ ಮತ್ತು ಜಾಗೃತಿಯೇ ಇದಕ್ಕೆ ಅತ್ಯುತ್ತಮ ಪರಿಹಾರವಾಗಿದೆ ಎಂದು ಹೇಳಿದರು.

ಲೈಂಗಿಕ ಕಾರ್ಯಕರ್ತೆಯರು ಆರ್ಥಿಕವಾಗಿ ಸ್ವಾವಲಂಬಿಗಳಾದಾಗ ಮಾತ್ರ ಇಂತಹ ರೋಗಗಳ ಭೀತಿಯಿಂದ ಮತ್ತು ದುರ್ಬಲತೆಯಿಂದ ಹೊರಬರಲು ಸಾಧ್ಯ. ಈ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಸೂಕ್ತ ಯೋಜನೆಗಳನ್ನು ಹಮ್ಮಿಕೊಂಡು ಅನುಷ್ಠಾನಗೊಳಿಸಬೇಕು ಎಂದರು.

ಜಿಲ್ಲೆಯ ಪ್ರತಿಯೊಂದು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ನಡೆಸಬೇಕು. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಆಶಾ ಕಾರ್ಯಕರ್ತೆಯರ ಸೇವೆಯನ್ನು ಸಮರ್ಥವಾಗಿ ಬಳಸಿಕೊಳ್ಳಬೇಕು. ಅವರಿಗೆ ಸೂಕ್ತ ತರಬೇತಿ ನೀಡಿ, ಈ ಅಭಿಯಾನದಲ್ಲಿ ತೊಡಗಿಸಿಕೊಳ್ಳಲು ಸೂಚಿಸಿದರು.

ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ಹೆಚ್.ಐ.ವಿ ಕುರಿತಾದ ಮುಜುಗರವನ್ನು ಹೋಗಲಾಡಿಸಲು ಪ್ರಬಂಧ ಸ್ಪರ್ಧೆ, ಜಾನಪದ ನೃತ್ಯ, ಬೀದಿ ನಾಟಕ ಹಾಗೂ ಫ್ಲಾಶ್ ಮಾಬ್‌ಗಳ ಮೂಲಕ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು. ಜಿಲ್ಲಾ ಹೆಚ್.ಐ.ವಿ ಏಡ್ಸ್ ನಿಯಂತ್ರಣ ಘಟಕದ ನಿಯಂತ್ರಣಾಧಿಕಾರಿ ಡಾ.ಇಂದ್ರಾಣಿ ವಿ. ಅವರು ಮಾತನಾಡಿ, ಜಿಲ್ಲೆಯ ಪ್ರಮುಖ ರಕ್ತನಿಧಿ ಕೇಂದ್ರಗಳಲ್ಲಿ



2019 ರಿಂದ 2026 ರವರೆಗಿನ ಅವಧಿಯಲ್ಲಿ ಸಂಗ್ರಹಿಸಲಾದ ರಕ್ತದ ಮಾದರಿಗಳ ತಪಾಸಣೆಯಿಂದ ಒಟ್ಟು 115 ಎಚ್‌ಐವಿ ಪಾಸಿಟಿವ್ ಪ್ರಕರಣಗಳು ಪತ್ತೆಯಾಗಿವೆ. ಪತ್ತೆಯಾದ ಒಟ್ಟು 115 ಪ್ರಕರಣಗಳ ಪೈಕಿ 37 ಜನರನ್ನು ಹೆಚ್ಚಿನ ತಪಾಸಣೆ ಮತ್ತು ಕೌನ್ಸೆಲಿಂಗ್‌ಗಾಗಿ ಐಸಿಟಿಸಿ ಕೇಂದ್ರಗಳಿಗೆ ಶಿಫಾರಸ್ಸು ಮಾಡಲಾಗಿದೆ. ಬಾಕಿ ಉಳಿದಿರುವ 78 ಪ್ರಕರಣಗಳ ವ್ಯಕ್ತಿಗಳನ್ನು ಪತ್ತೆಹಚ್ಚಿ ಅವರಿಗೆ ಸೂಕ್ತ ವೈದ್ಯಕೀಯ ಮಾರ್ಗದರ್ಶನ ನೀಡುವುದು ಆರೋಗ್ಯ ಇಲಾಖೆಯ ಮುಂದಿರುವ ಮುಖ್ಯ ಗುರಿಯಾಗಿದೆ. ಇದಕ್ಕಾಗಿ 'ಮೈಕ್ರೋ ಲೆವೆಲ್ ಪ್ಲಾನ್' ರೂಪಿಸಲಾಗಿದೆ ಎಂದು ಅವರು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಅಪರ ಜಿಲ್ಲಾಧಿಕಾರಿಗಳು, ರಕ್ತದಾನ ಮಾಡುವವರು ಸಾಮಾನ್ಯವಾಗಿ ಯುವಕರಾಗಿರುತ್ತಾರೆ. ಈ 78 ಯುವಕರಿಗೆ ತಮಗೆ ಸೋಂಕು ಇರುವುದು ತಿಳಿಯದೇ ಹೋದರೆ ಅಥವಾ ಅವರು ಮುನ್ನೆಚ್ಚರಿಕೆ ವಹಿಸದಿದ್ದರೆ, ಸಮಾಜದಲ್ಲಿ ಸೋಂಕು ಮತ್ತಷ್ಟು ವೇಗವಾಗಿ ಹರಡುವ ಸಾಧ್ಯತೆ ಇರುತ್ತದೆ. ಸೋಂಕಿತರು ತಪ್ಪು ಫೋನ್ ನಂಬರ್ ನೀಡಿರುವುದು ಇವರನ್ನು ಪತ್ತೆ ಹಚ್ಚಲು ಹಿನ್ನಡೆಯಾಗಿದೆ ಎಂದರು.

ಗರ್ಭಿಣಿಯರಿಂದ ಮಗುವಿಗೆ ಸೋಂಕು ಹರಡುವುದನ್ನು ತಡೆಯಲು ಮೊದಲ ತ್ರೈಮಾಸಿಕದಲ್ಲೇ ಎಚ್‌ಐವಿ, ಹೆಪಟೈಟಿಸ್ ಮತ್ತು ಸಿಫಿಲಿಸ್ ತಪಾಸಣೆಗಳನ್ನು ಕಡ್ಡಾಯಗೊಳಿಸಲಾಗಿದೆ. ಈ ವರ್ಷ ತಪಾಸಣೆ ವೇಳೆ 4 ಗರ್ಭಿಣಿಯರಲ್ಲಿ ಎಚ್‌ಐವಿ ಪಾಸಿಟಿವ್ ಇರುವುದು ಪತ್ತೆಯಾಗಿದೆ. ಎಂಟನೇ ತಿಂಗಳಲ್ಲಿ ಇವರ 'ವೈರಲ್ ಲೋಡ್' ಪರೀಕ್ಷೆ ನಡೆಸಿ, ಸೋಂಕಿನ ಪ್ರಮಾಣವನ್ನು ತಗ್ಗಿಸಿ ಸುರಕ್ಷಿತ ಹೆರಿಗೆ ಮಾಡಿಸಲು ಎಆರ್‌ಟಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿಯೂ ಆದ ಡಾ.ಇಂದ್ರಾಣಿ ಅವರು ಸಭೆಗೆ ತಿಳಿಸಿದರು.

*ಜಾಗೃತಿ ಮತ್ತು ಆ.07 ರಂದು ಮೆಗಾ ರಕ್ತದಾನ ಶಿಬಿರ:*

ಜಿಲ್ಲೆಯಲ್ಲಿ ಎಚ್‌ಐವಿ/ಏಡ್ಸ್ ಹರಡುವಿಕೆಯನ್ನು ತಡೆಗಟ್ಟಲು ಮತ್ತು ಸಾರ್ವಜನಿಕರಲ್ಲಿ, ವಿಶೇಷವಾಗಿ ಯುವ ಪೀಳಿಗೆಯಲ್ಲಿ ಜಾಗೃತಿ ಮೂಡಿಸಲು ಆರೋಗ್ಯ ಇಲಾಖೆ ಹಾಗೂ ವಿವಿಧ ಸ್ವಯಂಸೇವಾ ಸಂಸ್ಥೆಗಳು ಜಂಟಿಯಾಗಿ ವಿನೂತನ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಇದರ ಭಾಗವಾಗಿ ಜೆಎಸ್‌ಡಬ್ಲ್ಯೂ ?? ಸಂಸ್ಥೆಯ ಸಹಯೋಗದೊಂದಿಗೆ ಆಗಸ್ಟ್ 07 ರಂದು ಬೃಹತ್ ರಕ್ತದಾನ ಶಿಬಿರವನ್ನು ಆಯೋಜಿಸಲು ಸಿದ್ಧತೆ ನಡೆಸಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

*ಎಚ್‌ಐವಿ ನಿಯಂತ್ರಣಕ್ಕೆ ತಂತ್ರಜ್ಞಾನದ ಮೂಲಕ ಜಾಗೃತಿ, ವಿನೂತನ ಕ್ಯುಆರ್ ಕೋಡ್:*

ಸಾರ್ವಜನಿಕರಲ್ಲಿ, ಕಚೇರಿಗಳಲ್ಲಿ, ಕಾಲೇಜು ವಿದ್ಯಾರ್ಥಿಗಳಲ್ಲಿ ಎಚ್‌ಐವಿ ಬಗ್ಗೆ ಇರುವ ಸಂಕೋಚವನ್ನು ನಿವಾರಿಸಲು ತಂತ್ರಜ್ಞಾನ ಅಳವಡಿಸಿಕೊಳ್ಳಲಾಗಿದೆ. ವಿತರಿಸಲಾಗುವ ವಿಶೇಷ ಕರಪತ್ರಗಳಲ್ಲಿ ಕ್ಯುಆರ್ ಕೋಡ್ ನೀಡಲಾಗಿದ್ದು, ಇದನ್ನು ಸ್ಕಾ??ನ್ ಮಾಡುವ ಮೂಲಕ ಆಪ್‌ಗೆ ಲಾಗ್-ಇನ್ ಆಗಬಹುದು. ಆಪ್‌ನಲ್ಲಿರುವ ರಹಸ್ಯ ಪ್ರಶ್ನಾವಳಿಗಳ ಮೂಲಕ ಬಳಕೆದಾರರು ತಾವೇನಾದರೂ ಎಚ್‌ಐವಿ ಅಪಾಯದ ವ್ಯಾಪ್ತಿಯಲ್ಲಿದ್ದೇವೆಯೇ ಎಂಬುದನ್ನು ಸ್ವಯಂ ಮೌಲ್ಯಮಾಪನ ಮಾಡಿಕೊಳ್ಳಬಹುದು. ಒಂದು ವೇಳೆ ಅಪಾಯದ ಲಕ್ಷಣಗಳಿದ್ದರೆ, ಬಳಕೆದಾರರು ಇರುವ ಜಾಗಕ್ಕೆ ಅತ್ಯಂತ ಹತ್ತಿರದಲ್ಲಿರುವ ಐಸಿಟಿಸಿ ಕೇಂದ್ರದ ಲೊಕೇಶನ್ ಅನ್ನು ಈ ಆಪ್ ತೋರಿಸಲಿದ್ದು, ಅಲ್ಲಿಗೆ ಭೇಟಿ ನೀಡಿ ಉಚಿತ ಪರೀಕ್ಷೆ ಮಾಡಿಸಿಕೊಳ್ಳಬಹುದು ಎಂದು ಅವರು ಮಾಹಿತಿ ನೀಡಿದರು.

*ಲಾರಿ ಚಾಲಕರು ಮತ್ತು ವಲಸಿಗರಿಗೆ ವಿಶೇಷ ತಪಾಸಣೆ:*

ಲಾರಿ ಚಾಲಕರಿಗಾಗಿ 'ಅಮೃತ' ಪ್ರಾಜೆಕ್ಟ್ ಅಡಿಯಲ್ಲಿ ಐಸಿಟಿಸಿ ಕೇಂದ್ರಗಳೊಂದಿಗೆ ಟೈ-ಅಪ್ ಮಾಡಿಕೊಂಡು ನಿಯಮಿತ ಪರೀಕ್ಷೆ ನಡೆಸಲಾಗುತ್ತಿದೆ. ಉದ್ಯೋಗಕ್ಕಾಗಿ 5-6 ತಿಂಗಳು ಅಥವಾ ವರ್ಷಗಟ್ಟಲೆ ಕುಟುಂಬದಿಂದ ದೂರವಿರುವ ವಲಸೆ ಕಾರ್ಮಿಕರನ್ನು ಗುರುತಿಸಿ ವಿಶೇಷ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಇದೇ ವೇಳೆ ಗಣ್ಯರು ಕ್ಯುರ್ ಆರ್ ಕೋಡ್ ಆಧಾರಿತ 'ಮೊಬಿಲೈಸೇಶನ್ ಫಾರ್ ಎಚ್‌ಐವಿ ಸುರಕ್ಷತಾ ಅಭಿಯಾನ-2026' ರ ಕರಪತ್ರಗಳನ್ನು ಬಿಡುಗಡೆಗೊಳಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್. ಬಸರೆಡ್ಡಿ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್, ಡಿಎನ್‌ಒ ಗಿರೀಶ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಮ್ ಸೇರಿದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು, ವಿವಿಧ ರಕ್ತ ಭಂಡಾರದ ಪ್ರತಿನಿಧಿಗಳು, ಜೆ.ಎಸ್.ಡಬ್ಲ್ಯೂ ?? ಸಂಸ್ಥೆಯ ಪ್ರತಿನಿಧಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



## ಎಸ್.ಐ.ಆರ್ ಕಾರ್ಯ ವೀಕ್ಷಿಸಿದ ಮುಖ್ಯ ಚುನಾವಣಾಧಿಕಾರಿ

ಜು.14: ಕಲಬುರಗಿ ಜಿಲ್ಲೆಯ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಪರಿಶೀಲಿಸಲು ಸೋಮವಾರ ಬೀದರನಿಂದ ಕಲಬುರಗಿಗೆ ಆಗಮಿಸುವ ಮಾರ್ಗ ಮಧ್ಯೆ ಕಮಲಾಪುರ ತಾಲೂಕಿನ ಕಿಣ್ಣಿ ಸಡಕ್ ಗ್ರಾಮದಲ್ಲಿನ ಮತಗಟ್ಟೆಯೊಂದಕ್ಕೆ ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ವಿ.ಅನ್ಬುಕುಮಾರ್ ಅವರು ಭೇಟಿ ನೀಡಿ ಎಸ್.ಐ.ಆರ್ ಕಾರ್ಯ ವೀಕ್ಷಿಸಿದರು. ಸಹಾಯಕ ಆಯುಕ್ತರಾದ ಸಾಹಿತ್ಯ ಅಲದಕಟ್ಟಿ, ತಹಶೀಲ್ದಾರ ಮೊಹಮ್ಮದ್ ಮೋಹಸೀನ್ ಇದ್ದರು.

## ರಾಜ್ಯ ಮಟ್ಟದ ಖೋ ಖೋ ಚಾಂಪಿಯನ್‌ಶಿಪ್‌ಗೆ ವ್ಯಾಕರನಾಳ ಶಾಲಾ ಮಕ್ಕಳು ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಜಿಲ್ಲೆಯ ಕ್ರೀಡಾ ಲೋಕಕ್ಕೆ ಹೆಮ್ಮೆ ತರುವಂತಹ ಅಪೂರ್ವ ಸಾಧನೆಯೊಂದು ಹೊರಹೊಮ್ಮಿದೆ. ಇದೇ 17 ಜುಲೈ 2026 ರಂದು ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ಆಯೋಜಿಸಲಾಗಿರುವ ಪ್ರತಿಷ್ಠಿತ ರಾಜ್ಯ ಮಟ್ಟದ ಖೋ ಖೋ ಚಾಂಪಿಯನ್‌ಶಿಪ್ ಪಂದ್ಯಾವಳಿಗೆ ಪಟ್ಟಣ ಸಮೀಪದ ವ್ಯಾಕರನಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುದ್ದು ಮಕ್ಕಳು ಅಧಿಕೃತವಾಗಿ ಆಯ್ಕೆಯಾಗಿದ್ದಾರೆ. ಗ್ರಾಮೀಣ ಭಾಗದ ಕಠಿಣ ಪರಿಸ್ಥಿತಿಯಲ್ಲೂ ಶ್ರದ್ಧೆ ಹಾಗೂ ಕಠಿಣ ಪರಿಶ್ರಮದಿಂದ ಕ್ರೀಡಾಭ್ಯಾಸ ನಡೆಯಿಸಿ, ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಜಯಭೇರಿ ಬಾರಿಸಿ ಈಗ ರಾಜ್ಯ ಮಟ್ಟದ ಕಣಕ್ಕೆ ಲಗ್ಗೆ ಇಟ್ಟಿರುವ ಈ ಬಾಲ ಪ್ರತಿಭೆಗಳ ಸಾಧನೆಗೆ ಇಡೀ ಜಿಲ್ಲೆಯದ್ಯಂತ ಶ್ಲಾಘನೆ ವ್ಯಕ್ತವಾಗುತ್ತಿದೆ. ಅಭಿನಂದನೆಗಳ ಮಹಾಪೂರ: ಶಾಲೆಯ ಕೀರ್ತಿಯನ್ನು ರಾಜ್ಯಮಟ್ಟಕ್ಕೆ ಕೊಂಡೊಯ್ದಿರುವ ಮುದ್ದು ಮಕ್ಕಳಿಗೆ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತಾ ಹೂನೂರು, ಕ್ಷೇತ್ರ ಸಂಪನ್ಮೂಲ ಸಮನ್ವಯ ಅಧಿಕಾರಿ, ಹನಮಂತಪ್ಪ ಕ್ವಾರಿ (BRC) ಹಾಗೂ ಶಿಕ್ಷಣ ಇಲಾಖೆಯ ಸಮಸ್ತ ಅಧಿಕಾರಿಗಳು, ನಾಗಲಾಪುರ ವಲಯದ ಅಖಿಕ ನಿವಾಸ ರೆಡ್ಡಿ ಜಂಟಿಯಾಗಿ ಪ್ರಶಂಸೆ ವ್ಯಕ್ತಪಡಿಸಿ ಹಾರ್ದಿಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ. ಇದರೊಂದಿಗೆ ಮಕ್ಕಳ ಈ ಐತಿಹಾಸಿಕ ಸಾಧನೆಗೆ ಬೆನ್ನೆಲುಬಾಗಿ ನಿಂತು ಪ್ರೋತ್ಸಾಹಿಸಿದ ಶಾಲೆಯ ಮುಖ್ಯಗುರುಗಳು, ಸಹ ಶಿಕ್ಷಕವೃಂದ ಹಾಗೂ ಇಡೀ ವ್ಯಾಕರನಾಳ ಗ್ರಾಮದ ಸಾರ್ವಜನಿಕರು ಮತ್ತು ಪೋಷಕರು ಕ್ರೀಡಾಪಟುಗಳಿಗೆ ಸಿಹಿ ಹಂಚಿ, ಪ್ರೀತಿಯ ಶುಭ ಹಾರೈಕೆಗಳನ್ನು ತಿಳಿಸಿದ್ದಾರೆ. ರಾಜ್ಯ ಮಟ್ಟದಲ್ಲೂ ವಿಜಯಲಕ್ಷ್ಮಿ ಒಲಿಯಲಿ: ಚಿತ್ರದುರ್ಗದಲ್ಲಿ ನಡೆಯಲಿರುವ ಈ ಪ್ರಮುಖ ಪಂದ್ಯಾವಳಿಯಲ್ಲಿ ನಮ್ಮ ವ್ಯಾಕರನಾಳ ಶಾಲೆಯ ತಂಡವು ಅತ್ಯುತ್ತಮ ಪ್ರದರ್ಶನ ನೀಡಿ, ರಾಯಚೂರು ಜಿಲ್ಲೆಗೆ ಕೀರ್ತಿ ತರಲಿ ಎಂದು ಸಮಸ್ತ ಸಾರ್ವಜನಿಕರು ಆಶಿಸಿದ್ದಾರೆ.

## ಮಣ್ಣೆತ್ತಿನ ಅಮಾವಾಸ್ಯೆ ಸಂಭ್ರಮ: ಬಳ್ಳಾರಿಯಲ್ಲಿ ಜೋರಾದ ಮಣ್ಣೆತ್ತಿನ ಖರೀದಿ-ಮಾರಾಟ, ಹಬ್ಬದ ಸಡಗರ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರೈತರು ಮತ್ತು ಗ್ರಾಮೀಣ ಜನರ ಪಾಲಿನ ವಿಶೇಷ ಹಬ್ಬವಾದ ಮಣ್ಣೆತ್ತಿನ ಅಮಾವಾಸ್ಯೆ ಅಂಗವಾಗಿ ಬಳ್ಳಾರಿ ನಗರ ಹಾಗೂ ಜಿಲ್ಲೆಯ ವಿವಿಧ ಭಾಗಗಳಲ್ಲಿ ಮಂಗಳವಾರ ಹಬ್ಬದ ಸಂಭ್ರಮ ಮನೆಮಾಡಿತು. ಹಬ್ಬದ ನಿಮಿತ್ತ ನಗರದ ಪ್ರಮುಖ ರಸ್ತೆಗಳಲ್ಲಿ ಹಾಗೂ ಮಾರುಕಟ್ಟೆ ಪ್ರದೇಶಗಳಲ್ಲಿ ವಿವಿಧ ಗಾತ್ರದ ಮಣ್ಣಿನ ಎತ್ತುಗಳ ಮಾರಾಟ ಜೋರಾಗಿ ನಡೆಯಿತು. ಬೆಳಗ್ಗೆಯಿಂದಲೇ ಜನರು ಕುಟುಂಬ ಸಮೇತರಾಗಿ ಮಣ್ಣಿನ ಎತ್ತುಗಳನ್ನು ಖರೀದಿಸಲು ಮುಗಿಬಿದ್ದರು.

ಮಣ್ಣೆತ್ತಿನ ಅಮಾವಾಸ್ಯೆ ಕೃಷಿ ಸಂಸ್ಕೃತಿಯೊಂದಿಗೆ ಬೆಸೆದುಕೊಂಡಿರುವ ವಿಶಿಷ್ಟ ಆಚರಣೆಯಾಗಿದೆ. ರೈತರು ಕೃಷಿಗೆ ಆಧಾರವಾದ ಎತ್ತುಗಳನ್ನು ದೇವರ ಸ್ವರೂಪವೆಂದು ಭಾವಿಸಿ, ಮಣ್ಣಿನ ಎತ್ತುಗಳನ್ನು ಪೂಜಿಸುವ ಮೂಲಕ ಉತ್ತಮ ಮಳೆ, ಸಮೃದ್ಧ ಬೆಳೆ ಹಾಗೂ ಕುಟುಂಬದ ಸುಖ-ಶಾಂತಿಗಾಗಿ ಪ್ರಾರ್ಥನೆ ಸಲ್ಲಿಸುತ್ತಾರೆ.

ಬಳ್ಳಾರಿಯ ಗಾಂಧಿನಗರ, ಬೆಂಗಳೂರು ರಸ್ತೆ, ಕುಂಬಾರ ಬೀದಿ, ಸಂಗಂ ಸರ್ಕಲ್, ದುರ್ಗಮ್ಮ ದೇವಸ್ಥಾನ , ಮೋಕಾ ರಸ್ತೆ ಸೇರಿದಂತೆ ನಗರದ ವಿವಿಧ ಪ್ರದೇಶಗಳಲ್ಲಿ ತಾತ್ಕಾಲಿಕ ಮಳಿಗೆಗಳನ್ನು ತೆರೆಯಲಾಗಿದ್ದು, ಸಣ್ಣ, ಮಧ್ಯಮ ಹಾಗೂ ದೊಡ್ಡ ಗಾತ್ರದ ಮಣ್ಣಿನ ಎತ್ತುಗಳು, ಪೂಜಾ ಸಾಮಗ್ರಿಗಳು ಹಾಗೂ ಅಲಂಕಾರಿಕ ವಸ್ತುಗಳ ಮಾರಾಟ ಭರದಿಂದ ನಡೆಯಿತು. ಮಕ್ಕಳೂ ಸಹ ಬಣ್ಣಬಣ್ಣದ ಮಣ್ಣಿನ ಎತ್ತುಗಳನ್ನು ಖರೀದಿಸಿ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಂಡರು.

ಈ ಹಬ್ಬದಿಂದ ಸ್ಥಳೀಯ ಕುಂಬಾರ ಸಮುದಾಯದ ಕಲಾವಿದರಿಗೆ ಉತ್ತಮ ವ್ಯಾಪಾರ ದೊರೆತಿದ್ದು, ಹಲವು ದಿನಗಳಿಂದ ತಯಾರಿಸಿದ್ದ ಮಣ್ಣಿನ ಎತ್ತುಗಳಿಗೆ ಉತ್ತಮ ಬೇಡಿಕೆ ಕಂಡುಬಂತು. ವ್ಯಾಪಾರಿಗಳು ಸಹ ಕಳೆದ ವರ್ಷಕ್ಕಿಂತ ಈ ಬಾರಿ ಉತ್ತಮ ಮಾರಾಟವಾಗುತ್ತಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿಯೂ ಮನೆಗಳನ್ನು ಸ್ವಚ್ಛಗೊಳಿಸಿ, ಮಣ್ಣಿನ ಎತ್ತುಗಳಿಗೆ ವಿಶೇಷ ಪೂಜೆ ಸಲ್ಲಿಸಿ, ಸಂಪ್ರದಾಯಬದ್ಧವಾಗಿ ನೈವೇದ್ಯ ಅರ್ಪಿಸುವ ಮೂಲಕ ಮಣ್ಣೆತ್ತಿನ ಅಮಾವಾಸ್ಯೆಯನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಈ ಮೂಲಕ ಕೃಷಿ ಸಂಸ್ಕೃತಿ, ಸಂಪ್ರದಾಯ ಹಾಗೂ ಪರಿಸರ ಸ್ನೇಹಿ ಆಚರಣೆಯನ್ನು ಸಾರುವ ಮಣ್ಣೆತ್ತಿನ ಅಮಾವಾಸ್ಯೆ ಹಬ್ಬವು ಬಳ್ಳಾರಿ ಜಿಲ್ಲೆಯಲ್ಲಿ ಭಕ್ತಿ, ಸಂಭ್ರಮ ಮತ್ತು ಸಾಂಪ್ರದಾಯಿಕ ವೈಭವದೊಂದಿಗೆ ನೆರವೇರಿತು.

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಆಯ್ಕೆ: ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ (ಸರ್ಕಾರಿ ಸಂಸ್ಕೃತ ಹಾಗೂ ಚಿತ್ರಕಲಾ ಕಾಲೇಜುಗಳು ಒಳಗೊಂಡಂತೆ) 2026-27ನೇ ಶೈಕ್ಷಣಿಕ ಸಾಲಿಗೆ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು (ಅತಿಥಿ ಗ್ರಂಥಪಾಲಕರು ಹಾಗೂ ಅತಿಥಿ ದೈಹಿಕ ಶಿಕ್ಷಣ ನಿರ್ದೇಶಕರು ಒಳಗೊಂಡಂತೆ) ತಾತ್ಕಾಲಿಕವಾಗಿ ಆಯ್ಕೆಮಾಡಿಕೊಳ್ಳಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ನಿಗದಿತ ವೇಳಾಪಟ್ಟಿಯೊಳಗೆ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು / ತಿದ್ದುಪಡಿ ಮಾಡಲು ಜುಲೈ 18 ಕೊನೆಯ ದಿನವಾಗಿದೆ. ಜುಲೈ 19 ರಂದು ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಿಸುವ ದಿನ, ಜುಲೈ 19 ರಿಂದ 22 ರ ವರೆಗೆ ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಿಸಿದ ನಂತರ ಅರ್ಜಿಯನ್ನು ತಿದ್ದುಪಡಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಜುಲೈ 25 ರಂದು ತಾತ್ಕಾಲಿಕ ಕಾರ್ಯಭಾರ ಪ್ರಕಟಿಸುವ ದಿನವಾಗಿದ್ದು, ಜುಲೈ 26 ರಂದು ಕೌನ್ಸಿಲಿಂಗ್ ಮೆರಿಟ್ ಪಟ್ಟಿ ಹಾಗೂ ಕಾರ್ಯಭಾರ ಪ್ರಕಟಿಸುವ ದಿನ ಮತ್ತು ಜುಲೈ 28 ರಂದು ಮೆರಿಟ್ ಪಟ್ಟಿಯನ್ವಯ ಕಾಲೇಜು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಲಾಗುವುದು.

*ವಿದ್ಯಾರ್ಹತೆ ಮತ್ತು ಆಯ್ಕೆ ಮಾನದಂಡಗಳು*

ಯುಜಿಸಿ 2018 ರ ಮಾರ್ಗಸೂಚಿಗಳನ್ವಯ ಅಭ್ಯರ್ಥಿಗಳು ಸ್ನಾತಕೋತ್ತರ ಪದವಿಯಲ್ಲಿ ಶೇ.55 ಅಂಕಗಳನ್ನು (ಎಸ್‌ಸಿ/ಎಸ್‌ಟಿ/ಒಬಿಸಿ/ವಿಶೇಷ ಚೇತನರಿಗೆ ಶೇ.50) ಹೊಂದಿರಬೇಕು. ಇದರೊಂದಿಗೆ ಎನ್‌ಇಟಿ / ಎಸ್‌ಎಲ್‌ಇಟಿ / ಕೆ.ಸೆಟ್ / ಪಿಹೆಚ್.ಡಿ ವಿದ್ಯಾರ್ಹತೆ ಹೊಂದಿರುವುದು ಕಡ್ಡಾಯ.

*ಮೆರಿಟ್ ಅಂಕಗಳ ಹಂಚಿಕೆ (ಒಟ್ಟು 100 ಅಂಕಗಳು)* :

ಸ್ನಾತಕೋತ್ತರ ಪದವಿ ಅಂಕಗಳು: ಅಭ್ಯರ್ಥಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಶೇ. 25 ಭಾಗವನ್ನು ಪರಿಗಣಿಸಲಾಗುವುದು (ಗರಿಷ್ಠ 25 ಅಂಕಗಳು).

ಹೆಚ್ಚುವರಿ ವಿದ್ಯಾರ್ಹತೆ: ಪಿಹೆಚ್.ಡಿ ಹೊಂದಿದ್ದಲ್ಲಿ 12 ಅಂಕಗಳು; ಎನ್‌ಇಟಿ/ಕೆ-ಸೆಟ್/ಎಸ್‌ಎಲ್‌ಇಟಿ ಹೊಂದಿದ್ದಲ್ಲಿ 09 ಅಂಕಗಳು; ಎಂ.ಫಿಲ್ ಹೊಂದಿದ್ದಲ್ಲಿ 06 ಅಂಕಗಳು. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿದ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 48 ಅಂಕಗಳನ್ನು (ಮಿತಿ 16 ವರ್ಷಗಳು) ನೀಡಲಾಗುವುದು. ಅರ್ಹ ವಿಕಲಚೇತನ ಅಭ್ಯರ್ಥಿಗಳಿಗೆ ಹೆಚ್ಚುವರಿಯಾಗಿ 10 ಅಂಕಗಳನ್ನು ನೀಡಲಾಗುವುದು.

*ಅಭ್ಯರ್ಥಿಗಳಿಗೆ ಪ್ರಮುಖ ಸೂಚನೆಗಳು:*

2025-26 ನೇ ಸಾಲಿಗೆ ಈಗಾಗಲೇ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮತ್ತೆ ಹೊಸದಾಗಿ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಆದರೆ, ತಮ್ಮ ಅರ್ಜಿಯಲ್ಲಿನ ಮಾಹಿತಿಯನ್ನು ತಿದ್ದುಪಡಿ ಮಾಡಲು ಅವಕಾಶವಿರುತ್ತದೆ.

ಕರ್ನಾಟಕ ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸಲ್ಲಿಸಿದ ಸೇವೆಯನ್ನು ಮಾತ್ರ ಪರಿಗಣಿಸಲಾಗುವುದು. ಖಾಸಗಿ ಕಾಲೇಜು ಅಥವಾ ವಿಶ್ವವಿದ್ಯಾಲಯಗಳಲ್ಲಿ ಸಲ್ಲಿಸಿದ ಸೇವೆಯನ್ನು ಪರಿಗಣಿಸುವುದಿಲ್ಲ. ಸಾಮಾನ್ಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು- https://emis.karnataka.gov.in/application.aspx ಮತ್ತು ಸರ್ಕಾರಿ ಚಿತ್ರಕಲಾ / ಸಂಸ್ಕೃತ ಕಾಲೇಜುಗಳು -https://emis.karnataka.gov.in/AppSFC.aspx ಲಿಂಕ್ ಗಳ ಮೂಲಕ ಅನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಬಹುದು. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿತನವನ್ನು ತಿರಸ್ಕರಿಸಲಾಗುವುದು. ಒಂದು ವೇಳೆ ಹಾಜರುಪಡಿಸಿದ ದಾಖಲೆಗಳು ನಕಲಿ ಎಂದು ಕಂಡುಬಂದಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು. ಆಯ್ಕೆಯಾಗಿ ಕರ್ತವ್ಯಕ್ಕೆ ಹಾಜರಾದ ನಂತರ ಪ್ರಸೂತಿ ರಜೆ ಮೇಲೆ ತೆರಳುವ ಮಹಿಳಾ ಅತಿಥಿ ಉಪನ್ಯಾಸಕಿಯರಿಗೆ 90 ದಿನಗಳ ವೇತನ ಸಹಿತ ಮಾತೃತ್ವ ರಜೆಯ ಸೌಲಭ್ಯವನ್ನು ನೀಡಲಾಗುತ್ತದೆ. ಹೆಚ್ಚಿನ ವಿವರಗಳಿಗಾಗಿ ಇಲಾಖೆಯ ಅಧಿಕೃತ ವೆಬ್‌ಸೈಟ್ https://dce.karnataka.gov.in ಅನ್ನು ಪ್ರತಿ ನಿತ್ಯ ಗಮನಿಸುವಂತೆ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಖಂಡಿಸಿ ಯುವ ಕಾಂಗ್ರೆಸ್ ಪ್ರತಿಭಟನೆ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ; ರಾಜ್ಯ ಮಟ್ಟದ ಸಿಇಟಿ ವ್ಯವಸ್ಥೆಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನೀಟ್ (NEET) ಪರೀಕ್ಷೆಯಲ್ಲಿನ ಪ್ರಶ್ನೆಪತ್ರಿಕೆ ಸೋರಿಕೆ, ವಿದ್ಯಾರ್ಥಿಗಳಿಗೆ ಆಗುತ್ತಿರುವ ಅನ್ಯಾಯ ಹಾಗೂ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸುವಂತೆ ಆಗ್ರಹಿಸಿ ಬಳ್ಳಾರಿ ಜಿಲ್ಲಾ ಯುವ ಕಾಂಗ್ರೆಸ್ (ನಗರ) ವತಿಯಿಂದ ಮಂಗಳವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. 'ವಿದ್ಯಾರ್ಥಿಗಳ ಧ್ವನಿ (ChhatronKiGoonj)' ಜಾಗೃತಿ ಅಭಿಯಾನದ ಅಂಗವಾಗಿ ಆಯೋಜಿಸಿದ್ದ ಪ್ರತಿಭಟನೆ ನಗರದ ಮುನ್ಸಿಪಲ್ ಮೈದಾನದಿಂದ ಆರಂಭಗೊಂಡು ರಾಯಲ್ ಸರ್ಕಲ್‌ವರೆಗೆ ಮೆರವಣಿಗೆ ರೂಪದಲ್ಲಿ ಸಾಗಿತು. ಪ್ರತಿಭಟನೆಯಲ್ಲಿ ವಿವಿಧ ಕಾಲೇಜುಗಳ ಸಾವಿರಾರು ವಿದ್ಯಾರ್ಥಿಗಳು, ಯುವ ಕಾಂಗ್ರೆಸ್ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ರಾಯಲ್ ಸರ್ಕಲ್‌ನಲ್ಲಿ ನಡೆದ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಕರ್ನಾಟಕ ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಗೌಡ, ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆಯಿಂದ ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಸಂಕಷ್ಟಕ್ಕೆ ಸಿಲುಕಿದೆ ಎಂದು ಆರೋಪಿಸಿದರು.

ಪ್ರತಿ ವರ್ಷ ವೈದ್ಯಕೀಯ ಶಿಕ್ಷಣದ ಕನಸು ಹೊತ್ತು ವಿದ್ಯಾರ್ಥಿಗಳು ನೀಟ್ ಪರೀಕ್ಷೆಗೆ ಹಾಜರಾಗುತ್ತಾರೆ. ಆದರೆ ಪ್ರಶ್ನೆಪತ್ರಿಕೆ ಸೋರಿಕೆಯನ್ನು ತಡೆಯುವಲ್ಲಿ ಕೇಂದ್ರ ಸರ್ಕಾರ ಹಾಗೂ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಸಂಪೂರ್ಣ ವಿಫಲವಾಗಿವೆ. ಮರುಪರೀಕ್ಷೆ ನಡೆಸುವುದರಿಂದ ವಿದ್ಯಾರ್ಥಿಗಳು ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದು, ಅನೇಕರು ಆತ್ಮಹತ್ಯೆಗೆ ಶರಣಾಗಿರುವುದು ಅತ್ಯಂತ ದುಃಖದ ಸಂಗತಿ ಎಂದು ಹೇಳಿದರು.



ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು. ಎನ್‌ಟಿಎ ಕಾರ್ಯವೈಖರಿಯ ಕುರಿತು ಸಮಗ್ರ ತನಿಖೆ ನಡೆಸಿ ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಬೇಕು. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ರಾಜ್ಯಮಟ್ಟದ ಸಿಇಟಿ ಪರೀಕ್ಷಾ ವ್ಯವಸ್ಥೆಗೆ ಆದ್ಯತೆ ನೀಡಬೇಕು ಹಾಗೂ ವಾರ್ಷಿಕ ಶೈಕ್ಷಣಿಕ ವೇಳಾಪಟ್ಟಿಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಕರ್ನಾಟಕದ ಸಿಇಟಿ ಪರೀಕ್ಷೆಯಲ್ಲಿ ಸಣ್ಣ ವಿಷಯಗಳಿಗೂ ಆಕ್ಷೇಪ ವ್ಯಕ್ತಪಡಿಸುವ ಬಿಜೆಪಿ ನಾಯಕರು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ವಿದ್ಯಾರ್ಥಿಗಳ ಭವಿಷ್ಯ ಹಾಳಾಗುತ್ತಿರುವ ಕುರಿತು ಮೌನ ವಹಿಸಿರುವುದು ಅವರ ದ್ವಂದ್ವ ನಿಲುವನ್ನು ಬಯಲಿಗೆಳೆಯುತ್ತದೆ ಎಂದು ಟೀಕಿಸಿದರು.

ಪ್ರತಿಭಟನೆಯ ನೇತೃತ್ವವನ್ನು ಬಳ್ಳಾರಿ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೆ. ಶ್ರೀಕಾಂತ್, ಗ್ರಾಮೀಣ ಜಿಲ್ಲಾ ಅಧ್ಯಕ್ಷ ಎನ್.ಕೆ.ಎಸ್. ಮಂಜುನಾಥ ಹಾಗೂ ಜಿಲ್ಲಾ ಸಾಮಾಜಿಕ ಜಾಲತಾಣ ಅಧ್ಯಕ್ಷ ವಿವೇಕ್ ಮಂಡಿಮಠ ವಹಿಸಿದ್ದರು.

ಈ ಸಂದರ್ಭದಲ್ಲಿ ತಾರಿಕ್ ಭಗವಾನ್, ಅಲ್ಲಂ ಪ್ರಶಾಂತ್, ಬುಡ ಅಧ್ಯಕ್ಷ ಜೆಎಸ್ ಆಂಜನೇಯಲು, ಭೋಪಾಟಿ ವಿಷ್ಣುವರ್ಧನ್ , ಸಿದ್ದು ಹಳ್ಳೆಗೌಡ, ಮಹೇಂದ್ರ, ಜಿಲ್ಲಾ ಯುವ ಕಾಂಗ್ರೆಸ್ ಹಾಗೂ ಸಾಮಾಜಿಕ ಜಾಲತಾಣ ಘಟಕದ ಪದಾಧಿಕಾರಿಗಳು, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ಕಾಂಗ್ರೆಸ್ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ರೈತರ ಬಾಳಿಗೆ ಬೆಳಕಾದ ಮಾಜಿ ಒಐಅ ಹೆಚ್.ಆರ್. ಶ್ರೀನಾಥ್



**ಗಂಗಾವತಿ:** ಸಣಪುರ ಕೆರೆಯ ನೀರಾವರಿ ಸಮಸ್ಯೆಗೆ ಸ್ಪಂದಿಸಿದ ಮಾಜಿ ವಿಧಾನ ಪರಿಷತ್ ಸದಸ್ಯ ಹೆಚ್.ಆರ್. ಶ್ರೀನಾಥ್ ಅವರ ಪ್ರಯತ್ನದಿಂದ ಹಲವು ವರ್ಷಗಳಿಂದ ಜೀರ್ಣಾವಸ್ಥೆಯಲ್ಲಿದ್ದ ಕೆರೆಯ ಹಳೆಯ ಕ್ರಸ್ಟ್ ಗೇಟ್ ತೆರವುಗೊಳಿಸಿ, ಹೊಸ ಗೇಟ್ ಅಳವಡಿಸುವ ಕಾಮಗಾರಿ ಆರಂಭವಾಗಿದೆ.

ಎರಡು ದಿನಗಳ ಹಿಂದೆ ಹೆಚ್.ಆರ್. ಶ್ರೀನಾಥ್ ಅವರು ರೈತರು ಹಾಗೂ ಸಂಬಂಧಿತ ಅಧಿಕಾರಿಗಳೊಂದಿಗೆ ಸಣಪುರ ಕೆರೆಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದ್ದರು. ಈ ವೇಳೆ ಹಲವು ವರ್ಷಗಳಿಂದ ಹಾಳಾಗಿದ್ದ ಹಳೆಯ ಕ್ರಸ್ಟ್ ಗೇಟ್ ಅನ್ನು ತಕ್ಷಣ ತೆರವುಗೊಳಿಸಿ, ಹೊಸ ಗೇಟ್ ಅಳವಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು.

ಅವರ ಸೂಚನೆಯ ಮೇರೆಗೆ ಅಧಿಕಾರಿಗಳು ತ್ವರಿತವಾಗಿ ಕ್ರಮ ಕೈಗೊಂಡು ಹೊಸ ಕ್ರಸ್ಟ್ ಗೇಟ್ ಅಳವಡಿಸುವ ಕಾಮಗಾರಿಯನ್ನು ಆರಂಭಿಸಿದ್ದಾರೆ. ಇದರಿಂದ ಸಣಪುರ ಕೆರೆಯ ನೀರಿನ ನಿರ್ವಹಣೆ ಸುಧಾರಿಸಿ, ಸುತ್ತಮುತ್ತಲಿನ ರೈತರಿಗೆ ಅನುಕೂಲವಾಗಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ. ಸ್ಥಳೀಯ ರೈತರು ಹೆಚ್.ಆರ್. ಶ್ರೀನಾಥ್ ಅವರ ತ್ವರಿತ ಸ್ಪಂದನೆಗೆ ಕೃತಜ್ಞತೆ ವ್ಯಕ್ತಪಡಿಸಿದ್ದು, ಹಲವು ವರ್ಷಗಳಿಂದ ಬಾಕಿ ಉಳಿದಿದ್ದ ಸಮಸ್ಯೆಗೆ ಪರಿಹಾರ ದೊರೆಯುತ್ತಿರುವುದು ಸಂತಸದ ವಿಷಯ ಎಂದು ಅಭಿಪ್ರಾಯಪಟ್ಟಿದ್ದಾರೆ.

## ಅಂತರ್ ರಾಜ್ಯ ಪ್ರಶಸ್ತಿಗೆ ಆಯ್ಕೆಯಾದ ಜಿಲ್ಲೆಯ ಜನಪದ ಕಲಾವಿದ

**ಕೊಪ್ಪಳ:** ಜಿಲ್ಲೆಯ ಖ್ಯಾತ ಜಾನಪದ ಕಲಾವಿದ, ಜಾನಪದ ಸಾಮ್ರಾಟ್ ಎಂದು ಹೆಸರು ಹೊಂದಿರುವ ಜಿಲ್ಲೆಯ ಕುಕನೂರು ತಾಲೂಕಿನ ಗೋರ್ಲೆಕೊಪ್ಪ ಗ್ರಾಮದ ಕಲಾವಿದ ಶರಣಯ್ಯ ಎನ್. ಇಟಗಿ ಅವರು



ಕಾಸರಗೋಡಿನ ಕನ್ನಡ ಭವನ ನೀಡುವ ಪ್ರತಿಷ್ಠಿತ ನ್ನಡ ಪಯಸ್ವಿನಿ ಜಾನಪದ ರತ್ನ–ಅಚೀವ್‌ಮೆಂಟ್ ಅವಾರ್ಡ್–2026ಗೆ ಆಯ್ಕೆಯಾಗಿದ್ದಾರೆ.

ಜಾನಪದ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿರುವ ಶರಣಯ್ಯ ಎನ್. ಇಟಗಿ ಅವರು ನೂರಾರು ಜಾನಪದ ತಂಡಗಳನ್ನು ಸಂಘಟಿಸಿ, ತರಬೇತಿ ನೀಡಿ ಬೆಳೆಸಿದ್ದಾರೆ. ಅಲ್ಲದೆ, ದೆಹಲಿಯಲ್ಲಿ ನಡೆದ ಗಣರಾಜ್ಯೋತ್ಸವ ಪೆರೇಡ್‌ನಲ್ಲಿ ಕರ್ನಾಟಕದ ಜಾನಪದ ಕಲೆಯನ್ನು ಪ್ರತಿನಿಧಿಸುವ ಮೂಲಕ ರಾಜ್ಯಕ್ಕೆ ಕೀರ್ತಿ ತಂದುಕೊಟ್ಟ ಸಾಧನೆ ಹಾಗೂ ಸಿಂಗಾಪುರ ಸೇರಿದಂತೆ ವಿದೇಶಿ ನೆಲದಲ್ಲೂ ಸಹ ಜನಪದ ಕಲೆಯ ಪ್ರದರ್ಶನ ಮಾಡಿ ಕನ್ನಡದ ಕಲೆಯನ್ನು ದೇಶ ವಿದೇಶಗಳಲ್ಲಿ ಪ್ರದರ್ಶನ ಮಾಡಿರುವುದನ್ನು ಪರಿಗಣಿಸಿ ಈ ಅಂತರ್‌ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಜುಲೈ 26ರಂದು ಕಾಸರಗೋಡಿನಲ್ಲಿ ಜರುಗುವ ಕನ್ನಡ ಭವನದ ರಜತ ಸಂಭ್ರಮ ಸಮಾರೋಪ ಕಾರ್ಯಕ್ರಮ ಹಾಗೂ ಕರ್ನಾಟಕ ಗಡಿನಾಡು ಕನ್ನಡ ಸಮ್ಮೇಳನದ ಅಂಗವಾಗಿ ನಡೆಯುವ ಸಮಾರಂಭದಲ್ಲಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುತ್ತದೆ ತಿಳಿಸಿರುತ್ತಾರೆ.

## ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ರೈತರಿಂದ ಅರ್ಜಿ ಆಹ್ವಾನ



**ಕಲಬುರಗಿ:** 2026–27ನೇ ಸಾಲಿಗೆ ಕೃಷಿ ಇಲಾಖೆಯಿಂದ ಹೈಟೆಕ್ ಹಾರ್ವೆಸ್ಟರ್ ಹಬ್ (ಶುಗರ್ ಕೇನ್ ಹಾರ್ವೆಸ್ಟರ್ ಮತ್ತು ಕಂಬೈನ್ ಹಾರ್ವೆಸ್ಟರ್) ಯೋಜನೆಯಡಿ ಆಸಕ್ತಿಯುಳ್ಳ ರೈತರಿಂದ ಹಾರ್ವೆಸ್ಟರ್ ಹಬ್ ಘಟಕಗಳಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಈ ಯೋಜನೆಯಡಿ ಸಾಮಾನ್ಯ ರೈತರಿಗೆ ಗರಿಷ್ಟ ಶೇ 50ರಂತೆ, ಪ.ಜಾ/ಪ.ಪಂ ವರ್ಗದ ರೈತರಿಗೆ ಗರಿಷ್ಠ ಶೇ. 70 ರಷ್ಟು ಹಾಗೂ ಸಂಘ–ಸಂಸ್ಥೆಗಳಿಗೆ (ಚಾಲ್ತಿಯಲ್ಲಿರುವ ಕೃಷಿಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆ/ ಎಫ್‌ಪಿಓ (FPO) ಗಳನ್ನೊಳಗೊಂಡಂತೆ) ಶೇ.70 ರಷ್ಟು ಕ್ರೆಡಿಟ್ ಲಿಂಕ್ ಬ್ಯಾಂಕ್ ಎಂಡೆಡ್ ಸಬ್ಸಿಡಿ (Credit Linked Backended Subsidy) ನೀಡಲಾಗುತ್ತದೆ. ಈ ಕೆಳಕಂಡ ವರ್ಗದಡಿ ವೈಯಕ್ತಿಕ ರೈತರಿಂದ ಹಾರ್ವೆಸ್ಟರ್ ಹಬ್ ಘಟಕಗಳ ಅರ್ಜಿ ಸಲ್ಲಿಸಬಹುದಾಗಿದೆ.

ಶುಗರ್ ಕೇನ್ ಹಾರ್ವೆಸ್ಟರ್ ಪರಿಶಿಷ್ಟ ಜಾತಿಯ–1 ಹಾಗೂ ಕಂಬೈನ್ ಹಾರ್ವೆಸ್ಟರ್ ಸಾಮಾನ್ಯ–1 ಹಾಗೂ ಪರಿಶಿಷ್ಟ ಜಾತಿ–1 ಹೈಟೆಕ್ ಹಾರ್ವೆಸ್ಟರ್ ಹಬ್‌ಗಳು ಮಂಜೂರಾಗಿರುತ್ತವೆ. ಅರ್ಹ ರೈತರು ಭರ್ತಿ ಮಾಡಿದ ಅರ್ಜಿಯೊಂದಿಗೆ ಆಧಾರ್‌ಕಾರ್ಡ್ ಝೆರಾಕ್ಸ್ ಹಾಗೂ ಎಫ್‌ಐಡಿ ನಂಬರ್, ಫೋಟೋ, ಬ್ಯಾಂಕ್ ಪಾಸ್‌ಬುಕ್ ಝೆರಾಕ್ಸ್ , ತಾತ್ವಿಕ ಸಾಲ ಮಂಜೂರಾತಿ ಪತ್ರ (In Principle Loan Sanction Letter) ಹಾಗೂ ರೂ. 100 ರ ಬಾಂಡ ಪೇಪರ ನೋಟರಿ ಮಾಡಿ ಹೈಟೆಕ್ ಹಾರ್ವೆಸ್ಟರ್ ಹಬ್ ಪರಭಾರೆ ಮಾಡುವುದಿಲ್ಲ ಎಂಬ ಮುಚ್ಚಳಿಕೆ ಅರ್ಜಿಯೊಂದಿಗೆ ಸಲ್ಲಿಸಬೇಕು.

ಆಸಕ್ತಿಯುಳ್ಳ ರೈತರು ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯೊಂದಿಗೆ ಅವಶ್ಯಕ ದಾಖಲಾತಿ ಹಾಗೂ ಸಂಬಂಧಿಸಿರುವ ಬ್ಯಾಂಕ್‌ದಿಂದ ತಾತ್ವಿಕ ಸಾಲಮಂಜೂರಾತಿ ಪತ್ರದೊಂದಿಗೆ (In Principle Loan Sanction Letter) 2026ರ ಜುಲೈ 31ರೊಳಗಾಗಿ ಕಲಬುರಗಿ ಜಂಟಿ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಂಟಿ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಅಭಿವೃದ್ಧಿ ಕಾಮಗಾರಿ ಪರಿಶೀಲಿಸಿದ ಸಿಇಒ ಬಾಲೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲೆಯ ಬಾದಾಮಿ ತಾಲೂಕಿನ ವಿವಿಧ ಗ್ರಾಮಗಳಿಗೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ ಭೇಟಿ ನೀಡಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.

ಆರಂಭದಲ್ಲಿ ಕೆರೂರ ಡಿಸಿಸಿ ಬ್ಯಾಂಕ್‌ಗೆ ಭೇಟಿ ನೀಡಿ ಸರ್ಕಾರದ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಬ್ಯಾಂಕ ಸೇವೆಗಳ ಲಭ್ಯತೆ, ಹಣಕಾಸು ವ್ಯವಹಾರಗಳ ನಿರ್ವಹಣೆ ಹಾಗೂ ಸಾರ್ವಜನಿಕರಿಗೆ ನೀಡಲಾಗುತ್ತಿರುವ ಸೇವೆಗಳ ಕುರಿತು ಮಾಹಿತಿ ಪಡೆದುಕೊಂಡರು.

ಕೆರೂರ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಹೊರರೋಗಿ ಹಾಗೂ ಒಳರೋಗಿ ವಿಭಾಗ, ಔಷಧಿಗಳ ಲಭ್ಯತೆ, ವೈದ್ಯರು ಮತ್ತು ಸಿಬ್ಬಂದಿಯ ಹಾಜರಾತಿ, ಆಸ್ಪತ್ರೆಯ ಸ್ವಚ್ಛತೆ ಹಾಗೂ ರೋಗಿಗಳಿಗೆ ಒದಗಿಸಲಾಗುತ್ತಿರುವ ಚಿಕಿತ್ಸಾ ಸೇವೆಗಳ ಬಗ್ಗೆ ಪರಿಶೀಲನೆ ನಡೆಸಿದರು.

ಹಳಗೇರಿ ಗ್ರಾಮದಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿ ಪರಿಶೀಲಿಸಿ, ಕಾಮಗಾರಿಗಳ ಗುಣಮಟ್ಟ, ಪೈಪ್‌ಲೈನ್ ಅಳವಡಿಕೆ, ಕುಡಿಯುವ ನೀರಿನ ಸಂಪರ್ಕ ಹಾಗೂ ಕಾಮಗಾರಿ ಪ್ರಗತಿ ಕುರಿತು ಮಾಹಿತಿ ಪಡೆದು–ಕೊಂಡರು.

ಪ್ರತಿಯೊಬ್ಬ ಗ್ರಾಮೀಣ ಕುಟುಂಬಕ್ಕೂ ಸುರಕ್ಷಿತ ಕುಡಿಯುವ ನೀರು ತಲುಪಿಸುವ ಉದ್ದೇಶದಿಂದ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ



ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ನಿರ್ದೇಶನ ನೀಡಿದರು.

ಅದೇ ಗ್ರಾಮದಲ್ಲಿರುವ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಮಕ್ಕಳಿಗೆ ನೀಡಲಾಗುತ್ತಿರುವ ಪೌಷ್ಟಿಕ ಆಹಾರ, ಪೂರ್ವ ಪ್ರಾಥಮಿಕ ಶಿಕ್ಷಣ, ಮಕ್ಕಳ ಹಾಜರಾತಿ, ಸ್ವಚ್ಛತೆ ಹಾಗೂ ಮೂಲಸೌಕರ್ಯಗಳನ್ನು ಪರಿಶೀಲಿಸಿದರು.

ಮಕ್ಕಳ ಪೌಷ್ಟಿಕತೆ ಮತ್ತು ಕಲಿಕೆಯ ಗುಣಮಟ್ಟವನ್ನು ಹೆಚ್ಚಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು. ನಂತರ ಕುಳಗೇರಿ ಎಂ.ಆರ್. ಎಫ್ ಕೇಂದ್ರಕ್ಕೆ ಭೇಟಿ ನೀಡಿ ಘನ ತ್ಯಾಜ್ಯ ವಿಂಗಡಣೆ, ಮರುಬಳಕೆ ಹಾಗೂ ವೈಜ್ಞಾನಿಕ ತ್ಯಾಜ್ಯ ನಿರ್ವಹಣೆಯ ಕುರಿತು ಪರಿಶೀಲಿಸಿದರು. ಗ್ರಾಮಗಳನ್ನು ಸ್ವಚ್ಛವಾಗಿಡಲು ತ್ಯಾಜ್ಯ ನಿರ್ವಹಣಾ ವ್ಯವಸ್ಥೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ತಿಳಿಸಿದರು.

ಕುಳಗೇರಿ ಕ್ರಾಸ್‌ನ ಜವಾಹರ ನವೋದಯ ವಿದ್ಯಾಲಯಕ್ಕೆ ಭೇಟಿ ನೀಡಿ ಶೈಕ್ಷಣಿಕ ಚಟುವಟಿಕೆಗಳು, ವಿದ್ಯಾರ್ಥಿಗಳಿಗೆ ಲಭ್ಯವಿರುವ ಸೌಲಭ್ಯಗಳು, ವಸತಿ ವ್ಯವಸ್ಥೆ ಹಾಗೂ ಶಾಲೆಯ ಒಟ್ಟಾರೆ ನಿರ್ವಹಣೆ ಕುರಿತು ಮಾಹಿತಿ ಪಡೆದರು. ಬಳಿಕ ಪವಿತ್ರ ವನಕ್ಕೆ ಭೇಟಿ ನೀಡಿ ಪರಿಸರ ಸಂರಕ್ಷಣೆ, ವೃಕ್ಷಾರೋಪಣ ಹಾಗೂ ಜೀವ ವೈವಿಧ್ಯ ಸಂರಕ್ಷಣೆಗೆ ಕೈಗೊಂಡಿರುವ ಕ್ರಮಗಳನ್ನು ವೀಕ್ಷಿಸಿದರು.

ಖಾನಾಪುರ ಎಸ್.ಕೆ. ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಗ್ರಾಮೀಣ ಪ್ರದೇಶದ ಆರೋಗ್ಯ ಸೇವೆಗಳ ಲಭ್ಯತೆ, ಔಷಧಿ ಸಂಗ್ರಹ, ಸಿಬ್ಬಂದಿಯ ಹಾಜರಾತಿ ಹಾಗೂ ಸಾರ್ವಜನಿಕರಿಗೆ ನೀಡಲಾಗುತ್ತಿರುವ ಸೇವೆಗಳ ಕುರಿತು ಪರಿಶೀಲನೆ ನಡೆಸಿದರು. ನಂತರ ಕುಳಗೇರಿ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ತರಗತಿ ಕೊಠಡಿಗಳು, ವಿದ್ಯಾರ್ಥಿಗಳ ಹಾಜರಾತಿ, ಕಲಿಕಾ ಗುಣಮಟ್ಟ, ಶಾಲೆಯ ಸ್ವಚ್ಛತೆ, ಕುಡಿಯುವ ನೀರು, ಶೌಚಾಲಯ ಹಾಗೂ ಮಧ್ಯಾಹ್ನದ ಬಿಸಿಯೂಟ ವ್ಯವಸ್ಥೆಯನ್ನು ಪರಿಶೀಲಿಸಿದರು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಸುರಕ್ಷಿತ ಹಾಗೂ ಸ್ವಚ್ಛ ವಾತಾವರಣ ಕಲ್ಪಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಕೊನೆಯದಾಗಿ ಮಲ್ಲಾಪೂರ ಎಸ್.ಎಲ್. ಕೆರೆಗೆ ಭೇಟಿ ನೀಡಿ ಕೆರೆಯ ಅಭಿವೃದ್ಧಿ, ನೀರಿನ ಸಂಗ್ರಹ ಸಾಮರ್ಥ್ಯ, ಸಂರಕ್ಷಣೆ ಹಾಗೂ ನಿರ್ವಹಣಾ ಕಾಮಗಾರಿಗಳನ್ನು ವೀಕ್ಷಿಸಿದರು. ಜಲಸಂಪನ್ಮೂಲಗಳ ಸಂರಕ್ಷಣೆ ಮತ್ತು ಮಳೆನೀರು ಸಂಗ್ರಹಣೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಪಂಚಾಯತ್ ಸಿಇಒ ಗಜಾನನ ಬಾಳೆ, ಐಎಎಸ್, ಸರ್ಕಾರದ ಪ್ರತಿಯೊಂದು ಯೋಜನೆಯೂ ಗ್ರಾಮೀಣ ಜನತೆಗೆ ಪರಿಣಾಮಕಾರಿಯಾಗಿ ತಲುಪಬೇಕು. ಕಾಮಗಾರಿಗಳಲ್ಲಿ ಗುಣಮಟ್ಟ, ಪಾರದರ್ಶಕತೆ ಹಾಗೂ ಸಮಯಪಾಲನೆ ಕಡ್ಡಾಯ. ಆರೋಗ್ಯ, ಶಿಕ್ಷಣ, ಕುಡಿಯುವ ನೀರು, ಸ್ವಚ್ಛತೆ ಹಾಗೂ ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ಸೇವೆಗಳಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ಸಹಿಸಲಾಗುವುದಿಲ್ಲ. ಅಧಿಕಾರಿಗಳು ನಿಯಮಿತವಾಗಿ ಕ್ಷೇತ್ರಕ್ಕೆ ಭೇಟಿ ನೀಡಿ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹರಿಸಿ ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸಬೇಕು ಎಂದು ನಿರ್ದೇಶನ ನೀಡಿದರು.

# ಜಿಲ್ಲಾ ಕೇಂದ್ರ ಪತ್ರಕರ್ತರಿಗಾಗಿ ವಿವಿಧ ಕ್ರೀಡಾ ಸ್ಪರ್ಧೆ ಆಯೋಜನೆ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ಶಿಕ್ಷಣ ತಜ್ಞ ಹಾಗೂ ಕೆ.ವಿ. ಮತ್ತು ಪಂಚಗಿರಿ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಅಧ್ಯಕ್ಷ ದಿವಂಗತ ಸಿ.ವಿ. ವೆಂಕಟರಾಯಪ್ಪ ಅವರ 111ನೇ ಜಯಂತಿ ಹಾಗೂ ಎರಡು ಶಿಕ್ಷಣ ಸಂಸ್ಥೆಗಳ ದತ್ತಿ ದಿನಾಚರಣೆ ಅಂಗವಾಗಿ, ಪ್ರತಿ ವರ್ಷದಂತೆ ಈ ವರ್ಷವೂ ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಪತ್ರಕರ್ತರಿಗಾಗಿ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಯಿತು. ನಗರದ ಹೊರವಲಯದಲ್ಲಿರುವ ಸಿ.ವಿ.ವಿ. ಶಿಕ್ಷಣ ಕೇಂದ್ರದ ಕ್ಯಾಂಪಸ್ ಮೈದಾನದಲ್ಲಿ ನಡೆದ ಕ್ರೀಡಾಕೂಟಕ್ಕೆ ಕೆ.ವಿ. ಮತ್ತು ಪಂಚಗಿರಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಕೆ.ವಿ. ನವೀನ್ ಕಿರಣ್ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪತ್ರಕರ್ತರ ವೃತ್ತಿ ಅತ್ಯಂತ ಜವಾಬ್ದಾರಿಯುತ ಹಾಗೂ ಒತ್ತಡಭರಿತವಾಗಿದ್ದು, ಸಮಾಜದ ಸಮಸ್ಯೆಗಳನ್ನು ಬೆಳಕಿಗೆ ತಂದು ಪರಿಹಾರ ಕಂಡುಕೊಳ್ಳುವಲ್ಲಿ



ಮಾಧ್ಯಮಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಪತ್ರಕರ್ತರು ನಿರಂತರವಾಗಿ ಸಾರ್ವಜನಿಕರ ಪರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ದಿನನಿತ್ಯದ ಕೆಲಸದ ಒತ್ತಡದ ನಡುವೆಯೂ ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ಅಗತ್ಯ. ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಕ್ರೀಡೆ ಅತ್ಯುತ್ತಮ ಮಾರ್ಗವಾಗಿದೆ. ಶಿಕ್ಷಣ ತಜ್ಞ ಸಿ.ವಿ. ವೆಂಕಟರಾಯಪ್ಪ ಅವರ ಜಯಂತಿ ಅಂಗವಾಗಿ ಪ್ರತಿವರ್ಷ ಪತ್ರಕರ್ತರಿಗಾಗಿ ಕ್ರೀಡಾಕೂಟವನ್ನು ಆಯೋಜಿಸುವ ಮೂಲಕ ಅವರು ಹಾಕಿಕೊಟ್ಟ ಮೌಲ್ಯಗಳನ್ನು ಸ್ಮರಿಸುತ್ತಿದ್ದೇವೆ ಎಂದರು.


ಕ್ರೀಡಾಕೂಟದಲ್ಲಿ ತ್ರೋಬಾಲ್, ಶಾಟ್‌ಪುಟ್, ಲಾಂಗ್ ಜಂಪ್, ಓಟ, ಬಾಸ್ಕೆಟ್ ಬಾಲ್, ಕ್ರಿಕೆಟ್ ಸೇರಿದಂತೆ ವಿವಿಧ ಕ್ರೀಡಾ ಸ್ಪರ್ಧೆಗಳು ನಡೆದಿದ್ದು, ಪತ್ರಕರ್ತರು ಉತ್ಸಾಹದಿಂದ ಭಾಗವಹಿಸಿದರು. ವಿವಿಧ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ಪತ್ರಕರ್ತರಿಗೆ ಇದೇ ತಿಂಗಳ 30ರಂದು ನಡೆಯಲಿರುವ ಸಿ.ವಿ. ವೆಂಕಟರಾಯಪ್ಪ ದತ್ತಿ ದಿನಾಚರಣೆ ಸಮಾರಂಭದಲ್ಲಿ ಬಹುಮಾನಗಳನ್ನು ಪ್ರದಾನ ಮಾಡಲಾಗುವುದು ಎಂದು ಸಂಸ್ಥೆ ತಿಳಿಸಿತು.

# ವಿದ್ಯಾರ್ಥಿ ಶಕ್ತಿ ರಾಷ್ಟ್ರಶಕ್ತಿಯಾಗಲಿ: ಗೋವಿಂದ ನಾಯಕ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಪ್ರತಿ ಪ್ರಜೆಯ ವ್ಯಕ್ತಿತ್ವ ನಿರ್ಮಾಣದ ಮೂಲಕ ದೇಶದ ಪುನರುತ್ಥಾನವೇ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಧ್ಯೇಯವಾಗಿದ್ದು, 2047 ರ ವೇಳೆಗೆ ಭಾರತವನ್ನು ವಿಶ್ವದ ಶ್ರೇಷ್ಠ ರಾಷ್ಟ್ರವನ್ನಾಗಿ ರೂಪಿಸುವ ಗುರಿಯೊಂದಿಗೆ ಎಬಿವಿಪಿ ಕಾರ್ಯನಿರ್ವಹಿಸುತ್ತಿದೆ ಎಂದು ಎಬಿವಿಪಿ ರಾಷ್ಟ್ರೀಯ ಸಹ ಸಂಘಟನಾ ಕಾರ್ಯದರ್ಶಿ ಗೋವಿಂದ ನಾಯಕ್ ಹೇಳಿದರು.

ನಗರದ ಬಿ.ವಿ.ವಿ. ಸಂಘದ ಎಸ್. ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಶತಾಬ್ದಿ ಭವನದಲ್ಲಿ ಸೋಮವಾರ ಎಬಿವಿಪಿ ಹಾಗೂ ಎಸ್. ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಸಹಯೋಗದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ವಿದ್ಯಾರ್ಥಿ ಸಪ್ತಾಹದ ಅಂಗವಾಗಿ ನಡೆದ ವಿದ್ಯಾರ್ಥಿ ಶಕ್ತಿ ಸಮಾವೇಶವನ್ನು ಭಾರತಮಾತೆ ಹಾಗೂ ಸರಸ್ವತಿ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ, ಜ್ಯೋತಿ ಬೆಳಗಿಸುವ ಮೂಲಕ



ಉದ್ಘಾಟಿಸಿ ಅವರು ಮಾತನಾಡಿದರು.

ಎಬಿವಿಪಿ ದೇಶಾದ್ಯಂತ ಸುಮಾರು 85 ಸಾವಿರ ಶಾಖೆಗಳನ್ನು ಹೊಂದಿದ್ದು, 78 ಲಕ್ಷಕ್ಕೂ ಅಧಿಕ ವಿದ್ಯಾರ್ಥಿ ಸದಸ್ಯರನ್ನು ಒಳಗೊಂಡ ವಿಶ್ವದ ಅತಿದೊಡ್ಡ ವಿದ್ಯಾರ್ಥಿ ಸಂಘಟನೆಯಾಗಿದೆ. ಇದು ಕೇವಲ ವಿದ್ಯಾರ್ಥಿ ಸಂಘಟನೆಯಲ್ಲ. ವ್ಯಕ್ತಿತ್ವ ನಿರ್ಮಾಣ, ಸೇವಾ ಮನೋಭಾವ, ನಾಯಕತ್ವ ಮತ್ತು ರಾಷ್ಟ್ರ ನಿರ್ಮಾಣದ ಚಿಂತನೆಯೊಂದಿಗೆ ಯುವಜನರನ್ನು ರೂಪಿಸುತ್ತಿದೆ ಎಂದು ಹೇಳಿದರು.

ಎಪಿಜೆ ಅಬ್ದುಲ್ ಕಲಾಂ ಅವರ ಕನಸಿನಂತೆ ಇಂದಿನ ಯುವಜನರೇ ಭಾರತದ ಭವಿಷ್ಯವಾಗಿದ್ದು, ರಾಷ್ಟ್ರ ಮೊದಲು ಎಂಬ ಮನೋಭಾವದಿಂದ ವಿದ್ಯಾರ್ಥಿಗಳು ದೇಶಸೇವೆಗೆ ಸಜ್ಜಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬಿ.ವಿ.ವಿ. ಸಂಘದ ಹಾಸ್ಟೆಲ್ ಸಮಿತಿ ಕಾರ್ಯಾಧ್ಯಕ್ಷ ಕುಮಾರಸ್ವಾಮಿ ಹಿರೇಮಠ ಚಿತ್ತರಗಿ ಮಾತನಾಡಿ, ಕೊರೊನಾ ಸಂದರ್ಭದಲ್ಲಿ ವೈದ್ಯಕೀಯ ಕಾಲೇಜಿನ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಸಾರ್ವಜನಿಕರ ಆರೋಗ್ಯ ರಕ್ಷಣೆಯಲ್ಲಿ ಮಹತ್ವದ ಸೇವೆ ಸಲ್ಲಿಸಿದ್ದು, ವಿದ್ಯಾರ್ಥಿಗಳ ಶಕ್ತಿ ರಾಷ್ಟ್ರದ ಅಭಿವೃದ್ಧಿಗೆ ಸಮರ್ಪಿತವಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎಬಿವಿಪಿ ಕೇಂದ್ರ ಕಾರ್ಯಸಮಿತಿ ಸದಸ್ಯ ಸಚಿನ ಕುಳಗೇರಿ, ಪ್ರಾಂತ ಸಂಘಟನಾ ಕಾರ್ಯದರ್ಶಿ ವೆಂಕಟೇಶ ಡಾಂಗೆ, ವಿಭಾಗ ಸಂಘಟನಾ ಕಾರ್ಯದರ್ಶಿ ಹರ್ಷಾ ನಾಯಕ, ವಿಭಾಗ ಸಂಚಾಲಕ ಪ್ರಥಮೇಶ ವಾಗ್ಮೋಡೆ, ನಗರಾಧ್ಯಕ್ಷ ಬಸವರಾಜ ಕುಂಭಾರ, ವಿದ್ಯಾರ್ಥಿನಿ ಶ್ರೀಲಕ್ಷ್ಮೀ, ಮಂಜುನಾಥ ಶಿರೂರ, ಜಿಲ್ಲಾ ಸಂಚಾಲಕ ವಿಪುಲ ಪೇಟ್ಕರ್, ಪಾಟೀಲ ಸೇರಿದಂತೆ ವಿವಿಧ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವಿಂಡ್ ಫ್ಯಾನ್ ಹಾಗೂ ಸೌರ ನಿರ್ಮಾಣದ ಹೆಸರಲ್ಲಿ ಸದ್ದಿಲ್ಲದೆ ನಡೆಯುತ್ತಿದೆ ಮರಗಳ ಮಾರಣ ಹೋಮ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆಯ ಯಲಬುರ್ಗಾ ತಾಲೂಕಿನ ಗೆದಗೇರಿ. ಗ್ರಾಮದ ಖಾಸಗಿ ಕಂಪನಿಯ ವಿದ್ಯುತ್ ಸ್ಟೋರೇಜ್ ಗೇ ಹೈಟೆನ್ಷನ್ ವಿದ್ಯುತ್ ಕಂಬ ಆಡಿಸುವ ಕೆಲಸ ಬರದಿಂದ ಸಾಗಿದ್ದು ಕೆಲಸ ಪ್ರಾರಂಭಿಸುವ ಮುನ್ನ ಅರಣ್ಯ ಇಲಾಖೆಯ ಪೂರ್ವಾನುಮತಿ ಪಡೆಯದೇ ರೈತರ ಜಮೀನಿನ ನೂರಾರು ಬೃಹತ್ ಆಕಾರದ ಮರಗಳನ್ನು ಜೆಸಿಬಿ ಮೂಲಕ ಕಡಿದು ನಾಶಪಡಿಸಿರುವ ಗಂಭೀರ ಘಟನೆ ಬೆಳಕಿಗೆ ಬಂದಿದೆ. ಹೈಟೆನ್ಷನ್ ವಿದ್ಯುತ್ ಕಂಬ ನಿರ್ಮಾಣದ ಹೆಸರಿನಲ್ಲಿ ನಡೆದ ಈ ಅಕ್ರಮ ಮರಕಟಾವು ಪರಿಸರ ಪ್ರೇಮಿಗಳು ರೈತ ಸಂಘಟನೆಗಳು ಹಾಗೂ ಗ್ರಾಮಸ್ಥರಲ್ಲಿ ಭಾರೀ ಆಕ್ರೋಶಕ್ಕೆ ಕಾರಣವಾಗಿದೆ.

ರಾಜ್ಯ ಸರ್ಕಾರವು ಯಲಬುರ್ಗಾ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ವರ್ಧಮ ಸೂರ್ಯ ಲಿಮಿಟೆಡ್ ಖಾಸಗಿ ಕಂಪನಿಯು 302.4 ಮ. ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಸ್ಥಾಪನೆಗಾಗಿ ಅನುಮೋದನೆ ನೀಡಿದೆ .ಅನುಷ್ಠಾನದ ವೇಳೆ ಅರಣ್ಯ ಇಲಾಖೆಯಿಂದ ಅಗತ್ಯ ಅನುಮತಿ ಪಡೆಯುವುದು ಕಡ್ಡಾಯ ಎಂದು ಆದೇಶ ಮಾಡಲಾಗಿದೆ ಸರ್ಕಾರದ ನಿಯಮ ಉಲ್ಲಂಘನೆ ಮಾಡಿ ರೈತರ ಜಮಿನಿನಲ್ಲಿ ನೂರಾರು ಮರಗಳನ್ನು ನೆಲಸಮಗೊಳಿಸಲಾಗಿದೆ



ಅರಣ್ಯ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು ಖಾಸಗಿ ಕಂಪನಿಯ ಮೇಲೆ ಯಾವುದೇ ಕ್ರಮ ಕೈಗೊಳ್ಳದೆ ಸಂಪೂರ್ಣ ನಿರ್ಲಕ್ಷ್ಯ ವಹಿಸಿದೆ ಎಂದು ಪರಿಸರ ಪ್ರೇಮಿಗಳು ಆರೋಪಿಸಿದ್ದಾರೆ.

ಒಬ್ಬ ರೈತ ತನ್ನ ಜಮೀನಿನಲ್ಲಿ ಒಂದು ಮರ ಕಡಿದರೂ ಅರಣ್ಯ ಇಲಾಖೆ ಪ್ರಕರಣ ದಾಖಲಿಸುತ್ತದೆ ಆದರೆ ಯಲಬುರ್ಗಾ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕೈಗೊಂಡ ವಿಂಡ್ ಫ್ಯಾನ್ ಹಾಗೂ ಸೋಲಾರ್ ನಿರ್ಮಾಣಕ್ಕೆ ಸಾವಿರಾರು ಮರಗಳು ನಾಶವಾಗುತ್ತಿದ್ದರೂ ಕ್ರಮ ಕೈಗೊಳ್ಳದಿರುವುದು ಯಾವ ನ್ಯಾಯ ಎಂದು ಗ್ರಾಮಸ್ಥರು ಪ್ರಶ್ನಿಸಿದ್ದಾರೆ. ಈಗಾಗಲೇ ಸಾವಿರಕ್ಕೂ ಹೆಚ್ಚು ಮರಗಳನ್ನು ಸಂಪೂರ್ಣ ನಾಶವಾಗಿದ್ದು, ಮುಂದಿನ ದಿನಗಳಲ್ಲಿ ಎಲ್ಲಾ ಮರಗಳು ನಾಶ ಆಗುವ ಸಾಧ್ಯತೆ ಇದೆ ಎಂಬ ಆತಂಕ ಪರಿಸರ

> **ಯಲಬುರ್ಗಾ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಖಾಸಗಿ ಕಂಪನಿಯು 302.4 ಮ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಸ್ಥಾಪನೆಗಾಗಿ ಅನುಮತಿ ನೀಡಿರೋದು ನಮ್ಮ ಗಮನಕ್ಕೆ ಬಂದಿಲ್ಲ ಈ ಕಂಪನಿ ಹೆಸರು ನಾನು ಕೇಳಿಲ್ಲ ನಮ್ಮ ಅರಣ್ಯ ಇಲಾಖೆಯಿಂದ ವಿಂಡ್ ಫ್ಯಾನ್ ನಿರ್ಮಾಣಕ್ಕೆ ಹಾಗೂ ಹೈಟೆನ್ಷನ್ ವಿದ್ಯುತ್ ಕಂಬ ಅಳವಡಿಸುವ ಸಂದರ್ಭದಲ್ಲಿ ರೈತರ ಹೊಲದಲ್ಲಿ ಮರಗಳನ್ನು ಕಡಿದರೆ ನಾವು ಕ್ರಮ ಕೈಗೊಳ್ಳಲು ಬರುವುದಿಲ್ಲ ರಸ್ತೆಯ ಪಕ್ಕದಲ್ಲಿ ಮರ ಕಡಿದರೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಮುಂದಾಗುತ್ತೇವೆ.**
>
> **–ಅಬ್ದುಲ್ ಮುಲ್ಲಾ, ಉಪ ಅರಣ್ಯ ಸಂರಕ್ಷಣಾಧಿಕಾರಿ ಎಸಿಫ್ ಕೊಪ್ಪಳ**

ಪ್ರೇಮಿಗಳಲ್ಲಿ ಕಾಡುತ್ತಿದೆ.

ಯಲಬುರ್ಗಾ ತಾಲೂಕಿನ ವಿವಿಧ ಗ್ರಾಮದಗಳಲ್ಲಿ ಖಾಸಗಿ ಕಂಪನಿಯ ವಿಂಡ್ ಫ್ಯಾನ್ ನಿರ್ಮಾಣಕ್ಕೆ ಹಾಗೂ ಸೋಲಾರ್ ನಿರ್ಮಾಣದ ಹೆಸರಿನಲ್ಲಿ ಮರಗಳನ್ನು ಕತ್ತರಿಸುವುದನ್ನು ನಿಲ್ಲಿಸಬೇಕು ಅನುಮತಿ ಇಲ್ಲದೆ ಮರಗಳನ್ನು ನಾಶ ಮಾಡಿದ ಖಾಸಗಿ ಕಂಪನಿಯ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಇಲ್ಲದಿದ್ದರೆ ಉಗ್ರ ಹೋರಾಟ ಅನಿವಾರ್ಯ ಎಂದು ಗ್ರಾಮಸ್ಥರು ಹಾಗೂ ರೈತ ಸಂಘಟನೆಗಳು ಎಚ್ಚರಿಕೆ ನೀಡಿದ್ದಾರೆ.

# ಗಣ್ಯರ ಸಹಕಾರದಿಂದ ನನಗೆ ಪದವಿ: ಬಿಜೆಪಿ ನೂತನ ಅಧ್ಯಕ್ಷ ರಾಮಕೃಷ್ಣಯ್ಯ



**ಪೀಣ್ಯ, ದಾಸರಹಳ್ಳಿ:** ಕ್ಷೇತ್ರದ ಶಾಸಕ ಎಸ್ ಮುನಿರಾಜು ಅವರ ಆಶೀರ್ವಾದದಿಂದ ಮಾಜಿ ಪಾಲಿಕೆ ಸದಸ್ಯ ತಿಮ್ಮ ನಂಜಯ್ಯ, ಕ್ಷೇತ್ರದ ಅಧ್ಯಕ್ಷ ಸೋಮಶೇಖರ್ ಮತ್ತು ಮಂಡ್ಯ ರವಿ ಇವರುಗಳ ಸಹಕಾರದಿಂದ ಭಾರತೀಯ ಜನತಾ ಪಾರ್ಟಿಯ ರಾಜೇಶ್ವರಿ ನಗರ ವಾರ್ಡಿನ ಅಧ್ಯಕ್ಷರಾಗಿ ನೇಮಕ ಮಾಡಿದ್ದು ನನಗೆ ತುಂಬಾ ಖುಷಿ ಮತ್ತು ಸಂತೋಷ ತಂದಿದೆ ಶಾಸಕರಿಗೆ ಬಿಜೆಪಿ ಪಕ್ಷದ ಹಿರಿಯರಿಗೆ ಮುಖಂಡರಿಗೆ ಮಹಿಳೆಯರಿಗೆ ಕಾರ್ಯಕರ್ತರಿಗೆ ವಾರ್ಡಿನ ಬಿಜೆಪಿ ನೂತನ ಅಧ್ಯಕ್ಷ ರಾಮಕೃಷ್ಣಯ್ಯ ಸಿ. ಹೃತ್ಪೂರ್ವಕ ಅಭಿನಂದನೆಗಳು ತಿಳಿಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ವಾರ್ಡಿನ ನೂತನ ಪ್ರಧಾನ ಕಾರ್ಯದರ್ಶಿ ಮಂಡ್ಯ ರವಿ, ಸುಶೀಲ್ ಕುಮಾರ್, ಹನುಮಂತಯ್ಯ, ನವೀನ್ ಕುಮಾರ್, ಶಿವಣ್ಣ, ಅಂಗಡಿ ಮಂಜುನಾಥ್, ಸುರೇಶ್ ಹಾಗೂ ಭೈರವೇಶ್ವರನಗರ, ರಾಜೇಶ್ವರಿ ನಗರ ವಾರ್ಡಿನ ಬಿಜೆಪಿ ಮುಖಂಡರು ಮಹಿಳೆಯರು ಕಾರ್ಯಕರ್ತರು ಮುಂತಾದವರು ಉಪಸ್ಥಿತರಿದ್ದರು.

## ಶಾಶ್ವತ ವಿದ್ಯುತ್ ಸಂಪರ್ಕಕ್ಕೆ ಒಸಿ ಸಲ್ಲಿಕೆಗೆ
# ಆ. 15ರವರೆಗೆ ವಿನಾಯಿತಿ

**ಕಲಬುರಗಿ:** ರಾಜ್ಯ ಸರ್ಕಾರವು 2026ರ ಮೇ 31ರಂದು ಅಥವಾ ಅದಕ್ಕೂ ಮುಂಚಿತವಾಗಿ ನಿರ್ಮಾಣ ಪೂರ್ಣಗೊಂಡಿರುವ ವಸತಿ ಕಟ್ಟಡಗಳಿಗೆ ಶಾಶ್ವತ ವಿದ್ಯುತ್ ಸಂಪರ್ಕ ಕಲ್ಪಿಸುವ ಉದ್ದೇಶದಿಂದ, ಸ್ವಾಧೀನಾನುಭವ ಪ್ರಮಾಣಪತ್ರ (Occupancy Certificate - OC) ಸಲ್ಲಿಕೆಯಿಂದ ಆಗಸ್ಟ್ 15ರವರೆಗೆ ವಿನಾಯಿತಿ ನೀಡಿ ಆದೇಶ ಹೊರಡಿಸಿದೆ. ಈ ಅವಕಾಶದ ಸದುಪಯೋಗವನ್ನು ಗ್ರಾಹಕರು ಪಡೆದುಕೊಳ್ಳುವಂತೆ ಜೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

ಜೆಸ್ಕಾಂ ವ್ಯಾಪ್ತಿಯ ಕಲಬುರಗಿ, ಬಳ್ಳಾರಿ, ರಾಯಚೂರು, ಯಾದಗಿರಿ, ಬೀದರ, ಕೊಪ್ಪಳ ಹಾಗೂ ವಿಜಯನಗರ ಜಿಲ್ಲೆಗಳ ಮಹಾನಗರ ಪಾಲಿಕೆ, ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 2,400 ಚದರ ಅಡಿಗಳವರೆಗೆ (ಶೇ. 20ರ ಹೆಚ್ಚುವರಿ ವ್ಯತ್ಯಾಸದ ಮಿತಿಯೊಂದಿಗೆ) ಅಳತೆಯ ನಿವೇಶನಗಳಲ್ಲಿ ನಿರ್ಮಿಸಲಾಗಿರುವ ಜಿ+3 ಅಂತಸ್ತಿನ ವಸತಿ ಕಟ್ಟಡಗಳು ಅಥವಾ ಸ್ಟಿಲ್ಟ್ ಪಾರ್ಕಿಂಗ್ +4 ಮಹಡಿಗಳನ್ನು ಹೊಂದಿರುವ ವಸತಿ ಕಟ್ಟಡಗಳಿಗೆ, 2026ರ ಮೇ 31ರೊಳಗೆ ನಿರ್ಮಾಣ ಪೂರ್ಣಗೊಂಡಿದ್ದಲ್ಲಿ ಸ್ವಾಧೀನಾನುಭವ ಪ್ರಮಾಣಪತ್ರ (ಒಸಿ) ಸಲ್ಲಿಕೆಯಿಂದ ಒಂದು ಬಾರಿಯ ವಿನಾಯಿತಿ ನೀಡಲಾಗಿದೆ. ಈ ಆದೇಶವು 2026ರ ಮೇ 31ರೊಳಗೆ ನಿರ್ಮಾಣ ಪೂರ್ಣಗೊಂಡಿರುವ ಕೆಳಕಂಡ ಪ್ರಕರಣಗಳಿಗೆ ಮಾತ್ರ ಅನ್ವಯಿಸುತ್ತದೆ:

- ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ ಈಗಾಗಲೇ ಅರ್ಜಿ ಸಲ್ಲಿಸಿರುವ ವಸತಿ ಕಟ್ಟಡಗಳು.
- ತಾತ್ಕಾಲಿಕ ವಿದ್ಯುತ್ ಸಂಪರ್ಕ ಹೊಂದಿದ್ದು, ಇನ್ನೂ ಶಾಶ್ವತ ಸಂಪರ್ಕಕ್ಕಾಗಿ ಅರ್ಜಿ ಸಲ್ಲಿಸದಿರುವ ವಸತಿ ಕಟ್ಟಡಗಳು.
- ಯಾವುದೇ ರೀತಿಯ (ತಾತ್ಕಾಲಿಕ ಅಥವಾ ಶಾಶ್ವತ) ವಿದ್ಯುತ್ ಸಂಪರ್ಕಕ್ಕಾಗಿ ಇನ್ನೂ ಅರ್ಜಿ ಸಲ್ಲಿಸದಿರುವ ವಸತಿ ಕಟ್ಟಡಗಳು.

ಇದಲ್ಲದೆ, ಗ್ರಾಮೀಣ ಪ್ರದೇಶಗಳಲ್ಲಿರುವ ರೈತರು ವಾಸಿಸುವ ಮನೆಗಳು, ತೋಟದ ಮನೆಗಳು, ಕೃಷಿ ಉಪಕರಣಗಳನ್ನು ಸಂಗ್ರಹಿಸುವ ಕೊಠಡಿಗಳು, ದನದ ಕೊಟ್ಟಿಗೆಗಳು, ರೇಷ್ಮೆ ಗೂಡಿನ ಮನೆಗಳು, ಕೋಳಿ ಸಾಕಾಣಿಕೆ ಕೇಂದ್ರಗಳು ಹಾಗೂ ಕೃಷಿ ಸಂಬಂಧಿತ ಚಟುವಟಿಕೆಗಳಿಗೂ ಸಹ ವಿದ್ಯುತ್ ಸಂಪರ್ಕ ಪಡೆಯಲು ಸ್ವಾಧೀನಾನುಭವ ಪ್ರಮಾಣಪತ್ರ (ಒಸಿ) ಸಲ್ಲಿಸುವುದರಿಂದಲೂ ವಿನಾಯಿತಿ ನೀಡಲಾಗಿದೆ.

ಹೆಚ್ಚಿನ ಮಾಹಿತಿ ಹಾಗೂ ಸ್ಪಷ್ಟೀಕರಣಕ್ಕಾಗಿ ಗ್ರಾಹಕರು ತಮ್ಮ ವ್ಯಾಪ್ತಿಯ ಜೆಸ್ಕಾಂ ಉಪವಿಭಾಗ ಕಚೇರಿಯನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಪ್ರೊ. ದೇವೇಂದ್ರಪ್ಪ ಜಾಜಿ ಕನಕ ಶರೀಫ ಪ್ರಶಸ್ತಿಗೆ ಭಾಜನ

**ಗಂಗಾವತಿ:** ಹಿರಿಯ ಸಾಹಿತಿ,ಸಂಶೋಧಕ,ಅನುವಾದಕ ಹಾಗೂ ಸಿಂಧನೂರು ಸರ್ಕಾರಿ ಪದವಿ ಮಹಾವಿದ್ಯಾಲಯದಲ್ಲಿ ಕನ್ನಡ ವಿಭಾಗದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುತ್ತಿರುವ ದೇವೇಂದ್ರಪ್ಪ ಜಾಜಿ ಅವರು



ಕನಕ ಶರೀಫ ಕಾವ್ಯ ಪುರಸ್ಕಾರ– 2023 ಪ್ರಶಸ್ತಿಗೆ ಭಾಜನರಾಗಿದ್ದಾರೆ. ಈ ಕುರಿತು ಉತ್ತರ ಸಾಹಿತ್ಯ ವೇದಿಕೆ ಶಿಗ್ಗಾವಿಯ ಕಾರ್ಯದರ್ಶಿ ಹೆಬಸೂರ್ ರಂಜಾನ್ ಬುಧವಾರ ಪತ್ರಿಕಾ ಹೇಳಿಕೆ ನೀಡಿ ಕಲಾ




ಗುರು ಡಾ.ಟಿ.ಬಿ. ಸೋಲಬಕ್ಕನವರ 79 ನೇ ಜನ್ಮದಿನದ ಸ್ಮರಣಾರ್ಥ ಉತ್ತರ ರಾಕ್ ಗಾರ್ಡನ್ ಗೋಟಗೋಡಿ ಹಾಗೂ ಉತ್ತರ ಸಾಹಿತ್ಯ ವೇದಿಕೆ ಹೆಬಸೂರ ಇವರ ಸಹಯೋಗದಲ್ಲಿ ರಾಜ್ಯಮಟ್ಟದ ಕಾವ್ಯ ಮತ್ತು ಗಜಲ್ ಗೋಷ್ಠಿ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭ 'ಉತ್ತರ ಸಂಭ್ರಮ'ವನ್ನು ಶಿಗ್ಗಾವಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಎಲ್ ಎನ್ ಮುಕುಂದರಾಜ್ ,ಹಿರಿಯ ಚಿಂತಕ ಬಿ.ಪೀರ್ ಭಾಷ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ದೇವೇಂದ್ರಪ್ಪ ಜಾಜಿ ಅವರು ಈಗಾಗಲೇ ಸ್ವತಂತ್ರ ಕೃತಿಗಳು,ಅನುವಾದಗಲಕು ಮತ್ತು ಸಂಪಾದನೆ ಸೇರಿದಂತೆ 25 ಪುಸ್ತಕಗಳನ್ನು ಪ್ರಕಟಿಸಿದ್ದಾರೆ. ಸಾವಿರಾರು ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರಾಗಿದ್ದಾರೆ. ಅವರ ಸಾಹಿತ್ಯ ಸೇವೆಯನ್ನು ಗುರುತಿಸಿ ಜಿಲ್ಲಾ ಹಾಗೂ ರಾಜ್ಯ ಮಟ್ಟದ ಕನ್ನಡ ಪರ ಸಂಸ್ಥೆಗಳು, ಅಕಾಡೆಮಿಗಳು, ಸಂಘಟನೆಗಳು ಪ್ರಶಸ್ತಿ ನೀಡಿ ಗೌರವಿಸಿವೆ. ಪ್ರಸ್ತುತ "ಕುವೆಂಪು ಭಾಷಾ ಭಾರತಿ"ಪ್ರಾಧಿಕಾರದ ಸದಸ್ಯರಾಗಿಯೂ ಸೇವೆ ಸಲ್ಲಿಸುತ್ತಿದ್ದಾರೆ. ಜಾಜಿ ಅವರೊಂದಿಗೆ 2022ರ ಸಾಲಿನ ಪ್ರಶಸ್ತಿಗೆ ಚೆನ್ನಪ್ಪ ಅಂಗಡಿ, 2024ರ ಸಾಲಿನ ಪ್ರಶಸ್ತಿಗೆ ಎ. ಎಸ್ .ಮಕಾನದಾರ ಹಾಗೂ 2025ರ ಸಾಲಿನ ಪ್ರಶಸ್ತಿಗೆ ಮಂಜುಳಾ ಕಿರುಗಾವಲು ಆಯ್ಕೆಯಾಗಿದ್ದಾರೆ ಎಂದು ತಿಳಿಸಿದ್ದಾರೆ.


# ಐಆರ್‌ಬಿ ರಸ್ತೆಯ ಎಡವಟ್ಟು: ಹೆಚ್ಚುತ್ತಿರುವ ಅಪಘಾತ..!

- **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**

ಕರಾವಳಿ ಭಾಗದ ಯಾವ ತಾಲೂಕುಗಳಲ್ಲಿಯೂ ಐಆರ್‌ಬಿಯವರು ಪೂರ್ಣ ಪ್ರಮಾಣದ ರಸ್ತೆ ನಿರ್ಮಿಸಿಲ್ಲ. ಅಲ್ಲಲ್ಲಿ ಸಾಕಷ್ಟು ಅಡೆತಡೆಗಳು ಇರುವುದರಿಂದ ವಾಹನಗಳ ಸಂಚಾರಕ್ಕೆ ತೊಡಕುಂಟಾಗಿದೆ. ಹೀಗಾಗಿ ವೇಗವಾಗಿ ಬರುವ ಕಾರ್, ಬೈಕ್ ಸೇರಿದಂತೆ ಇತರೆ ವಾಹನಗಳು ಕೂಡ ವಾರಕ್ಕೆ ಒಂದೆರಡು ಅಪಘಾತಗಳು ಕಟ್ಟಿಟ್ಟ ಬುತ್ತಿಯಂತಾಗಿದೆ.

ತಾಲೂಕಿನಲ್ಲಿಯೇ ಸಾಕಷ್ಟು ಅಪಘಾತಗಳು ನಡೆದಿದ್ದು, ಕಾಮಗಾರಿ ಆರಂಭಗೊಂಡಾಗಿನಿಂದ ಇಲ್ಲಿಯವರೆಗೆ ಹಲವರು ಪ್ರಾಣ ಕಳೆದುಕೊಂಡಿದ್ದಾರೆ. ಅಂಕೋಲಾದ ಅಜ್ಜಿಕಟ್ಟಾ, ಬೆಳಸೆ ಇದು ತೀರಾ ಅಪಘಾತ ವಲಯವಾಗಿದ್ದು, ಇಲ್ಲಿ ಇನ್ನೊಂದು ಬದಿಯ ರಸ್ತೆ ನಿರ್ಮಾಣ ಮಾಡದಿದ್ದರಿಂದಾಗಿ ವೇಗವಾಗಿ ಬರುವ ವಾಹನಗಳು ಅಚಾನಕ್ ಆಗಿ ಎದುರಾಗುವ ಕಿರಿಯ ರಸ್ತೆಯಿಂದಾಗಿ ತಮ್ಮ ಜೀವ ಉಳಿಸಿಕೊಳ್ಳಲು ರಸ್ತೆಯ ಅಂಚಿಗೆ ತೆಗೆದುಕೊಳ್ಳುವುದರಿಂದ ಪ್ರಾಣ ಉಳಿಸಿಕೊಳ್ಳಲು ಚಾಲಕರು ಈ ರೀತಿ ಪ್ರಯತ್ನ ಮಾಡುತ್ತಿದ್ದಾರೆ. ಇಲ್ಲದಿದ್ದರೆ ದ್ವಿಮುಖ ಸಂಚಾರ ಇರುವುದರಿಂದ ತಮ್ಮ ಪ್ರಾಣ ಉಳಿದರೆ ಸಾಕು ಎನ್ನುವಂತಾಗಿದೆ.

ಈಗಾಗಲೇ ಹಲವಾರು ಕಾರ್‌ಗಳು ಅಪಘಾತಕ್ಕೆ ಒಳಗಾಗಿ ಸಾವು ನೋವಿಗೆ ಕಾರಣವಾಗಿದೆ.






> ಬಳಲೆ–ಮಾದನಗೇರಿಯಲ್ಲಿ ಮೇಲ್ಸೆತುವೆ ನಿರ್ಮಿಸುವುದಕ್ಕಾಗಿ ಅನೇಕ ಬಾರಿ ಪ್ರತಿಭಟನೆಯನ್ನು ಮಾಡಲಾಗಿದೆ. ಆ ಸಂದರ್ಭದಲ್ಲಿ ಅಧಿಕಾರಿಗಳು ಮತ್ತು ಕೆಲವು ಮುಖಂಡರು ತಾವು ನಿರ್ಮಿಸಿಕೊಡುವ ಭರವಸೆ ತೆಗೆದುಕೊಂಡಿದ್ದರು. ಆದರೆ ಇಲ್ಲಿಯವರೆಗೂ ಮೇಲ್ಸೆತುವೆ ನಿರ್ಮಾಣಗೊಂಡಿಲ್ಲ. ಒಂದೆಡೆ ಅಂಕೋಲಾದಿಂದ ಕುಮಟಾಕ್ಕೆ ತೆರಳುವ ರಸ್ತೆ, ಹಾಗೇ ಗೋಕರ್ಣದಿಂದ ಯಲ್ಲಾಪುರ, ಶಿರಸಿ ಕಡೆಗೆ ತೆರಳುವ ರಸ್ತೆಯು ಕೂಡ ನೇರವಾಗಿ ಇರುವುದರಿಂದ ನಾಲ್ಕು ಕೂಡುರಸ್ತೆಗಳಾಗಿವೆ. ಹೀಗಾಗಿ ಇಲ್ಲಿ ದೊಡ್ಡ ಅನಾಹುತ ನಡೆಯುವ ಮುನ್ನವೇ ಕ್ರಮ ಕೈಗೊಳ್ಳಬೇಕು.
>
> –ದೇವರಾಯ ನಾಯಕ, ಸಾಮಾಜಿಕ ಹೋರಾಟಗಾರರು, ಸಗಡಗೇರಿ.

ಇನ್ನು ಬಳಲೆ–ಮಾದನಗೇರಿ ಬಳಿ ಮೇಲ್ಸೆತುವೆ ನಿರ್ಮಿಸಿಕೊಡುವುದಾಗಿ ಐಆರ್‌ಬಿ ಕಂಪನಿಯವರು ಭರವಸೆ ನೀಡಿದ್ದರು. ಆದರೆ ಇದುವರೆಗೂ ಕೂಡ ಇಲ್ಲಿ ಮೇಲ್ಸೆತುವೆ ಮಾಡದಿರುವುದರಿಂದ ಸಣ್ಣಪುಟ್ಟ ಅಪಘಾತಗಳು ನಡೆಯುತ್ತಲೇ ಇದೆ. ಜನರು ಕೂಡ ಪ್ರತಿಭಟನೆ ಮಾಡುತ್ತಲೇ ಬರುತ್ತಿದ್ದಾರೆ.

> ಶಿರೂರು ಸಮೀಪ ಐಆರ್‌ಬಿ ಕಂಪನಿಯವರು ರಸ್ತೆ ನಿರ್ಮಾಣಕ್ಕಾಗಿ ಹಲವು ಜಮೀನನ್ನು ಭೂಸ್ವಾಧೀನ ಮಾಡಿಕೊಂಡಿದ್ದಾರೆ. ಆದರೆ ಕೆಲಸ ಮಾತ್ರ ಅಪೂರ್ಣಗೊಳಿಸಿದ್ದಾರೆ. ಇದ–ರಿಂದಾಗಿ ಮಳೆಗಾಲದಲ್ಲಿ ಗದ್ದೆಯಲ್ಲಿಯೇ ನೀರು ನಿಲ್ಲುವಂತಾಗಿದೆ. ಹಾಗೇ ಶಿರೂರಿಗೆ ತೆರಳುವ ವಾಹನಗಳು ಕೂಡ ತೀರಾ ಆತಂಕದಿಂದಲೇ ಚಲಾಯಿಸಬೇಕಾಗಿದೆ. ಹೀಗಾಗಿ ಇಲ್ಲಿಯೂ ಕೂಡ ಅಪಘಾತಗಳು ನಡೆಯುವ ಸಾಧ್ಯತೆಯಿದೆ. ಈ ಬಗ್ಗೆ ತಕ್ಷಣ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕಿದೆ.
>
> –ರಮೇಶ ಗೌಡ
>
> ಗ್ರಾ.ಪಂ. ಮಾಜಿ ಸದಸ್ಯರು ಶಿರೂರು

ಆದರೆ ಆಡಳಿತ ವರ್ಗ ಮಾತ್ರ ಇನ್ನು ಕಣ್ತೆರೆದಿಲ್ಲ.

ಐಆರ್‌ಬಿ ಅವರ ಈ ಬೇಜವಾಬ್ದಾರಿ ಕಾಮಗಾರಿಯ ವಿರುದ್ಧ ಜನಪ್ರತಿನಿಧಿಗಳು ಕೂಡ ಗಟ್ಟಿಯಾಗಿ ವಿರೋಧಿಸುವ ದಿಟ್ಟತನವನ್ನು ತೋರಿಸುತ್ತಿಲ್ಲ ಎಂಬ ಅಸಮಧಾನ ಸಾರ್ವಜನಿಕ ವಲಯದಲ್ಲಿ ಕೇಳಿಬರುವಂತಾಗಿದೆ. ಇನ್ನಾದರೂ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಐಆರ್‌ಬಿ ಕಾಮಗಾರಿ ಪೂರ್ಣ ಪ್ರಮಾಣದಲ್ಲಿ ಮುಗಿಸಲು ತಕ್ಷಣ ಕ್ರಮ ಕೈಗೊಳ್ಳುವ ಅಗತ್ಯವಿದೆ.

# ಕೆಬಿಎನ ವಿವಿ:ಓರಿಯಂಟೇಶನ್ ಕಾರ್ಯಕ್ರಮ

- **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಕೆಬಿಎನ ವಿವಿಯಲ್ಲಿ ಶಿಕ್ಷಣ ನಿಕಾ ಯದಲ್ಲಿ ಬಿ ಎಡ ವಿದ್ಯಾರ್ಥಿಗಳಿಗೆ ಮಂಗಳವಾರ ಓರಿಯೆಂಟಷನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ಉದ್ಘಾಟನೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ಡಾ ನಿಶಾತ ಆರಿಫ್ ಹುಸ್ಸೇನಿ, ಡೀನ ಭಾಷಾ ನಿಕಾಯ ಇವರು ಖಾಜಾ ಶಿಕ್ಷಣ ಸಂಸ್ಥೆಯ ಬಗ್ಗೆ ಹೇಳಿದರು. ವಿದ್ಯಾರ್ಥಿಗಳಿಗೆ ಕಠಿಣ ಶ್ರಮದ ಮಹತ್ವ ತಿಳಿ ಹೇಳಿದರು.

ಇನ್ನೋರ್ವ ಅತಿಥಿ ಡಾ. ಶ್ರೀನಿವಾಸ, ಡೀನ್ ವಾಣಿಜ್ಯ ನಿಕಾಯ್ ಇವರು ವಿದ್ಯಾರ್ಥಿಗಳಿಗೆ ಸ್ಪಷ್ಟ ಗುರಿಯೊಂದಿಗೆ ಅಧ್ಯಯನ ಮಾಡುವಂತೆ ಕಿವಿ ಮಾತು ಹೇಳಿದರು. ಡಾ. ಇಕ್ಬಲ್ ಮಟ್ಟು, ಡೀನ ಶಿಕ್ಷಣ ನಿಕಾಯ ಪ್ರಾಸ್ತಾವಿಕವಾಗಿ ಮಾತನಾಡಿದರು.

ವಿದ್ಯಾರ್ಥಿನಿಯರದ ಅಜರಾ ಅಂಜು ಹಾಗೂ ಸನಾ ಅಂರೀನ ಪ್ರಾರ್ಥಿಸಿದರೆ, ಸಯ್ಯದಾ ಆಯೇಷಾ



ಮುಸ್ಕಾನ ಸ್ವಾಗತಿಸಿದರು. ಸಯ್ಯದಾ ಆಯೇಷಾ ರೂಹಿ ಮತ್ತು ಮುಸ್ಕಾನ ನಿರೂಪಿಸಿದರು. ಡಾ ಸಾಲಿಹಾ ಖಾತುನ ಮತ್ತು ಡಾ ಕುದ್ರತ್ ಉಣ್ಣಿಸಾ ಶೇಕ ವಂದಿಸುದರು.

ಕ್ಯಾಲೀಕತ ವಿಶ್ವ ವಿದ್ಯಾಲಯದ ಡಾ. ಅಬ್ದುಲ್ ಗಫುರ ಹಾಗೂ ರಿಷಿಹುಡ್ ವಿಶ್ವವಿದ್ಯಾಲಯದ ಪ್ರೊ ರೇವಾ ಪರಿಮೋ ಸಂಪಂನ್ಮೂಲ ವ್ಯಕ್ತಿಗಳಾಗಿದ್ದರು.

ಉಪನ್ಯಾಸಕರಾದ ಡಾ ವಡ್ಡನಕೇರಿ, ರಿಯಾಜ ಪಠಾಣ, ಮೆಹಂಬುಬ ಸಿ, ಫಾತಿಮಾ ಬೇಗಂ, ರಝಿಯಾ ಪರ್ವಿನ್ ಸೇರಿದಂತೆ ನಿಕಾಯದ ಎಲ್ಲ ವಿದ್ಯಾರ್ಥಿಗಳು ಹಾಜರಿದ್ದರು.

# ಅಸ್ಲಾಂಮಿಯಾ ಅವರ ಸೇವೆ ಅನನ್ಯ: ಮೇತ್ರಿ

- **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ**

ಸಮಾಜದಲ್ಲಿ ಪ್ರತಿಯೊಬ್ಬರಿಗೂ ಪ್ರೀತಿ ಮಮತೆ ತೋರಿಸುವ ಗುಣ ಮಹಮ್ಮದ್ ಅಸ್ಲಾಂಮಿಯಾ ಅವರು ಹೊಂದಿದ್ದಾರೆ ಎಂದು ಪಟ್ಟಣದ ಸಮಾಜ ಕಾರ್ಯಕರ್ತ ಹಾಗೂ ಉದ್ಯಮಿ ಮಹಮ್ಮದ್ ಅಸ್ಲಾಂಮಿಯಾ ಅವರ 60ನೇ ವರ್ಷದ ಜನ್ಮ ದಿನಾಚರಣೆಯಲ್ಲಿ ಮುಖ್ಯ ಶಿಕ್ಷಕ ಬಸವರಾಜ ಮೇತ್ರೆ ಮಾತನಾಡುತ್ತ ತಿಳಿಸಿದರು. ಅಸ್ಲಾಂಮಿಯಾ ಅವರು ನಿಸ್ವಾರ್ಥದಿಂದ ಸಮಾಜ ಸೇವೆ, ಪರಿಸರ ಸೇವೆ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು. ಪತ್ರಕರ್ತ ರಾಜಕುಮಾರ ಆರ್. ಹಡಪದ ಮಾತನಾಡಿ, ಅಸ್ಲಾಂಮಿಯಾ ಅವರು ಜೀವನದಲ್ಲಿ ಇನ್ನೂ ಉನ್ನತ ಮಟ್ಟಕ್ಕೆ ಹೋಗಿ ಜನರ ಸೇವೆ ಮಾಡಲಿ, ಮಕ್ಕಳನ್ನು ಬಹಳ ಕಾಳಜಿಯಿಂದ ಪ್ರೀತಿಸುತ್ತಾರೆ, ಇವರ ಹತ್ತಿರ ಒಂದು ಸಲ ಒಬ್ಬ ವ್ಯಕ್ತಿ ಬಂದರೆ ಪುನಃ ಮತ್ತೆ ಬರಬೇಕು ಎಂದು ಅನಿಸುತ್ತದೆ. ಅಷ್ಟೊಂದು ಪ್ರೀತಿ ಮಮತೆಯಿಂದ ಮಾತನಾಡುವುದು ನಿಜವಾಗಿಯೂ ಹೆಮ್ಮೆಪಡುವಂತಿದೆ



ಎಂದು ಹೇಳಿದರು. ಮಹಮ್ಮದ್ ಅಸ್ಲಾಂಮಿಯಾ ಮಾತನಾಡಿ, ನನ್ನ ಹುಟ್ಟು ಹಬ್ಬವನ್ನು ಆಚರಣೆ ಮಾಡುತ್ತಿರುವುದು ನನ್ನಗೆ ತುಂಬಾ ಖುಷಿ ತಂದಿದೆ ನಿಮ್ಮೆಲ್ಲರ ಪ್ರೀತಿ, ವಿಶ್ವಾಸ, ಸಹಕಾರ ನನ್ನೊಂದಿಗೆ ಸದಾ ಹೀಗೆ ಇರಲಿ, ಇವತ್ತು ನಿಮ್ಮೆಲ್ಲರ ಪ್ರೀತಿ ವಿಶ್ವಾಸ ಸಹಕಾರದಿಂದ ನನ್ನಗೆ ಪ್ರಶಸ್ತಿಗಳು ದೊರಕಿವೆ ಎಂದು ಸಂತಸ ವ್ಯಕ್ತಪಡಿಸಿದ್ದರು. ಪತ್ರಕರ್ತ ಸಂಘದ ತಾಲೂಕ ಪ್ರಧಾನ ಕಾರ್ಯದರ್ಶಿ ಮುಸ್ತಫಾ ಖಾದ್ರಿ, ಚಂದ್ರಕಾಂತ ಮಠಪತಿ ಮಾತನಾಡಿದರು. ಈ ಸಂದರ್ಭದಲ್ಲಿ ವಿದ್ಯಾಸಾಗರ ಕಟ್ಟಿಮನಿ, ಅಬ್ದುಲ್ ಖದೀರ್ ಲಶ್ಕೇರಿ, ಸೈಯದ್ ಅಜೀಮ, ಸಂಜೀವನ ಭೋಸ್ಲೆ, ಗುಂಡಪ್ಪ ಕೋರಿ, ಬಾಬಾ ಹೂವಿನ ಅಂಗಡಿ, ಮಲ್ಲಿಕಾರ್ಜುನ ತಿರಲಾಪುರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೊದಲ ಸರ್ಕಾರಿ ಪ್ರಾಯೋಜಿತ ಕೃತಕ ಬುದ್ಧಿಮತ್ತೆ ವಿಶ್ವವಿದ್ಯಾಲಯ ಘೋಷಣೆ

- **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಕರ್ನಾಟಕದಲ್ಲಿ ಭಾರತದ ಮೊದಲ ಸರ್ಕಾರಿ ಪ್ರಾಯೋಜಿತ ಕೃತಕ ಬುದ್ಧಿಮತ್ತೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪ್ರಕಟಿಸಿದ್ದಾರೆ.

ಮಂಗಳವಾರ ಬೆಂಗಳೂರಿನ ಬಿಐಇಸಿ ನಲ್ಲಿ ನಡೆದ 'ಗೂಗಲ್ ಐ/ಓ ಕನೆಕ್ಟ್ ಇಂಡಿಯಾ 2026' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಈ ಮಹತ್ವದ ಘೋಷಣೆ ಮಾಡಿದರು.

ಇದರೊಂದಿಗೆ, ಉದ್ಯಮಗಳ ಸಂಶೋಧನೆ ಹಾಗೂ ಅಭಿವೃದ್ಧಿಗಾಗಿ ವಿಶೇಷ 'ಎಐ ಹಬ್' ಅನ್ನು ಇನ್ ಕ್ಯುಬೇಶನ್ ಕೇಂದ್ರವಾಗಿ ಸ್ಥಾಪಿಸಲಾಗುವುದು ಎಂದು ಅವರು ತಿಳಿಸಿದರು.

**ಪ್ರಮುಖ ಘೋಷಣೆಗಳು ಮತ್ತು ಸರ್ಕಾರದ ಉಪಕ್ರಮಗಳು:** ಭಾರತದ ಮೊದಲ ಸರ್ಕಾರಿ ಎಐ ವಿಶ್ವವಿದ್ಯಾಲಯ: ಜಾಗತಿಕ ಮಟ್ಟದ ಎಐ ಪ್ರತಿಭೆಗಳನ್ನು ರೂಪಿಸಲು, ಸುಧಾರಿತ ಸಂಶೋಧನೆಗಳನ್ನು ಉತ್ತೇಜಿಸಲು ಮತ್ತು ಶಿಕ್ಷಣ ಸಂಸ್ಥೆಗಳು, ಉದ್ಯಮ ಹಾಗೂ ಸರ್ಕಾರದ



ನಡುವೆ ಬಲವಾದ ಸಮನ್ವಯ ಸಾಧಿಸಲು ಈ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗುವುದು.

**ಎಐ ಹಬ್:** ನವೋದ್ಯಮಗಳು, ತಂತ್ರಜ್ಞಾನ ಕಂಪನಿಗಳು ಮತ್ತು ಸಂಶೋಧಕರಿಗೆ ಕೃತಕ ಬುದ್ಧಿಮತ್ತೆ ತಂತ್ರಜ್ಞಾನದಲ್ಲಿ ಸಂಶೋಧನೆ ಹಾಗೂ ಅಭಿವೃದ್ಧಿ ಕೈಗೊಳ್ಳಲು ಇದು ಅತ್ಯಾಧುನಿಕ ಇನ್‌ಕ್ಯುಬೇಶನ್ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ.

**ಸರ್ಕಾರದ ದೂರದೃಷ್ಟಿ ಮತ್ತು 'ಎಐ ನೇಟಿವ್' ರಾಜ್ಯದ ಗುರಿ:** ತಂತ್ರಜ್ಞಾನವನ್ನು ಕೇವಲ ಘೋಷಣೆಯಾಗಿ ಉಳಿಸದೆ, ಆಡಳಿತ ಮತ್ತು ಸಾರ್ವಜನಿಕ ಸೇವೆಗಳಲ್ಲಿ ಸಂಪೂರ್ಣವಾಗಿ ಅಳವಡಿಸಿಕೊಂಡು ಕರ್ನಾಟಕವನ್ನು 'ಎಐ ನೇಟಿವ್' (ಕೃತಕ ಬುದ್ಧಿಮತ್ತೆ ಆಧಾರಿತ) ರಾಜ್ಯವನ್ನಾಗಿ ಮಾಡುವುದು ಸರ್ಕಾರದ ಪ್ರಮುಖ ಗುರಿಯಾಗಿದೆ.

**ಶಿಕ್ಷಣ:** ಶಿಕ್ಷಕರಿಗೆ ಹೆಚ್ಚು ಪರಿಣಾಮಕಾರಿಯಾಗಿ ಬೋಧಿಸಲು ಎಐ ಆಧಾರಿತ ಸಹಾಯಕ ಪರಿಕರಗಳ ಬಳಕೆ.

**ಆರೋಗ್ಯ ರಕ್ಷಣೆ:** ಕಾಯಿಲೆಗಳ ಆರಂಭಿಕ ಪತ್ತೆ ಮತ್ತು ಸುಧಾರಿತ ವೈದ್ಯಕೀಯ ಚಿಕಿತ್ಸಾ ಬೆಂಬಲ.

**ಕೃಷಿ:** ರೈತರಿಗೆ ನೈಜ ಸಮಯದ ನಿಖರ ಕೃಷಿ ಸಲಹೆಗಳನ್ನು ನೀಡುವುದು.

**ಸಾರ್ವಜನಿಕ ಸೇವೆಗಳು:** ನಾಗರಿಕರಿಗೆ ಸರ್ಕಾರದ ಸೇವೆಗಳನ್ನು ಅತ್ಯಂತ ವೇಗವಾಗಿ ಮತ್ತು ಗೌರವಯುತವಾಗಿ ತಲುಪಿಸುವುದು.

**ಸಣ್ಣ ಉದ್ಯಮಗಳು:** ಸ್ಥಳೀಯ ಸಣ್ಣ ಉದ್ಯಮಗಳು ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಲು ಎಐ ತಂತ್ರಜ್ಞಾನದ ನೆರವು ನೀಡುವುದು.

**ಗೂಗಲ್ ಸಂಸ್ಥೆಯೊಂದಿಗೆ ಪಾಲುದಾರಿಕೆಗೆ ಕರೆ:** ಕಳೆದ ಎರಡು ದಶಕಗಳಿಂದ ಬೆಂಗಳೂರಿನಲ್ಲಿ ಗೂಗಲ್ ಸಂಸ್ಥೆಯ ಕೊಡುಗೆಯನ್ನು ಶ್ಲಾಘಿಸಿದ ಡಿ.ಕೆ. ಶಿವಕುಮಾರ್ ಅವರು, ಮುಖ್ಯವಾಗಿ 5 ಪ್ರಮುಖ ಕ್ಷೇತ್ರಗಳಲ್ಲಿ ಒಟ್ಟಾಗಿ ಕೆಲಸ ಮಾಡಲು ಗೂಗಲ್ ಸಂಸ್ಥೆಗೆ ಆಹ್ವಾನ ನೀಡಿದರು.

**ಸ್ಥಳೀಯ ಪರಿಹಾರಗಳು:** ಶಿಕ್ಷಣ, ಆರೋಗ್ಯ, ಕೃಷಿ ಮತ್ತು ಸಣ್ಣ ಉದ್ಯಮಗಳಿಗೆ ಸೂಕ್ತವಾದ ಎಐ ಪರಿಕರಗಳನ್ನು ಜಂಟಿಯಾಗಿ ಅಭಿವೃದ್ಧಿಪಡಿಸುವುದು.

**ವಿದ್ಯಾರ್ಥಿಗಳಿಗೆ ಕಲಿಕಾ ಅವಕಾಶ:** ಕರ್ನಾಟಕದಾದ್ಯಂತ ವಿದ್ಯಾರ್ಥಿಗಳಿಗೆ ಎಐ ತರಬೇತಿ ಮತ್ತು ಕಲಿಕಾ ಅವಕಾಶಗಳನ್ನು ವಿಸ್ತರಿಸುವುದು.

**ಜವಾಬ್ದಾರಿಯುತ ಎಐ ಪ್ರಯೋಗಾಲಯ:** ಕರ್ನಾಟಕವನ್ನು ಜಾಗತಿಕ ಮಟ್ಟದ ಸುರಕ್ಷಿತ, ನಂಬಿಕಸ್ಥ ಮತ್ತು ಜವಾಬ್ದಾರಿಯುತ ತಂತ್ರಜ್ಞಾನದ ಪ್ರಯೋಗಾಲಯವನ್ನಾಗಿ ರೂಪಿಸುವುದು.

**ತಂತ್ರಜ್ಞಾನ ಮತ್ತು ಹೂಡಿಕೆ ದೃಷ್ಟಿಕೋನ:** ಭಾರತದ ಒಟ್ಟು ಸಾಫ್ಟ್‌ವೇರ್ ರಫ್ತಿನಲ್ಲಿ ಕರ್ನಾಟಕವು ಸುಮಾರು ಶೇ. 40 ರಷ್ಟು ಕೊಡುಗೆ ನೀಡುತ್ತಿದ್ದು, ಬೆಂಗಳೂರು 17,000 ಕ್ಕೂ ಹೆಚ್ಚು ಸ್ಟಾರ್ಟ್ ಅಪ್‌ಗಳಿಗೆ ಹಾಗೂ ಸಾವಿರಾರು ಜಾಗತಿಕ ಸಾಮರ್ಥ್ಯ ಕೇಂದ್ರಗಳಿಗೆ ನೆಲೆಯಾಗಿದೆ.

# ರೈತರ ಸಂಭ್ರಮದ ಹಬ್ಬ ಮಣ್ಣೆತ್ತಿನ ಅಮವಾಸ್ಯೆ




**ಮಣ್ಣಿನ ಘಮಲು**
● ಸುರೇಶ ಕೆ.ವಿ
ಮುದಗಲ್

ರೈತಾಪಿ ವರ್ಗಕ್ಕೆ ಕಾರ ಹುಣ್ಣಿವೆಯ ನಂತರ ಬರುವ ಮಣ್ಣೆತ್ತಿನ ಅಮಾವಾಸ್ಯೆ ತಮ್ಮ ಬದುಕಿಗೆ ಆಸರೆಯಾಗಿರುವ ಎತ್ತುಗಳನ್ನು ಪೂಜಿಸಿ ಸಂಭ್ರಮ ಪಡುವ ಹಬ್ಬ ಮಣ್ಣೆತ್ತಿನ ಅಮಾವಾಸ್ಯೆಯಾಗಿದೆ.

ಆಧುನಿಕತೆಯ ಹೆಸರಿನಲ್ಲಿ ಸಂಪ್ರದಾಯಗಳು ಮರೆಯಾಗುತ್ತಿರುವ ಇಂದಿನ ಪರಿಸ್ಥಿತಿಯಲ್ಲಿ ಕೆಲವರು ಇಂದಿಗೂ ಮಣ್ಣೆತ್ತಿನ ಅಮಾವಾಸ್ಯೆ ಆಚರಿಸುತ್ತಿರುವುದು ವಿಶೇಷ. ಮುಂಗಾರು ಹಂಗಾಮಿ ಆರಂಭದಲ್ಲಿ ಬರುವ ಹಬ್ಬಗಳಲ್ಲಿ ಬರುವ ಹಬ್ಬವೇ ಮಣ್ಣೆತ್ತಿನ ಅಮಾವಾಸ್ಯೆ, ರೈತಾಪಿ ವರ್ಗಕ್ಕೆ ಮಣ್ಣಿನಿಂದ ತಯಾರಿಸಿದ ಎತ್ತುಗಳನ್ನು ಮಾಡಿ ಭಕ್ತಿಭಾವದಿಂದ ಪೂಜಿಸುವ ಸಂಪ್ರದಾಯಿಕ ಮಣ್ಣಿನ ಎತ್ತುಗಳಾಗಿವೆ. ನಾಡಿನ ಅನ್ನದಾತರ ಬದುಕಿಗೆ ಆಸರೆಯಾಗಿರುವ ರೈತರು ಪೂಜಿಸಿ ಪಡುವ ಕಾರಹುಣ್ಣಿಮೆ ಬರುವ ಮಣ್ಣೆತ್ತಿನ ಅನ್ನದಾತರ ಹಬ್ಬವಾಗಿದೆ. ಮಣ್ಣೆತ್ತಿನ ಹಬ್ಬ ರೈತರ ಸಂಭ್ರಮ ಹಬ್ಬವಾಗಿದೆ. ಮಣ್ಣೆತ್ತಿನ ಅಮವಾಸ್ಯೆ ಕುಂಬಾರ ಮಣ್ಣಿನಿಂದ ಬಸವಣ್ಣನ ಮೂರ್ತಿಗಳನ್ನು ತಂದು ಪೂಜಿಸಲಾಗುತ್ತದೆ.



ಎತ್ತುಗಳನ್ನು ಬಸವಣ್ಣನ ಹಬ್ಬವಂತೂ ಇಡೀ ಸಂಭ್ರಮ ಉತ್ತರ ಕರ್ನಾಟಕ ಭಾಗದಲ್ಲಿ ನಂತರ ಪ್ರತಿಯೊಂದು ಮನೆಯ ಜಗುಲಿ ಅಮವಾಸ್ಯೆ ಮೇಲಿಟ್ಟು ಭಕ್ತಿ ಭಾವದಿಂದ ಪೂಜಿಸಲಾಗುತ್ತದೆ. ಕಾರ ಬರುವ ಹುಣ್ಣಿಮೆ ಮುಗಿದ ನಂತರ ಅತ್ಯಂತ ಬರುವ ಅಮವಾಸ್ಯೆಯಂದು ಸಡಗರ ಕೆಲವರು ಕೆರೆಯಿಂದ ಮಣ್ಣು ತಂದು ತಾವೇ ಸ್ವತಃ ಕೈಯಾರೆ ದಿನದಂದು ಮಣ್ಣಿನಿಂದ ಬಸವಣ್ಣ ಮೂರ್ತಿ ಮನೆಯಲ್ಲಿ ಮಾಡಿ ಪೂಜಿಸುವರು. ಮಾಡಿದ ಮಣ್ಣಿನಿಂದ ಮಾಡಿದ ಬಸವಣ್ಣನಿಗೆ ಭಾರಿ ಬೇಡಿಕೆ ಈ ಉತ್ತರ ಕರ್ನಾಟಕ ಭಾಗದಲ್ಲಿ ಅತ್ಯಂತ ಪೂಜ್ಯ ಭಾವನೆಯಿಂದ ನಾಡಿನ ರೈತಾಪಿ ಕುಟುಂಬದಲ್ಲಿ ಆಚರಿಸಲ್ಪಡುವ ಹಬ್ಬವೇ ಮಣ್ಣೆತ್ತಿನ ಅಮವಾಸ್ಯೆ. ಪಟ್ಟಣದಲ್ಲಿ ಮಣ್ಣಿನ ಬಸವಣ್ಣನ ಮೂರ್ತಿಗಳ ತಯಾರಿಕೆಯಲ್ಲಿ ಕುಂಬಾರ ಮನೆತನ ಸಿದ್ದ ಹಸ್ತರು, ಹಲವಾರು ದಶಕದಿಂದ ಹಿರಿಯರು ಮಾಡಿಕೊಂಡು ಬಂದಿರುವ ಕುಂಬಾರ ವೃತ್ತಿ ಜೀವನದಲ್ಲಿ ಮುದಗಲ್ ಪಟ್ಟಣದ ಹಲವಾರು ದಶಕದಿಂದಲೂ ಪರಿಸರ ಪೂಜಿಸುವರು. ಪರಿಸರ ಸ್ನೇಹಿಯ ಮಣ್ಣಿನಿಂದ ತಯಾರಿಸಿರುವ ಬಸವಣ್ಣನ ಮೂರ್ತಿಗಳನ್ನು ಕುಂಬಾರ ಮನೆತನದ ಹಿರಿಯ ಜೀವಿ ವಿಮಲಾಕ್ಷಮ್ಮ ಗಂ. ಶೇಖರಪ್ಪ ಕುಂಬಾರ ಅವರು ಮಣ್ಣಿನಿಂದ ತಯಾರಿಸುವ ವಿವಿಧ ಬಣ್ಣ ಬಣ್ಣದ ಮಣ್ಣಿನ ಎತ್ತುಗಳಿಗೆ ಭಾರೀ ಬೇಡಿಕೆ.



ಅಮವಾಸ್ಯೆ ದಿನದಂದು ಮಣ್ಣಿನ ಎತ್ತುಗಳನ್ನು ಖರೀದಿಸಲು ಸಾಕಷ್ಟು ಜನ ಇವರಲ್ಲಿಗೆ ಬರುತ್ತಾರೆ.

ಜೆಡಿ ಮಣ್ಣನ್ನು ತಂದು ವಿವಿಧ ಆಕಾರದ ಮಣ್ಣಿನ ಬಸವಣ್ಣನನ್ನು ಮಾಡುವ ಮೂಲಕ ಅದಕ್ಕೆ ವಿವಿಧ ಬಣ್ಣದ ಚಿತ್ತಾರ ಮಾಡಿ ಆಕರ್ಷಕವಾಗಿ ತಯಾರಿ ಮನೆಯಿಂದ ಬಸವಣ್ಣನ ಜೋಡು ಎತ್ತುಗಳನ್ನು ತಂದು ಮನೆಯಲ್ಲಿರುವ ದೇವರ ಜಗುಲಿಯ ಮೇಲಿಟ್ಟು ಮಣ್ಣೆತ್ತಿನ ಅಮವಾಸ್ಯೆಯಂದು ಅತ್ಯಂತ ಭಕ್ತಿಯಿಂದ ಪೂಜಿಸುವರು. ಮಕ್ಕಳು ಜೇಡಿ ಮಣ್ಣಿನಿಂದ ತಯಾರಿಸಿದ ಎತ್ತುಗಳನ್ನು ಎಂಟತ್ತಲ್ಲಿ ಕುಂಟೆತ್ ಬಂದಿದೆ, ದಾನಿಗಳು ಜೋಳ ಹಾಕಿ, ಎಂದು ವಾಡಿಕೆಯಂತೆ ಮನೆ ಮನೆ ತಿರುಗಿ ಸಡಗರ ಸಂಭ್ರಮದಿಂದ ಆಟವಾಡುವರು.


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)